PRGI : KNKAN/26/A0629
ವಿಜಯನಗರ-ಬಳ್ಳಾರಿ-ಕೊಪ್ಪಳ-ರಾಯಚೂರು-ಗದಗ-ಯಾದಗಿರಿ-ದಾವಣಗೆರೆ-ಹಾವೇರಿ-ಕಲಬುರ್ಗಿ- ಜಿಲ್ಲೆಗಳಲ್ಲಿ ಪ್ರಸಾರಿತ
NO.PMG/KA/NK/BLY/04/2026-2028

# ಹೊಸಪೇಟೆ ಧ್ವನಿ

HOSAPETE DHWANI
Kannada Daily morning news paper
ಸ್ವಾಸ್ಥ್ಯ ಸಮಾಜಕ್ಕಾಗಿ ನಮ್ಮ ಧ್ವನಿ
ಕನ್ನಡ ದಿನ ಪತ್ರಿಕೆ
ಸಂಪಾದಕರು ಕೆ.ಪ್ರಕಾಶ ಕಾಕುಬಾಳು
Editor : K. prakash Kakubalu ಮೊ. 9342568684 VIJAYANAGARA

ಸಂಪುಟ : 01 ಸಂಚಿಕೆ : 190 ಗುರುವಾರ ದಿನಾಂಕ : 15-10-2026 ಪುಟ-4 ಬೆಲೆ : 2 ರೂ. E mail: hosapetedhwani32026@gmail.com
Volume 01 Issue : 190 Thursday Date: 15-10-2026 Page-4 Rs : 2 ರೂ. E mail: hosapetedhwani32026@gmail.com

ಸ್ಟಿಂಗ್‌ನ ಸೂತ್ರಧಾರಿ, ಪಾತ್ರಧಾರಿ ಎಲ್ಲಾ ಕಾಂಗ್ರೆಸ್‌ನವರೇ. ತನಿಖೆ ಮಾಡಿದ್ರೆ ಡೈರೆಕ್ಟರ್, ಪ್ರೊಡ್ಯೂಸರ್‌ಗಳು ಅವರೇ ಅಂತ ಗೊತ್ತಾಗುತ್ತೆ. ಕಾಂಗ್ರೆಸ್ ಮರ್ಯಾದೆ ಹೋಗುತ್ತೆ ಅಂತಾ ಮಾತನಾಡುತ್ತಿಲ್ಲ. ಗೃಹ ಸಚಿವರು ಇದರ ಬಗ್ಗೆ ಮಾತನಾಡಬೇಕು. ಸಿದ್ದರಾಮಯ್ಯ ಸಿಎಂ ಸ್ಥಾನದಿಂದ ಇಳಿದ ಮೇಲೆ ಸರಿಯಾಗಿ ನಡೆಸಿಕೊಳ್ಳುತ್ತಿಲ್ಲ. ಇದರ ಸೂತ್ರದಾರಿ ಹಾಗೂ ಪಾತ್ರದಾರಿಗಳು ಎಲ್ಲರೂ ಕಾಂಗ್ರೆಸ್‌ನವರೇ ಇದ್ದಾರೆ.

–ಸಿ.ಟಿ. ರವಿ
ಮಾಜಿ ಸಚಿವ



## ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ: 30,622 ನೋಟಿಸ್‌ಗಳ ವಿತರಣೆ

# 30,081 ವಿಚಾರಣೆ ಪೂರ್ಣ

## ವಿವಿಧ ನಮೂನೆಯಲ್ಲಿ 1.97 ಲಕ್ಷ ಅರ್ಜಿಗಳ ಸಲ್ಲಿಕೆ : ಡಿಸಿ

**ಹೊಸಪೇಟೆ ಧ್ವನಿ ನ್ಯೂಸ್ :**

**ವಿಜಯನಗರ(ಹೊಸಪೇಟೆ):** ಜಿಲ್ಲೆಯಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಒಟ್ಟು 30,622 ನೋಟಿಸ್ ವಿತರಿಸಲಾಗಿದೆ. ಈ ಪೈಕಿ 30,081 ನೋಟಿಸ್‌ಗಳಿಗೆ ಸಂಬಂಧಿಸಿದಂತೆ ವಿಚಾರಣೆ ಪೂರ್ಣಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಮಾಹಿತಿ ನೀಡಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಅವರು ಮಾಹಿತಿ ನೀಡಿದರು.

ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಜೂನ್ 15ರಿಂದ ಸೆಪ್ಟೆಂಬರ್ 23, 2026ರವರೆಗೆ ಮತದಾರರ ಪಟ್ಟಿ ಪರಿಷ್ಕರಣೆ ಸಂಬಂಧ ವಿವಿಧ ನಮೂನೆಗಳಲ್ಲಿ ಒಟ್ಟು 1,97,700 ಅರ್ಜಿಗಳು ಸಲ್ಲಿಕೆಯಾಗಿವೆ. ಇವುಗಳಲ್ಲಿ 1,48,593 ಅರ್ಜಿಗಳು ಆಫ್‌ಲೈನ್ ಮೂಲಕ ಹಾಗೂ 49,107 ಅರ್ಜಿಗಳು ಆನ್‌ಲೈನ್ ಮೂಲಕ ಸಲ್ಲಿಕೆಯಾಗಿವೆ.



ಫಾರ್ಮ್ 6ರಲ್ಲಿ 10,046 ಅರ್ಜಿಗಳ ಅಂಗೀಕಾರ : ಹೊಸ ಮತದಾರರ ನೋಂದಣಿಗೆ ಸಂಬಂಧಿಸಿದ ಫಾರ್ಮ್ 6ರಡಿ ಜಿಲ್ಲೆಯಲ್ಲಿ ಒಟ್ಟು 11,862 ಅರ್ಜಿಗಳು ಸಲ್ಲಿಕೆಯಾಗಿವೆ. ಈ ಪೈಕಿ 10,046 ಅರ್ಜಿಗಳನ್ನು ಅಂಗೀಕರಿಸಿ ಮತದಾರರ ಪಟ್ಟಿಯಲ್ಲಿ ನವೀಕರಿಸಲಾಗಿದೆ. 1,793 ಅರ್ಜಿಗಳು ತಿರಸ್ಕೃತಗೊಂಡಿದ್ದು, 23 ಅರ್ಜಿಗಳು ಬಾಕಿ ಉಳಿದಿವೆ.

ಫಾರ್ಮ್ 7ರಡಿ 1.49 ಲಕ್ಷ ಅರ್ಜಿಗಳ ವಿಲೇವಾರಿ : ಮತದಾರರ ಪಟ್ಟಿಯಲ್ಲಿನ ಹೆಸರುಗಳ ಅಳಿಸುವಿಕೆ ಹಾಗೂ ಆಕ್ಷೇಪಣೆಗಳಿಗೆ ಸಂಬಂಧಿಸಿದ ಫಾರ್ಮ್ 7ರಡಿ ಒಟ್ಟು 1,50,050 ಅರ್ಜಿಗಳು ಸಲ್ಲಿಕೆಯಾಗಿವೆ. ಇವುಗಳಲ್ಲಿ 1,49,463 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದ್ದು, 586 ಅರ್ಜಿಗಳು ತಿರಸ್ಕೃತಗೊಂಡಿವೆ. ಒಂದು ಅರ್ಜಿ ಮಾತ್ರ ಬಾಕಿ ಉಳಿದಿದೆ.

ಫಾರ್ಮ್ 8ರಲ್ಲಿ 34,205 ಅರ್ಜಿಗಳ ನವೀಕರಣ : ಮತದಾರರ ವಿವರಗಳ ತಿದ್ದುಪಡಿ ಹಾಗೂ ಇತರ ಬದಲಾವಣೆಗಳಿಗೆ ಸಂಬಂಧಿಸಿದ ಫಾರ್ಮ್ 8ರಡಿ 35,781 ಅರ್ಜಿಗಳು ಸಲ್ಲಿಕೆಯಾಗಿವೆ. ಈ ಪೈಕಿ 34,205 ಅರ್ಜಿಗಳನ್ನು ಮತದಾರರ ಪಟ್ಟಿಯಲ್ಲಿ ನವೀಕರಿಸಲಾಗಿದ್ದು, 1,536 ಅರ್ಜಿಗಳು ತಿರಸ್ಕೃತಗೊಳಿಸಲಾಗಿದ್ದು, 40 ಅರ್ಜಿಗಳು ಬಾಕಿ ಉಳಿದಿವೆ.

ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಮುಂದುವರಿದಿದ್ದು, ಅರ್ಜಿಗಳ ವಿಲೇವಾರಿ ಮತ್ತು ವಿಚಾರಣೆ ಪ್ರಕ್ರಿಯೆಯ ಮೂಲಕ ಮತದಾರರ ಪಟ್ಟಿಯನ್ನು ಪರಿಷ್ಕರಿಸಲಾಗುತ್ತಿದೆ. ಅಕ್ಟೋಬರ್ 27 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು.

# ಪ್ರತಿ ಟನ್ ಕಬ್ಬಿಗೆ 5500 ಸಾವಿರ ರೂ. ಬೆಲೆ ನಿಗದಿಗೆ ಸರ್ಕಾರಕ್ಕೆ ರೈತ ಸಂಘ ಆಗ್ರಹ

**ಹೊಸಪೇಟೆ ಧ್ವನಿ ನ್ಯೂಸ್ :**

**ಹೊಸಪೇಟೆ:** ಅಗತ್ಯ ಬೆಲೆಗಳು ಗಗನಕ್ಕೇರಿರುವ ಹಿನ್ನೆಲೆಯಲ್ಲಿ ಪ್ರತಿ ಟನ್ ಕಬ್ಬಿಗೆ ರೂ.5500 ಸಾವಿರ ನಿಗದಿಪಡಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗು ಹಸಿರುಸೇನೆಯ(ವಾಸುದೇವ ಮೇಟಿ ಬಣ) ಜಿಲ್ಲಾಧ್ಯಕ್ಷ ಸಿ.ಎ.ಗಾಳೆಪ್ಪ ನೇತೃತ್ವದಲ್ಲಿ ನೂರಾರು ರೈತ ಸಂಘದ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಮುಂದೆ ಬುಧವಾರ ಪ್ರತಿಭಟನೆ ನಡೆಸಿ, ಬಳಿಕ ಡಿಸಿ ಮುಖಾಂತರ ಸರ್ಕಾರಕ್ಕೆ ಮನವಿ ಸಲ್ಲಿಸಿದರು.



ಈ ವೇಳೆ ರೈತ ಸಂಘದ ಜಿಲ್ಲಾಧ್ಯಕ್ಷ ಸಿ.ಎ.ಗಾಳೆಪ್ಪ ಮಾತನಾಡಿ, ಅಕ್ಕಿ, ಬೇಳೆ, ಸಕ್ಕರೆ, ಪೆಟ್ರೋಲ್, ಡೀಜಲ್ ಸೇರಿದಂತೆ ಅಗತ್ಯ ಬೆಲೆಗಳು ಗಗನಕ್ಕೇರುತ್ತಿವೆ. ಈಗ ಟನ್ ಕಬ್ಬಿಗೆ ನಿಗದಿ ಮಾಡಿದ ಹಣ ಯಾತಕ್ಕೂ ಸಾಲುತ್ತಿಲ್ಲ. ಪ್ರತಿಯೊಂದಕ್ಕೂ ಬೆಲೆ ನಿಗದಿ ಇದೆ. ಆದರೆ ರೈತರು ಬೆಳೆದ ಬೆಳೆಗಳಿಗೆ ಮಾತ್ರ ನಿಗದಿ ಬೆಲೆ ಇಲ್ಲ. ಹೀಗಾಗಿ ಪ್ರತಿ ಟನ್ ಕಬ್ಬಿಗೆ ರೂ.5500 ಸಾವಿರ ನಿಗದಿ ಮಾಡಲೇಬೇಕು ಎಂದು ಒತ್ತಾಯಿಸಿದರು.

ರೈತರು ದೇಶದ ಬೆನ್ನೆಲುಬು ಅಂತ ರಾಜಕಾರಿಣಿಗಳು ರೈತರ ಬೆನ್ನುಮೂಳೆ ಮುರಿಯುವ ಕೆಲಸ ಮಾಡುತ್ತಿದ್ದಾರೆ. ರಾಜಕಾರಿಣಿಗಳು ರೈತರಿಗೋಸ್ಕರ ಪಾದಯಾತ್ರೆ ಮಾಡದೇ, ಕೇವಲ ತಮ್ಮ ಸ್ವಾರ್ಥಕ್ಕೆ ಅವರು ರಾಜೀನಾಮೆ ಕೊಡಲಿ, ಇವರು ರಾಜೀನಾಮೆ ಕೊಡಲಿ ಅಂತ ಪಾದಯಾತ್ರೆ ಮಾಡುತ್ತಿರುವುದು ನಾಚಿಕೆ ಗೇಡಿನ ಸಂಗತಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

224 ಎಂಎಲ್‌ಎಗಳಲ್ಲಿ ಯಾರೊಬ್ಬರು ರೈತರಿಗೋಸ್ಕರ 100_200 ಕಿ.ಮೀ.ಪಾದಯಾತ್ರೆ ಮಾಡಿಲ್ಲ. ರೈತರು ತಾವು ಬೆಳೆದ ಕಬ್ಬಿಗೆ ಬೆಲೆ ನಿಗದಿ ಮಾಡುವಂತೆ ರಾಜ್ಯಾದ್ಯಾಂತ ಎಲ್ಲಾ ಟೋಲ್ ಗಳನ್ನು ಬಂದ್ ಮಾಡುವ ಮೂಲಕ ರೈತರ ಶಕ್ತಿ ಏನು ಅಂತ ತೋರಿಸಿಕೊಟ್ಟಿದ್ದಾರೆ. ಇದೇ ರೀತಿ ಪ್ರತಿ ಟನ್ ಕಬ್ಬಿಗೆ ರೂ.5500 ಸಾವಿರ ಬೆಲೆ ನಿಗದಿ ಮಾಡುವವರೆಗೂ ನಮ್ಮ ಹೋರಾಟ ನಿಲ್ಲಲ್ಲ ಅಂತ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾ ಕಾರ್ಯದರ್ಶಿ ವೆಂಕಟೇಶ, ಹೊಸಪೇಟೆ ತಾಲೂಕು ಅಧ್ಯಕ್ಷ ಮಾಳಿಗಿ ಮಂಜುನಾಥ, ಕೊಟ್ಟೂರು ತಾಲೂಕು ಅಧ್ಯಕ್ಷೆ ಸಿ.ರೇಖಾ, ಹಗರಿಬೊಮ್ಮನಹಳ್ಳಿ ತಾಲೂಕು ತಾಲೂಕು ಅಧ್ಯಕ್ಷ ರಮೇಶ, ಹಡಗಲಿ ತಾಲೂಕು ಅಧ್ಯಕ್ಷೆ ಕಲಾವತಿ, ಕಮಲಾಪುರ ಹೋಬಳಿ ಅಧ್ಯಕ್ಷ ಬಸಪ್ಪ, ಮರಿಯಮ್ಮನಹಳ್ಳಿ ಹೋಬಳಿ ಅಧ್ಯಕ್ಷ ಕೆಂಚಪ್ಪ, ದುರುಗಪ್ಪ, ಪರಶುರಾಮ, ಪ್ರಭು ಸೇರಿದಂತೆ ಇತರರು ಇದ್ದರು.

## ಎಸ್ಸಿ-ಎಸ್ಟಿ ಮೀಸಲಾತಿ ವಿಚಾರದಲ್ಲಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿ: ಜೈರಾಮ್ ಒತ್ತಾಯ

# ನೇಮಕಾತಿ ಪ್ರಕ್ರಿಯೆಯಲ್ಲಿ ತೊಂದರೆಗೊಳಗಾದ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಲು ಆಗ್ರಹ

**ಹೊಸಪೇಟೆ ಧ್ವನಿ ನ್ಯೂಸ್ :**

**ಬಳ್ಳಾರಿ :** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಹೆಚ್ಚಳಕ್ಕೆ ಸಂಬಂಧಿಸಿದ ಕಾನೂನು ತೊಡಕುಗಳನ್ನು ನಿವಾರಿಸಲು ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿ, ನೇಮಕಾತಿ ಪ್ರಕ್ರಿಯೆಯಲ್ಲಿ ತೊಂದರೆಗೊಳಗಾದ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಬೇಕು ಎಂದು ಬಳ್ಳಾರಿ ವಕೀಲರ ಸಂಘದ ಮಾಜಿ ಅಧ್ಯಕ್ಷರು ಹಾಗೂ ಹಿರಿಯ ವಕೀಲರಾದ ಜೈರಾಮ್ ಒತ್ತಾಯಿಸಿದರು.



ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್ಸಿ–ಎಸ್ಟಿ ಮೀಸಲಾತಿ ಹೆಚ್ಚಳವು ಈ ಸಮುದಾಯಗಳ ಬಹುದಿನಗಳ ಹೋರಾಟದ ಫಲವಾಗಿದೆ. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮೀಸಲಾತಿ ಹೆಚ್ಚಳಕ್ಕೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳು ಹಾಗೂ 2023ರ ಜನವರಿ 15ರಂದು ಹೊರಡಿಸಲಾದ ರಾಜ್ಯಪತ್ರದ ಹಿನ್ನೆಲೆಯಲ್ಲಿ ಪ್ರಸ್ತುತ ಎದುರಾಗಿರುವ ಕಾನೂನು ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಗಂಭೀರ ಪ್ರಯತ್ನ ನಡೆಸಬೇಕು ಎಂದರು.

ಮೀಸಲಾತಿ ಹೆಚ್ಚಳದಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳಿಗೆ ಶಿಕ್ಷಣ ಹಾಗೂ ಸರ್ಕಾರಿ ಉದ್ಯೋಗಗಳಲ್ಲಿ ಹೆಚ್ಚಿನ ಅವಕಾಶಗಳು ದೊರೆಯುವ ನಿರೀಕ್ಷೆಯಿತ್ತು. ಆದರೆ, ಈ ವಿಚಾರಕ್ಕೆ ಸಂಬಂಧಿಸಿದ ನ್ಯಾಯಾಲಯದ ಆದೇಶಗಳಿಂದ ನೇಮಕಾತಿ ಪ್ರಕ್ರಿಯೆ ಮೇಲೆ ಪರಿಣಾಮ ಉಂಟಾಗಿದ್ದು, ಉದ್ಯೋಗದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳು ಅನಿಶ್ಚಿತತೆಯನ್ನು ಎದುರಿಸುವಂತಾಗಿದೆ ಎಂದು ಹೇಳಿದರು.

ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ಅನ್ಯಾಯವಾಗದಿರಲಿ

ಮೀಸಲಾತಿ ಹೆಚ್ಚಳದ ಆಧಾರದಲ್ಲಿ ವಿವಿಧ ಸರ್ಕಾರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳಲ್ಲಿ ಭಾಗವಹಿಸಿದ್ದ ಅಭ್ಯರ್ಥಿಗಳು, ಅದರಲ್ಲೂ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿರುವವರು ತೊಂದರೆ ಅನುಭವಿಸುವಂತಾಗಬಾರದು. ಹಲವು ವರ್ಷಗಳ ಪರಿಶ್ರಮದ ಬಳಿಕ ಉದ್ಯೋಗದ ನಿರೀಕ್ಷೆಯಲ್ಲಿರುವ ಅಭ್ಯರ್ಥಿಗಳ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರ ಕಾನೂನುಬದ್ಧ ಪರಿಹಾರ ಕಂಡುಕೊಳ್ಳಬೇಕು ಎಂದು ಆಗ್ರಹಿಸಿದರು.

ಸಂಬಂಧಿತ ಆಯೋಗಗಳ ಶಿಫಾರಸುಗಳು, ಕಾನೂನು ಅಂಶಗಳು ಹಾಗೂ ನ್ಯಾಯಾಲಯದ ನಿರ್ದೇಶನಗಳನ್ನು ಸಮಗ್ರವಾಗಿ ಪರಿಶೀಲಿಸಿ ಸರ್ಕಾರ ಮುಂದಿನ ಕ್ರಮ ಕೈಗೊಳ್ಳಬೇಕು. ಸಂವಿಧಾನದ

ಪುಟ- 3

## ಕನ್ನಡ ಸಾಹಿತ್ಯ ಪರಿಷತ್ತಿನ ಉಳಿವು, ಬೆಳವಣಿಗೆಗೆ ಜಾಣಗೆರೆ ವೆಂಕಟರಾಮಯ್ಯ ಸೂಕ್ತ ಅಭ್ಯರ್ಥಿ

# ಕನ್ನಡ–ಕನ್ನಡಿಗ–ಕರ್ನಾಟಕದ ಪರವಾಗಿ ಪರಿಷತ್ತಿನ ಚುನಾವಣೆಗೆ ಸ್ಪರ್ಧೆ; ಸಾಹಿತಿಗಳು, ಕಲಾವಿದರು, ಹೋರಾಟಗಾರರ ಬೆಂಬಲ

**ಹೊಸಪೇಟೆ ಧ್ವನಿ ನ್ಯೂಸ್ :**

**ಬಳ್ಳಾರಿ:** ಕನ್ನಡ ಸಾಹಿತ್ಯ ಪರಿಷತ್ತಿನ ಐತಿಹಾಸಿಕ ಪರಂಪರೆ, ಮೂಲ ಆಶಯಗಳು ಹಾಗೂ ಕನ್ನಡಪರ ಚಟುವಟಿಕೆಗಳ ಉಳಿವು ಮತ್ತು ಬೆಳವಣಿಗೆಗೆ ಸಾಹಿತಿ, ಪತ್ರಕರ್ತ ಹಾಗೂ ನಾಡಪರ ಹೋರಾಟಗಾರ ಜಾಣಗೆರೆ ವೆಂಕಟರಾಮಯ್ಯ ಸೂಕ್ತ ಅಭ್ಯರ್ಥಿಯಾಗಿದ್ದಾರೆ ಎಂದು ಸಾಹಿತಿ ಎಸ್.ಜಿ.ಸಿದ್ದರಾಮಯ್ಯ ಹಾಗೂ ವಸುಂದರಾ ಭೂಪತಿ ಅಭಿಪ್ರಾಯಪಟ್ಟರು.



ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 112 ವರ್ಷಗಳ ಸುದೀರ್ಘ ಇತಿಹಾಸ ಹೊಂದಿರುವ ಕನ್ನಡ ಸಾಹಿತ್ಯ ಪರಿಷತ್ತು ಸಮಸ್ತ ಕನ್ನಡಿಗರ ಹೆಮ್ಮೆಯ ಸಂಸ್ಥೆಯಾಗಿದೆ. ಇದರ ಘನತೆ, ಗೌರವ ಹಾಗೂ ಕನ್ನಡಪರ ಆಶಯಗಳನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗನ ಮೇಲಿದೆ ಎಂದರು.

ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ ಹಾಗೂ ನಾಡಿನ ಅಸ್ಮಿತೆಯ ರಕ್ಷಣೆಗಾಗಿ ನಿರಂತರವಾಗಿ ಶ್ರಮಿಸುವ ನಾಯಕತ್ವದ ಅಗತ್ಯವಿದೆ. ಕನ್ನಡಪರ ಹೋರಾಟಗಳಲ್ಲಿ ತೊಡಗಿಸಿಕೊಂಡಿರುವ ಜಾಣಗೆರೆ ವೆಂಕಟರಾಮಯ್ಯ ಅವರು ಪರಿಷತ್ತಿನ ಚುನಾವಣೆಗೆ ಸ್ಪರ್ಧಿಸಲು ಮುಂದಾಗಿರುವುದು ಮಹತ್ವದ ಬೆಳವಣಿಗೆಯಾಗಿದೆ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತು ಕೇವಲ ಸಾಹಿತ್ಯ ಕಾರ್ಯಕ್ರಮಗಳಿಗೆ ಸೀಮಿತವಾಗದೆ, ಕನ್ನಡಿಗರ ಆಶಯಗಳಿಗೆ ಸ್ಪಂದಿಸುವ ಹಾಗೂ ನಾಡು–ನುಡಿಯ ಜಾಗೃತಿ

ಪುಟ- 3

## ಸರ್ಕಾರಿ ಶಾಲಾ ಮಕ್ಕಳಿಗೆ ಕಳಪೆ ಶೂ ವಿತರಣೆ : ಗುನ್ನಳ್ಳಿ ರಾಘವೇಂದ್ರ ಖಂಡನೆ

**ಹೊಸಪೇಟೆ ಧ್ವನಿ ನ್ಯೂಸ್ :**

**ಕೂಡ್ಲಿಗಿ:** ಸರ್ಕಾರಿ ಶಾಲಾ ಮಕ್ಕಳಿಗೆ ಕಳಪೆ ಗುಣಮಟ್ಟದ ಹಾಗು ಸರಿಯಾದ ಅಳತೆ ಇಲ್ಲದ ಶೂ ವಿತರಣೆಯನ್ನು ಹಿಂಪಡೆದು ಎಲ್ಲಾ ಮಕ್ಕಳಿಗೆ ಹೊಸ ಶೂ ನೀಡಬೇಕೆಂದು ಎಸ್ ಡಿ ಎಂ ಸಿ ಸಮನ್ವಯ ಸಮಿತಿ ರಾಜ್ಯ ಉಪಾಧ್ಯಕ್ಷ ಗುನ್ನಳ್ಳಿ ರಾಘವೇಂದ್ರ ಒತ್ತಾಯಿಸಿದರು.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಗುನ್ನಳ್ಳಿ ರಾಘವೇಂದ್ರ, ಕರ್ನಾಟಕ ಸರ್ಕಾರ ಈ ಬಾರಿ ಸರ್ಕಾರಿ ಶಾಲಾ ಮಕ್ಕಳಿಗೆ ವಿತರಿಸಿರುವ ಶೂಗಳಲ್ಲಿ ತೀವ್ರ ಕಳಪೆ ಗುಣಮಟ್ಟ ಮತ್ತು ಅಳತೆಯ ವ್ಯತ್ಯಾಸ ಕಂಡುಬಂದಿರುವುದು ಈಗಾಗಲೇ ವ್ಯಾಪಕವಾಗಿ ವರದಿಯಾಗಿದೆ ಎಂದು ತಿಳಿಸಿದರು. ಬಹುತೇಕ ಕಡೆ ಮಕ್ಕಳ ಪಾದದ ಅಳತೆಗಿಂತ ದೊಡ್ಡದಾದ ಅಥವಾ ಚಿಕ್ಕದಾದ ಶೂ ನೀಡಲಾಗಿದೆ. ನೀಡಿರುವ ಶೂಗಳ ಅಂಗಾಲು (ಖಟಜ) ತೆಳುವಾಗಿದ್ದು, ಹೊಲಿಗೆ ಬಿಚ್ಚಿಕೊಳ್ಳುತ್ತಿದೆ. ಕೆಲವು ಶಾಲೆಗಳಲ್ಲಿ ಒಂದೇ ಮಗುವಿಗೆ ಎರಡೂ ಎಡಗಾಲಿನ ಅಥವಾ ಬಲಗಾಲಿನ ಶೂ ನೀಡಿದ ಪ್ರಕರಣಗಳೂ ಕೂಡ ವರದಿಯಾಗಿವೆ.ನಮ್ಮ ಮಕ್ಕಳು ಇನ್ನು 6 ತಿಂಗಳು ಶಾಲೆಯಲ್ಲಿ ಕಲಿಯುವುದರಿಂದ ಶೂ ಬಳಸಬೇಕಾಗುತ್ತದೆ. ಈ ಕಳಪೆ ಶೂಗಳನ್ನು ಬಳಸುವುದು ಸಾಧ್ಯವಿಲ್ಲದ ಕಾರಣ, ಬಡ ಮಕ್ಕಳಿಗೆ ಆಗಿರುವ ಅನ್ಯಾಯ ಸರಿಪಡಿಸಲು, ಅಳತೆ ತಪ್ಪಿದ ಮತ್ತು ಕಳಪೆ ಗುಣಮಟ್ಟದ ಶೂಗಳನ್ನು ಕೂಡಲೇ ವಾಪಸ್ ಪಡೆದು, 15 ದಿನಗಳ ಒಳಗೆ ಎಲ್ಲಾ ಮಕ್ಕಳಿಗೆ ಸರಿಯಾದ ಅಳತೆಯ, ಉತ್ತಮ ಗುಣಮಟ್ಟದ ಹೊಸ ಶೂಗಳನ್ನು ಮರು ವಿತರಣೆ ಮಾಡಬೇಕೆಂದು ಎಸ್ ಡಿ ಎಂ ಸಿ ಸಮನ್ವಯ ವೇದಿಕೆ ಒತ್ತಾಯಿಸುತ್ತದೆ ಎಂದು ಹೇಳಿದರು.

ಜೊತೆಗೆ ಕಳಪೆ ಶೂ ಪೂರೈಸಿದ ಗುತ್ತಿಗೆದಾರರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಸಹ ಒತ್ತಾಯಿಸಿದರು.

# ಖಿನ್ನತೆ ಮುಚ್ಚಿಡಬೇಡಿ, ಮುಕ್ತವಾಗಿ ಮಾತನಾಡಿ

## ಡಿಹೆಚ್‌ಒ ಡಾ. ಟಿ. ಲಿಂಗರಾಜು ಕಿವಿಮಾತು

**ಹೊಸಪೇಟೆ ಧ್ವನಿ ನ್ಯೂಸ್ :**

**ವಿಜಯನಗರ(ಹೊಸಪೇಟೆ) :** ದೇಹಕ್ಕೆ ಕಾಯಿಲೆ ಬರುವುದು ಎಷ್ಟು ಸಹಜವೋ, ಮನಸ್ಸಿಗೆ ಆಯಾಸ ಅಥವಾ ಖಿನ್ನತೆ ಬರುವುದು ಕೂಡ ಅಷ್ಟೇ ಸಹಜ. ಇದಕ್ಕೆ ಯಾರೂ ಅಂಜಬೇಕಿಲ್ಲ. ಸಂಕೋಚಪಡದೇ ಮಾತನಾಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಟಿ. ಲಿಂಗರಾಜು ಅಭಿಪ್ರಾಯ ವ್ಯಕ್ತಪಡಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ, ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ವಾರ್ತಾ ಇಲಾಖೆ ಹಾಗೂ ಸಂಕ್ಲಾಪುರದ ಟಿಎಂಎಸ್ ಸೊಸೈಟಿ ಕಾಲೇಜ್ ಆಫ್ ನರ್ಸಿಂಗ್ ಸಹಯೋಗದಲ್ಲಿ ಬುಧವಾರ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ವಿಜಯ ವಿಠಲ ಸಭಾಂಗಣದಲ್ಲಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ವಾಸ್ತವ ಅನುಭವಗಳ ಆಲಿಕೆ, ನೈಜ ಧ್ವನಿಗಳು ನೈಜ ಬದಲಾವಣೆ ಎಂಬ ಈ ಬಾರಿಯ ಘೋಷವಾಕ್ಯದಡಿ ವಿಶ್ವ ಮಾನಸಿಕ ದಿನಾಚರಣೆ ಆಯೋಜಿಸಲಾಗಿದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಎದುರಿಸುತ್ತಿರುವ ಶೈಕ್ಷಣಿಕ ಒತ್ತಡ, ಪರೀಕ್ಷೆಯ ಭಯ, ಭವಿಷ್ಯದ ಚಿಂತೆ ಮತ್ತು ಪೋಷಕರ ನಿರೀಕ್ಷೆಗಳ ಭಾರದ ಬಗ್ಗೆ ತಿಳಿ ಹೇಳಿದ ಅವರು, ಇದರೊಂದಿಗೆ ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆ ಹಾಗೂ ಇತರರೊಂದಿಗೆ ವ್ಯಕ್ತಿಗತಹೋಲಿಕೆಮಾಡಿಕೊಳ್ಳುವುದರಿಂದ ಯುವಜನತೆಯಲ್ಲಿ ಮಾನಸಿಕ ಒತ್ತಡಗಳು ಹೆಚ್ಚುತ್ತಿವೆ. ಸಮಾಜದಲ್ಲಿ ಮಾನಸಿಕ ಖಿನ್ನತೆಯನ್ನು ಮುಚ್ಚಿಡುವ ಅಥವಾ ಅದಕ್ಕೊಂದು ಕಳಂಕವಾಗಿ ನೋಡುವ ಕೆಟ್ಟ ಪದ್ಧತಿಯನ್ನು

ಪುಟ- 3

# ಬಳ್ಳಾರಿ ಜಿಲ್ಲಾ ಪೊಲೀಸರಿಂದ 872 ಪ್ರಕರಣ ದಾಖಲಿಸಿ 3,54,000 ದಂಡ ಸಂಗ್ರಹ

**ಹೊಸಪೇಟೆ ಧ್ವನಿ ನ್ಯೂಸ್ :**

**ಬಳ್ಳಾರಿ:** ಜಿಲ್ಲೆಯಲ್ಲಿ ನಡೆಯುತ್ತಿರುವ ಕಾನೂನು ಬಾಹಿರ ಚಟುವಟಿಕೆ ಮತ್ತು ಸಂಚಾರ ನಿಯಮ ಉಲ್ಲಂಘನೆಯ ವಿರುದ್ಧ ವಿಶೇಷ ಕಾರ್ಯಚರಣೆ ನಡೆಸಿದ ಜಿಲ್ಲೆಯ ಪೊಲೀಸರು ಒಟ್ಟು 872 ಪ್ರಕರಣಗಳನ್ನು ದಾಖಲಿಸಿ, 3,54,000 ರೂಗಳ ದಂಡವನ್ನು ಸಂಗ್ರಹಿಸಿದ್ದಾರೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಸುಮನ್ ಡಿ ಪನ್ನೇಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಜಿಲ್ಲಾ ಪೊಲೀಸ್ ಕಚೇರಿ ಈ ಮಾಹಿತಿಯನ್ನು ಹಂಚಿಕೊಂಡಿದೆ.

ಕಳೆದ ಮೂರು ದಿನಗಳಲ್ಲಿ ಬಳ್ಳಾರಿ ಜಿಲ್ಲೆಯಲ್ಲಿ ಕಾನೂನು ಬಾಹಿರ ಚಟುವಟಿಕೆ ಮತ್ತು ಸಂಚಾರ ನಿಯಮ ಉಲ್ಲಂಘನೆಯ ವಿರುದ್ಧ ವಿಶೇಷ ಕಾರ್ಯಚರಣೆ ನಡೆಸಿ ಸಂಚಾರ ನಿಯಮ ಉಲ್ಲಂಘನೆ ಡಿ.ಎಲ್, ವಿಮಾ, ನೋಂದಣಿ, ಹೆಲ್ಮೆಟ್ ಸೇರಿದಂತೆ ವಿವಿಧ ಸಂಚಾರ ನಿಯಮ ಉಲ್ಲಂಘನೆಯ ವಿರುದ್ಧ 679 ಪ್ರಕರಣ ದಾಖಲಿಸಿ ರೂ 274900 ದಂಡ ಸಂಗ್ರಹಿಸಲಾಗಿದೆ.

ಅದೇ ಪ್ರಕಾರವಾಗಿ ಕೊಪಟ ಕೇಸ್ ನಿಂದ ನಿಷೇಧಿತ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡಿದವರ ವಿರುದ್ಧ 154 ಪ್ರಕರಣಗಳನ್ನು ದಾಖಲಿಸಿ 5300 ರೂಪಾಯಿ, ಪ್ರಕರಣ ದಾಖಲಿಸಿ ದಂಡ ಸಂಗ್ರಹಿಸಲಾಗಿದೆ ಉಳಿದ ಪ್ರಕರಣಗಳಿಗೆ ದಂಡ ಪಾವತಿಸಲು ನ್ಯಾಯಾಲಯಕ್ಕೆ ಕಳುಹಿಸಲಾಗಿದೆ. ಜೂಜಾಟ ನಡೆಯುತ್ತಿದ್ದ 03 ಸ್ಥಳದ ಮೇಲೆ ದಾಳಿ ಮಾಡಿ ರೂ 51270/– ಹಣ ವನ್ನು ಜಪ್ತು ಸಿಕೊಳ್ಳಲಾಗಿದೆ ಮತ್ತು ಅಕ್ರಮ ಮಧ್ಯ ಮಾರಾಟದ ಕೇಂದ್ರಗಳ ಮೇಲೆ ದಾಳಿ ಮಾಡಿ ಅಬಕಾರಿ ನಿಯಮದಂತೆ 11ಪ್ರಕರಣಗಳನ್ನು ದಾಖಲಿಸಿ ರೂ 20055 ಹಣ ಮತ್ತು ರೂ 20,055 ಮೊತ್ತದ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ.

ಎಂದು ಜಿಲ್ಲಾ ಪೊಲೀಸ್ ಅಧಿಕ್ಷಕಿ ಡಾ. ಸುಮನ್ ಡಿ.ಪೆನ್ನೇಕರ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸಪೇಟೆಯಲ್ಲಿ ಕಿತ್ತೂರು ರಾಣಿ ಚನ್ನಮ್ಮ ಜ್ಯೋತಿ ರಥಕ್ಕೆ ಅದ್ದೂರಿ ಸ್ವಾಗತ

**ಹೊಸಪೇಟೆ ಧ್ವನಿ ನ್ಯೂಸ್ :**

**ಹೊಸಪೇಟೆ :** ಐತಿಹಾಸಿಕ ಕಿತ್ತೂರು ಉತ್ಸವದ ಅಂಗವಾಗಿ ನಾಡಿನ ವೀರವನಿತೆ ಕಿತ್ತೂರು ರಾಣಿ ಚನ್ನಮ್ಮ ಅವರ ಜ್ಯೋತಿ ರಥಯಾತ್ರೆ ಬುಧವಾರ ನಗರಕ್ಕೆ ಆಗಮಿಸಿತು. ವೀರಶೈವ ಲಿಂಗಾಯತ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಜ್ಯೋತಿ ರಥಕ್ಕೆ ಭವ್ಯ ಸ್ವಾಗತ ಕೋರಿದರು.

ನಗರಕ್ಕೆ ಆಗಮಿಸಿದ ಜ್ಯೋತಿ ರಥಕ್ಕೆ ಪೂಜೆ ಸಲ್ಲಿಸಿ ಗೌರವ ನಮನ ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಸಮಾಜದ ಅಧ್ಯಕ್ಷ ಗೊಗ್ಗ ಚನ್ನಬಸವರಾಜ್ ಮಾತನಾಡಿ, ರಾಣಿ ಚನ್ನಮ್ಮ ಬ್ರಿಟಿಷರ ವಿರುದ್ಧ ಧೈರ್ಯದಿಂದ ಹೋರಾಡಿ ದೇಶಕ್ಕೆ ಮಾದರಿಯಾಗಿದ್ದಾರೆ. ಅವರ ಹೋರಾಟದ ಇತಿಹಾಸವನ್ನು ಯುವ ಪೀಳಿಗೆಗೆ ತಿಳಿಸಲು ಇಂತಹ ರಥಯಾತ್ರೆಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದರು.

ಕಾರ್ಯಕ್ರಮದಲ್ಲಿ ವೀರಶೈವ ಲಿಂಗಾಯತ ಪಂಚಮಸಾಲಿ ಯುವ ಘಟಕದ ರಾಜ್ಯಾಧ್ಯಕ್ಷ ಕಿಚಡಿ ಕೊಟ್ರೇಶ್, ಮುಖಂಡರಾದ ನೀಲಕಂಠ ಗೌಡ, ಕೊರಿಶೆಟ್ಟಿ ಲಿಂಗಪ್ಪ, ಮಧುರಚನ್ನಶಾಸ್ತ್ರೀ, ಶಿವಲಿಂಗಪ್ಪ, ದೇವರಾಜ್ ಹನುವಳ್ಳಿ, ವೀರೇಶ್ ಸಿದ್ದನಗೌಡ, ವೀರಬಸವ, ಒಪ್ಪತ್ತೆಪ್ಪ, ರೇವಣಸಿದ್ದಪ್ಪ, ಗೌಳಿ ರುದ್ರಪ್ಪ, ಚಂದ್ರಶೇಖರ, ಶಂಭು ಸೇರಿದಂತೆ ವಿವಿಧ ಸಮಾಜದ ಮುಖಂಡರು, ಮಹಿಳೆಯರು, ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.



## ಯೂಟರ್ನ್ ವೇಳೆ ಗೂಡ್ಸ್ ವಾಹನ ಪಲ್ಟಿ, ಕಬ್ಬಿಣದ ಸರಳು ಬಿದ್ದು ಬೈಕ್ ಸವಾರ ದಾರುಣ ಸಾವು

**ಹೈದರಾಬಾದ್:** ಯೂಟರ್ನ್ ವೇಳೆ ಗೂಡ್ಸ್ ವಾಹನ ಪಲ್ಟಿಯಾಗಿ ಅದರ ಮೇಲಿದ್ದ ಕಬ್ಬಿಣದ ಸರಳುಗಳು ಬೈಕ್ ಸವಾರನ ಮೇಲೆ ಬಿದ್ದು ಆತ ಸಾವನ್ನಪ್ಪಿರುವ ಘಟನೆ ವರದಿಯಾಗಿದೆ.

ಹೈದರಾಬಾದ್‌ನ ಬಾಲಾನಗರದಲ್ಲಿ ಈ ಭೀಕರ ಅಪಘಾತ ಸಂಭವಿಸಿದ್ದು, ಅತಿಯಾದ ಭಾರ ಹೊತ್ತು ಸಾಗುತ್ತಿದ್ದ ವಾಹನ ಪಲ್ಟಿಯಾಗಿ, ಅದರಲ್ಲಿದ್ದ ಕಬ್ಬಿಣದ ಪೈಪ್‌ಗಳು ಸ್ಕೂಟರ್ ಸವಾರನ ಮೇಲೆ ಬಿದ್ದ ಪರಿಣಾಮ 56 ವರ್ಷದ ವ್ಯಕ್ತಿಯೊಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಪೊಲೀಸರ ಪ್ರಕಾರ, ಕಬ್ಬಿಣದ ಪೈಪ್‌ಗಳ ಭಾರೀ ಕಟ್ಟುಗಳನ್ನು ಸಾಗಿಸುತ್ತಿದ್ದ ವಾಹನದಲ್ಲಿ ಅವುಗಳನ್ನು ಸಮರ್ಪಕವಾಗಿ ಭದ್ರಪಡಿಸಿರಲಿಲ್ಲ ಎನ್ನಲಾಗಿದೆ.

ಅಲ್ಲದೆ, ವಾಹನದ ಸುರಕ್ಷಿತ ಹೊರೆ ಸಾಮರ್ಥ್ಯಕ್ಕಿಂತ ಹೆಚ್ಚಿನ ಭಾರವನ್ನು ಸಾಗಿಸಲಾಗುತ್ತಿತ್ತು ಎಂದು ಶಂಕಿಸಲಾಗಿದೆ.

ಚಾಲಕ ಯೂಟರ್ನ್ ತೆಗೆದುಕೊಳ್ಳುವಾಗ ವಾಹನದ ಮೇಲಿನ ನಿಯಂತ್ರಣ ಕಳೆದುಕೊಂಡಿದ್ದಾನೆ. ಪರಿಣಾಮ ವಾಹನ ಎಡಭಾಗಕ್ಕೆ ಪಲ್ಟಿಯಾಗಿದೆ. ಇದೇ ಸಂದರ್ಭದಲ್ಲಿ ಪ್ರಕಾಶ್ ಪವಾರ್ ತಮ್ಮ ಸ್ಕೂಟರ್‌ನಲ್ಲಿ ವಾಹನದ ಪಕ್ಕದಲ್ಲೇ ನಿಧಾನವಾಗಿ ಸಾಗುತ್ತಿದ್ದರು.

ವಾಹನ ಪಲ್ಟಿಯಾಗುತ್ತಿದ್ದಂತೆ ಅದರಲ್ಲಿದ್ದ ಕಬ್ಬಿಣದ ಪೈಪ್‌ಗಳ ಕಟ್ಟು ನೇರವಾಗಿ ಪ್ರಕಾಶ್ ಅವರ ಮೇಲೆ ಬಿದ್ದಿದೆ. ಭಾರೀ ಪೈಪ್‌ಗಳಡಿ ಸಿಲುಕಿದ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಅಪಘಾತದ ಸಂಪೂರ್ಣ ಘಟನೆ ಸಮೀಪದ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ವೈರಲ್ ಆಗಿರುವ ವಿಡಿಯೋದಲ್ಲಿ ಪ್ರಕಾಶ್ ಪವಾರ್ ನಿಧಾನವಾಗಿ ಸ್ಕೂಟ–ರ್ ಚಲಾಯಿಸುತ್ತಾ ಯೂಟರ್ನ್ ತೆಗೆದುಕೊಳ್ಳುತ್ತಿದ್ದ ವಾಹನದ ಪಕ್ಕಕ್ಕೆ ಬರುತ್ತಿರುವುದು ಕಂಡುಬಂದಿದೆ.

ವಾಹನ ವೇಗವಾಗಿ ತಿರುವು ತೆಗೆದುಕೊಳ್ಳುವ ವೇಳೆ ಸಮತೋಲನ ಕಳೆದುಕೊಂಡು ಪಲ್ಟಿಯಾಗಿದೆ. ಇದೇ ಸಂದರ್ಭದಲ್ಲಿ ವಾಹನದಲ್ಲಿದ್ದ ಪೈಪ್‌ಗಳು ಪಕ್ಕದಲ್ಲೇ ಚಲಿಸುತ್ತಿದ್ದ ಸ್ಕೂಟರ್ ಸವಾರನ ಮೇಲೆ ಬಿದ್ದ ಪರಿಣಾಮ ದುರಂತ ಸಂಭವಿಸಿದೆ.

ಘಟನೆಗೆ ಸಂಬಂಧಿಸಿದಂತೆ ಬಾಲಾನಗರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ವಾಹನದಲ್ಲಿ ಅತಿಯಾದ ಭಾರವನ್ನು ಸಾಗಿಸಲಾಗುತ್ತಿತ್ತೇ, ಕಬ್ಬಿಣದ ಪೈಪ್‌ಗಳನ್ನು ಸುರಕ್ಷಿತವಾಗಿ ಕಟ್ಟಲಾಗಿತ್ತೇ ಹಾಗೂ ಅಪಘಾತಕ್ಕೆ ಕಾರಣವಾದ ಅಂಶಗಳೇನು ಎಂಬುದರ ಕುರಿತು ತನಿಖೆ ನಡೆಸುತ್ತಿದ್ದಾರೆ.

## ಯಮನಾಗಿ ಬಂದ ಕೆಎಸ್‌ಆರ್‌ಟಿಸಿ ಬಸ್: ಭೀಕರ ಅಪಘಾತದಲ್ಲಿ ಮೂವರ ದುರ್ಮರಣ

**ಬೆಂಗಳೂರು:** ಕೆಎಸ್‌ಆರ್‌ಟಿಸಿ ಬಸ್‌ವೊಂದು ಬೈಕ್ ಮತ್ತು ರಸ್ತೆ ಬದಿ ನಿಂತಿದ್ದ ಕೂಲಿ ಕಾರ್ಮಿಕರಿಗೆ ಗುದ್ದಿದ ಪರಿಣಾಮ ಮೂವರು ಮೃತಪಟ್ಟಿರುವ ಘಟನೆ ಹೆಚ್.ಡಿ.ಕೋಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಹೆಚ್.ಡಿ.ಕೋಟೆ ನಿವಾಸಿ ಎಂ.ಶರೀಫ್ (22) ಮೃತಪಟ್ಟ ಬೈಕ್ ಸವಾರ. ಯಾದಗಿರಿ ಜಿಲ್ಲೆಯ ಕೂಲಿ ಕಾರ್ಮಿಕರಾದ ಸಚಿನ್(22) ಮತ್ತು ಗೋವಿಂದ ರಾಥೋಡ್ (23) ಮೃತಪಟ್ಟ ಕೂಲಿ ಕಾರ್ಮಿಕರು. ಕೆಎಸ್‌ಆರ್‌ಟಿಸಿ ಬಸ್‌ವೊಂದು ಹೆಚ್.ಡಿ.ಕೋಟೆಯಿಂದ ಮೈಸೂರಿಗೆ ಬರುತ್ತಿತ್ತು.

ಶರೀಫ್ ಅವರು ಬೈಕ್‌ನಲ್ಲಿ ಮೈಸೂರು ಕಡೆಯಿಂದ ಹೆಚ್.ಡಿ.ಕೋಟೆಗೆ ಹೋಗುತ್ತಿದ್ದರು. ಪುರ ಎಂಬ ಬಳಿ ಬೈಕ್‌ಗೆ ಬಸ್ ಡಿಕ್ಕಿ ಹೊಡೆದು ನಿಯಂತ್ರಣ ತಪ್ಪಿ ರಸ್ತೆ ಬದಿ ನಿಂತಿದ್ದ ಇಬ್ಬರು ಕೂಲಿ ಕಾರ್ಮಿಕರಿಗೆ ಗುದ್ದಿದೆ.ಪರಿಣಾಮ ಬೈಕ್ ಸವಾರ, ಇಬ್ಬರು ಕೂಲಿ ಕಾರ್ಮಿಕರು ಮೃತಪಟ್ಟಿದ್ದಾರೆ. ಸುದ್ದಿ ತಿಳಿದ ಹೆಚ್.ಡಿ.ಕೋಟೆ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಕಮಿಷನರ್ ಕಚೇರಿ ಹೊರಗೆ ಚಲಿಸುತ್ತಿದ್ದ ಕಾರಿಗೆ ಆಕಸ್ಮಿಕ ಬೆಂಕಿ, ಹೊತ್ತಿ ಉರಿದ ಟೊಯೋಟಾ ಕಾರು



**ಬೆಂಗಳೂರು:** ನಗರದ ಪೊಲೀಸ್ ಕಮಿಷನರ್ ಕಚೇ–ರಿಯ ಹೊರಗೆ ಚಲಿಸುತ್ತಿದ್ದ ಕಾರೊಂದರ ಇಂಜಿನ್‌ನಲ್ಲಿ ದಿಢೀರನೆ ಭೀಕರ ಬೆಂಕಿ ಕಾಣಿಸಿಕೊಂಡು ಭಾಗಶಃ ಸುಟ್ಟುಹೋದ ಘಟನೆ ಇನ್‌ಫೆಂಟ್ರಿ ರಸ್ತೆಯಲ್ಲಿ ನಡೆದಿದೆ. ಸಮಯಪ್ರಜ್ಞೆಯಿಂದ ಚಾಲಕ ತಕ್ಷಣವೇ ಕಾರಿನಿಂದ ಕೆಳಗಿಳಿದ ಕಾರಣ ಜೀವಾಪಾಯದಿಂದ ಪಾರಾಗಿದ್ದಾ–ರೆ.

ಶಬ್ಬೀರ್ ಎಂಬುವವರು ತಮ್ಮ ಟೊಯೋಟಾ ಕಂಪನಿಯ 'ಟೈಸರ್' ಮಾಡೆಲ್ ಕೆಂಪು ಬಣ್ಣದ ಕಾರಿನಲ್ಲಿ ಇನ್‌ಫೆಂಟ್ರಿ ರಸ್ತೆಯ ಮಾರ್ಗವಾಗಿ ಪ್ರಯಾಣ ಮಾಡುತ್ತಿದ್ದರು. ಕಾರಿನಲ್ಲಿ ಒಬ್ಬರೇ ಇದ್ದರು. ಕಮಿಷನರ್ ಕಚೇರಿ ಮುಂಭಾಗ ಬರುತ್ತಿದ್ದಂತೆ ಕಾರಿನ ಇಂಜಿನ್ ಭಾಗದಿಂದ ದಿಢೀರನೆ ದಟ್ಟಹೊಗೆ ಮತ್ತು ಬೆಂಕಿ ಕಾಣಿಸಿಕೊಂಡಿತು. ಇಂಜಿನ್‌ನಲ್ಲಿ ಬೆಂಕಿ ಕಾಣಿಸಿಕೊಂಡ ತಕ್ಷಣವೇ ಅಪಾಯವನ್ನು ಅರಿತ ಮಾಲೀಕ ಶಬ್ಬೀರ್, ತಡಮಾಡದೇ ಕಾರನ್ನು ರಸ್ತೆ ಬದಿಗೆ ನಿಲ್ಲಿಸಿ ತಕ್ಷಣ ಕೆಳಗಿಳಿದು ಸಹಾಯಕ್ಕಾಗಿ ಕೇಳಿಕೊಂಡರು.

ನಡುರಸ್ತೆಯಲ್ಲಿ ಕಾರು ಹೊತ್ತಿ ಉರಿಯುತ್ತಿದ್ದನ್ನು ಕಂಡ ತಕ್ಷಣವೇ ಕರ್ತವ್ಯದಲ್ಲಿದ್ದ ಸಂಚಾರ ಪೊಲೀಸ್ ಸಿಬ್ಬಂದಿ, ಸಾರ್ವಜನಿಕರು ಹಾಗೂ ಸಮೀಪದಲ್ಲಿದ್ದ ಸ್ಪರ್ಶ್ ಆಸ್ಪತ್ರೆಯ ಸಿಬ್ಬಂದಿ ಧಾವಿಸಿ ಬಂದರು. ಆಸ್ಪತ್ರೆ ಹಾಗೂ ಸುತ್ತಮುತ್ತಲ ಕಟ್ಟಡಗಳಲ್ಲಿ ಇದ್ದ 'ಫೈರ್ ಎಕ್ಸ್‌ಟಿಂಗ್ಯುಷರ್' ಬಳಸಿ ಬೆಂಕಿಯನ್ನು ಸಂಪೂರ್ಣವಾಗಿ ಹತೋಟಿಗೆ ತರಲಾಯಿತು.

ಸಮಯಕ್ಕೆ ಸರಿಯಾಗಿ ಬೆಂಕಿ ನಂದಿಸಿದ್ದರಿಂದ ಅಕ್ಕಪಕ್ಕದ ವಾಹನಗಳಿಗೆ ಹಾಗೂ ಸಾರ್ವಜನಿಕರಿಗೆ ಅನಾಹುತ ಸಂಭವಿಸಿಲ್ಲ. ಈ ಬೆಂಕಿ ಅವಘಡದಲ್ಲಿ ಕಾರಿನ ಮುಂಭಾಗದ ಇಂಜಿನ್ ಸಂಪೂರ್ಣವಾಗಿ ಸುಟ್ಟು ಕರಕಲಾಗಿದ್ದು, ಭಾರೀ ಹಾನಿಯಾಗಿದೆ. ಇಂಜಿನ್‌ನಲ್ಲಿ ಶಾರ್ಟ್ ಸರ್ಕ್ಯೂಟ್ ಅಥವಾ ತಾಂತ್ರಿಕ ದೋಷದಿಂದ ಬೆಂಕಿ ಕಾಣಿಸಿಕೊಂಡಿರಬಹುದು ಎಂದು ಶಂಕಿಸಲಾಗಿದ್ದು, ಘಟನೆಗೆ ಸಂಬಂಧಿಸಿದಂತೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

# ಔಷಧಿಗಳ ಮಾರಾಟ ಲಾಭಾಂಶದ ಮಿತಿ ವಿಧಿಸುವುದರಿಂದ ಜನರಿಗೆ 2.5 ಸಾವಿರ ಕೋಟಿ ರೂ.ಉಳಿತಾಯ:ಯು.ಟಿ ಖಾದರ್

**ಬೆಂಗಳೂರು:** ಔಷಧಿಗಳ ಉತ್ಪಾದನೆ ಮತ್ತು ಮಾರಾಟದ ನಡುವಿನ ಲಾಭಾಂಶದ ನಡುವೆ ಮಿತಿ ವಿಧಿಸುವುದರಿಂದ ದೇಶದ ಜನ ಸಾಮಾನ್ಯರಿಗೆ ಸುಮಾರು 2.5 ಸಾವಿರ ಕೋಟಿ ರೂ.ಗಳಷ್ಟು ಹಣ ಉಳಿತಾಯವಾಗಲಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಹೇಳಿದ್ದಾರೆ. ಅರೋಗ್ಯ ಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕ್ಯಾನ್ಸರ್, ಮೂತ್ರಪಿಂಡ, ಹೃದ್ರೋಗ ಸೇರಿದಂತೆ ವಿವಿಧ ಸಮಸ್ಯೆಗಳಿಗೆ ಚಿಕಿತ್ಸೆ ನೀಡುವ ಔಷಧಿಗಳ ಮಾರಾಟ ದರಪಟ್ಟಿ ನಿಗಧಿಯಾಗಿಲ್ಲ. ಹೀಗಾಗಿ ಮನಸ್ಸೋಇಚ್ಛೆ ದರ ವಸೂಲಿ ಮಾಡಲಾಗುತ್ತಿದೆ ಎಂದು ಹೇಳಿದರು.



3 ಸಾವಿರ ರೂ. ಬೆಲೆಯ ಔಷಧಿ 27 ಸಾವಿರ ರೂ.ಗೆ ಮಾರಾಟವಾಗುತ್ತಿದೆ. ಇದಕ್ಕೆ ಶೇ.30ರಷ್ಟು ಲಾಭಾಂಶವನ್ನು ಮಿತಿಗೊಳಿಸಿದರೆ, 4,280 ರೂ.ಗಳಿಗೆ ಮಾರಾಟ ಮಾಡಲು ಸಾಧ್ಯ. ಗ್ರಾಹಕರಿಗೆ ಒಂದು ಔಷಧಿಯ ಮೇಲೆ 21 ಸಾವಿರ ರೂ. ಉಳಿತಾಯವಾಗುತ್ತದೆ. 5,500 ರೂ. ಬೆಲೆಯ ಔಷಧಿ 65 ಸಾವಿರ ರೂ.ಗಳಿಗೆ ಮಾರಾಟವಾಗುತ್ತಿದೆ. ಶೇ.30ರ ದರ ಎಂದಾದರೆ, 6,700 ರೂ.ಗೆ ದೊರೆಯಲಿದೆ. ಯಾವುದೇ ಔಷಧಿ ಶೇ.30ರಷ್ಟು ಲಾಭಾಂಶದ ಮಿತಿಯಲ್ಲಿ ಮಾರಾಟವಾಗಬೇಕೆಂಬ ನಿಯಮ ಇದೆ ಎಂದರು.

ಅದೇ ರೀತಿ ವೈದ್ಯಕೀಯ ಸಲಕರಣೆಗಳಿಗೆ 3 ಕೋಟಿಯಿಂದ 25 ಕೋಟಿ ರೂ.ಗಳವರೆಗೂ ಬೆಲೆ ಇದೆ. ಇದರ ದರದಲ್ಲೂ ಕಡಿವಾಣ ಹಾಕುವ ಅಗತ್ಯ ಇದೆ ಎಂದು ಹೇಳಿದರು. ಈ ನಿಟ್ಟಿನಲ್ಲಿ ನಮ ಅಧಿಕಾರಿಗಳು ನಿರಂತರವಾದ ಕಾರ್ಯಾಚರಣೆ ನಡೆಸಿ 253 ಔಷಧಿಗಳ ಉತ್ಪಾದನಾ ವೆಚ್ಚ ಮತ್ತು ಮಾರಾಟ ದರವನ್ನು ಪಟ್ಟಿ ಮಾಡಿದ್ದಾರೆ. ಅದೇ ರೀತಿ ಮುಂದಿನ ದಿನಗಳಲ್ಲಿ ವೈದ್ಯಕೀಯ ಸಲಕರಣೆಗಳ ದರವನ್ನು ಕೂಡ ನಿಖರವಾಗಿ ಪಟ್ಟಿ ಮಾಡಿ ಮಾಹಿತಿ ಪ್ರಕಟಿಸಲಾಗುವುದು. ಇದರಿಂದ ಆಸ್ಪತ್ರೆಯವರು ಸಲಕರಣೆಗಳ ವೆಚ್ಚ ದುಬಾರಿ ಎಂದು ನೆಪ ಹೇಳಿ ಜನರಿಂದ ಹೆಚ್ಚುವರಿ ಶುಲ್ಕ ಮಾಡಲು ಅವಕಾಶ ಇಲ್ಲದಂತಾಗುತ್ತದೆ ಎಂದರು.

ಚಿಕಿತ್ಸಾ ವೆಚ್ಚ ಮಂಗಳೂರಿನಲ್ಲಿ ಒಂದು ರೀತಿ ಇದ್ದರೆ, ಬೆಂಗಳೂರಿನಲ್ಲಿ ಬೇರೆ ರೀತಿ ಇದೆ. ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಚರ್ಚೆಗಳು ನಡೆಯುತ್ತಿವೆ. ಕೆಪಿಎಂಇ ಆ?ಯಕ್ಟ್‌ಗೆ ತಿದ್ದುಪಡಿ ತರಲು ಚಿಂತನೆ ನಡೆಸಲಾಗಿದೆ ಎಂದರು. ಆಯುಷ್ಮಾನ್ ಭಾರತ್ ಸೇರಿದಂತೆ ಯಾವುದೇ ಸರ್ಕಾರಿ ವಿಮಾ ಯೋಜನೆಗಳ ಫಲಾನುಭವಿಗಳಿಗೆ ನಗದು ರಹಿತ ಚಿಕಿತ್ಸೆ ದೊರೆಯುವ ನಿಟ್ಟಿನಲ್ಲಿಯೂ ಚರ್ಚೆಗಳು ನಡೆಯುತಿವೆ?. ನಿಯಮದಲ್ಲಿ ನಗದು ರಹಿತ ಚಿಕಿತ್ಸೆ ಎಂದು ಉಲ್ಲೇಖಿಸಲಾಗಿದೆ. ಆದರೆ ಆಸ್ಪತ್ರೆಗೆ ಒಮೆ ದಾಖಲಾದ ತಕ್ಷಣ ಇಲ್ಲಸಲ್ಲದ ನೆಪ ಹೇಳಿ ಹೆಚ್ಚುವರಿ ಹಣ ವಸೂಲಿ ಮಾಡುವುದು ಸಾಮಾನ್ಯವಾಗಿದೆ. ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಿಂದಲೂ ಕಾನೂನು ತಿದ್ದುಪಡಿ ತರುತ್ತಿರುವುದಾಗಿ ಸಚಿವರು ತಿಳಿಸಿದರು.

ನಕಲಿ ಔಷಧಿಗಳ ಜಾಲ ಪತ್ತೆಗೆ ಸಂಬಂಧಪಟ್ಟಂತೆ ರಚಿಸಲಾಗಿರುವ ಎಸ್‌ಐಟಿ ಸಮಗ್ರ ತನಿಖೆ ನಡೆಸುತ್ತಿದೆ. ವರದಿ ಪೂರ್ಣಪ್ರಮಾಣದಲ್ಲಿ ಕೈ ಸೇರುವವರೆಗೂ ತಾಳೆಯಿಂದ ಇರುವಂತೆ ಅವರು ಮನವಿ ಮಾಡಿದರು. ಅಡುಗೆ ಎಣ್ಣೆ ಬಳಕೆಯಿಂದ ಉಂಟಾಗುತ್ತಿರುವ ಆರೋಗ್ಯ ಸಮಸ್ಯೆಗಳ ಬಗ್ಗೆ ಕಾಳಜಿವಹಿಸಲಾಗಿದೆ. ಒಂದು ಕಡೆ ಚಿಕಿತ್ಸಾ ವೆಚ್ಚ ಕಡಿಮೆ ಮಾಡುವುದು ಸರ್ಕಾರದ ಆದ್ಯತೆ. ಮತ್ತೊಂದೆಡೆ ಅನಾರೋಗ್ಯಕ್ಕೆ ಕಾರಣವಾಗುವ ಅಂಶಗಳನ್ನು ನಿಯಂತ್ರಿಸಲು ಆಹಾರ ಸುರಕ್ಷತಾ ಇಲಾಖೆ ಜಾಗೃತೆ ವಹಿಸಿದೆ ಎಂದು ತಿಳಿಸಿದರು.

ಈಗಾಗಲೇ ಉಪ್ಪು ಮತ್ತು ಸಕ್ಕರೆಯನ್ನು ಆರೋಗ್ಯಕರ ಪ್ರಮಾಣದಲ್ಲಿ ಜನರಿಗೆ ತಲುಪಿಸಲು ಕ್ರಮ ಕೈಗೊಂಡಿದ್ದೇವೆ. ಮುಂದಿನ ಹಂತದಲ್ಲಿ ಅಡುಗೆ ಎಣ್ಣೆ ಬಳಕೆಯಲ್ಲಿ ಅಪಾಯಕಾರಿ ಪರಿಸ್ಥಿತಿಯನ್ನು ತಡೆಯಲು ಚಿಂತನೆ ನಡೆದಿದೆ. ದೊಡ್ಡ ದೊಡ್ಡ ಹೋಟೆಲ್‌ಗಳಲ್ಲಿ ಒಮೆ ಬಳಸಿದ ಎಣ್ಣೆಯನ್ನು ಮಧ್ಯವರ್ತಿಗಳು ಖರೀದಿಸಿ, ರಿಫೈನ್ ಮಾಡಿ ಕಡಿಮೆ ಬೆಲೆಗೆ ಚಿಕ್ಕ ಚಿಕ್ಕ ಹೋಟೆಲ್‌ಗಳಿಗೆ ತಲುಪಿಸುತ್ತಿದ್ದಾರೆ. ಇದು ಅಪಾಯಕಾರಿ.

ಈ ಹಿನ್ನೆಲೆಯಲ್ಲಿ ಅಡುಗೆ ಎಣ್ಣೆ ಖರೀದಿ ಮತ್ತು ಬಳಕೆಯ ಪ್ರಮಾಣದ ಬಗ್ಗೆ ಕರಾರುವಕ್ಕಾದ ಮಾಹಿತಿ ಕಲೆ ಹಾಕಲು ಪ್ರತ್ಯೇಕ ಆ?ಯಪ್ ರಚಿಸಲಾಗುತ್ತದೆ. ಅದನ್ನು ಆಧರಿಸಿ ಅಡುಗೆ ಎಣ್ಣೆಯ ಮೇಲೆ ನಿಗಾವಹಿಸಲಾಗುವುದು ಎಂದು ಹೇಳಿದರು.

# ಪ್ರಯಾಣಿಕರ ಅನುಕೂಲಕ್ಕಾಗಿ ಮೈಸೂರು ದಸರಾಗೆ ಕೆಎಸ್‌ಆರ್‌ಟಿಯಿಂದ 3000 ವಿಶೇಷ ಬಸ್ ವ್ಯವಸ್ಥೆ

**ಬೆಂಗಳೂರು:** ರಾಜ್ಯದ ಹಾಗೂ ದೇಶದ ವಿವಿಧ ಕಡೆಗಳಿಂದ ದಸರಾ ವೀಕ್ಷಣೆಗೆ ಮೈಸೂರಿಗೆ ಬರುವ ಪ್ರವಾಸಿಗರ ಹಾಗೂ ಸಾಲು ಸಾಲು ರಜೆಗಳ ಹಿನ್ನೆಲೆಯಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯರಸ್ತೆ ಸಾರಿಗೆ ನಿಗಮವು 3000 ವಿಶೇಷ ಬಸ್ ವ್ಯವಸ್ಥೆಯನ್ನು ಕಲ್ಪಿಸಲಿದೆ.



ಪ್ರಸ್ತುತ ಕಾರ್ಯಾಚರಣೆ ಮಾಡಲಾಗುತ್ತಿರುವ ಕರ್ನಾಟಕ ಸಾರಿಗೆ, ರಾಜಹಂಸ, ಸ್ಲೀಪರ್, ಐರಾವತ, ಐರಾವತ ಕ್ಲಬ್‌ಕ್ಲಾಸ್ ಹಾಗೂ ಅಂಬಾರಿ ಕ್ಲಬ್‌ಕ್ಲಾಸ್, ಪಲ್ಲಕ್ಕಿ ಸ್ಲೀಪರ್, ಅಶ್ವಮೇಧ ಬಸ್ ಸೇವೆ ಜೊತೆಗೆ ಹೆಚ್ಚುವರಿಯಾಗಿ 3,000 ಬಸ್‌ಗಳ ವಿಶೇಷ ಸಾರಿಗೆ ಸೇವೆಯನ್ನು ಒದಗಿಸಲಿದೆ. ದಸರಾ ಹಿನ್ನೆಲೆಯಲ್ಲಿ ಅ.16ರಿಂದ ಅ.20ರವರೆಗೆ ಬೆಂಗಳೂರಿನಿಂದ ರಾಜ್ಯ, ಅಂತಾರಾಜ್ಯದ ವಿವಿಧ ಸ್ಥಳಗಳಿಗೆ ಈ ವಿಶೇಷ ಸಾರಿಗೆ ವ್ಯವಸ್ಥೆ ಮಾಡಲಾಗಿದೆ ಎಂದು ಕೆಎಸ್‌ಆರ್‌ಟಿಸಿ ತಿಳಿಸಿದೆ.

ಕೆಂಪೇಗೌಡ ಬಸ್ ನಿಲ್ದಾಣ, ಮೈಸೂರು ರಸ್ತೆ ಬಸ್ ನಿಲ್ದಾಣ ಮತ್ತು ಶಾಂತಿನಗರದ ಬಿಎಂಟಿಸಿ ಬಸ್ ನಿಲ್ದಾಣದಿಂದ ವಿಶೇಷ ಬಸ್‌ಗಳ ಸೇವೆ ದೊರೆಯಲಿದೆ. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಿಜಯನಗರ, ಯಶವಂತಪುರ, ಜಯನಗರ, ಬಸವೇಶ್ವರನಗರ, ದೊಮಲೂರು ಬನಶಂಕರಿ ಹಾಗೂ ಇತರಬಸ್ ನಿಲ್ದಾಣಗಳಿಂದ ಕಾರ್ಯಾಚರಣೆ ಮಾಡಲಾಗುತ್ತದೆ.

ನಂತರ ರಾಜ್ಯದ ಮತ್ತು ಅಂತರರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ಅ.20–21ರಂದು ಪ್ರಯಾಣಿಕರು ಮರಳಿ ಬರಲು ಅನುಕೂಲವಾಗುವಂತೆ ವಿಶೇಷ ಬಸ್ ಸೇವೆ ಕಲ್ಪಿಸಲಾಗುವುದು ಎಂದು ಕೆಎಸ್‌ಆರ್‌ಟಿಸಿ ಪ್ರಕಟಣೆ ತಿಳಿಸಿದೆ. ಮಂಗಳೂರು, ಉಡುಪಿ, ಕುಂದಾಪುರ, ಪುತ್ತೂರು, ಧರ್ಮಸ್ಥಳ, ಕುಕ್ಕೆಸುಬ್ರಹ್ಮಣ್ಯ, ಶೃಂಗೇರಿ, ಹೊರನಾಡು, ಶಿವಮೊಗ್ಗ, ಮಡಿಕೇರಿ, ದಾವಣಗೆರೆ, ಗೋಕರ್ಣ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಕಾರವಾರ, ಬಳ್ಳಾರಿ, ಹೊಸಪೇಟೆ, ಕಲಬುರಗಿ, ರಾಯಚೂರು ಮುಂತಾದ ಸ್ಥಳಗಳಿಗೆ ಹಾಗೂ ನೆರೆ ರಾಜ್ಯಗಳಲ್ಲಿನ ಹೈದರಾಬಾದ್, ವಿಜಯವಾಡ, ನೆಲ್ಲೂರು, ಚೆನ್ನೈ, ಊಟಿ, ಕೊಡೈಕೆನಾಲ್, ಸೇಲಂ, ತಿರುಚಿನಾಪಳ್ಳಿ, ಕುಂಭಕೋಣಂ, ಕೊಯಂಬತ್ತೂರು, ಮಧುರೈ, ಪಣಜಿ, ಮಂತ್ರಾಲಯ, ಪೂನಾ, ಎರ್ನಾಕುಲಂ, ಪಾಲಕ್ಕಾಡ್ ಹಾಗೂ ಇತರೆ ಸ್ಥಳಗಳಿಗೆ ವಿಶೇಷ ಬಸ್ ಸೇವೆ ಕಲ್ಪಿಸಲಾಗುತ್ತಿದೆ.

ಮೈಸೂರು ದಸರಾಗೆ 700 ವಿಶೇಷ ಬಸ್: ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರಿಗೆ ಪ್ರತ್ಯೇಕವಾಗಿ 300 ಹೆಚ್ಚುವರಿ ಬಸ್‌ಗಳು, ಮೈಸೂರಿನ ಸುತ್ತಮುತ್ತಲಿನ ಪ್ರೇಕ್ಷಣೀಯ, ಧಾರ್ಮಿಕ ಹಾಗೂ

ಪ್ರವಾಸಿ ತಾಣಗಳಾದ ಚಾಮುಂಡಿಬೆಟ್ಟ, ಕೆ.ಆರ್.ಎಸ್.ಅಣೆಕಟ್ಟು/ಬೃಂದಾವನ, ಶ್ರೀರಂಗಪಟ್ಟಣ, ನಂಜನಗೂಡು ಮಡಿಕೇರಿ, ಮಂಡ್ಯ, ಮಳವಳ್ಳಿ, ಹೆಚ್.ಡಿ.ಕೋಟೆ, ಚಾಮರಾಜನಗರ, ಹುಣಸೂರು, ಕೆ. ಆರ್.ನಗರ, ಗುಂಡ್ಲುಪೇಟೆ ಇತ್ಯಾದಿ ಸ್ಥಳಗಳಿಗೆ ಸಾರಿಗೆ ಸಂಪರ್ಕ ಕಲ್ಪಿಸಲು 400 ಹೆಚ್ಚುವರಿ ಬಸ್‌ಗಳನ್ನು ಒದಗಿಸಲಾಗುತ್ತದೆ. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಮೈಸೂರಿಗೆ ಫ್ಲೈ ಬಸ್ ಮೂಲಕ ನೇರ ಬಸ್ ಸೇವೆ ದೊರೆಯಲಿವೆ ಎಂದು ಕೆಎಸ್‌ಆರ್‌ಟಿಸಿ ತಿಳಿಸಿದೆ.

# ವಿದ್ಯುತ್ ಸರಬರಾಜು ಕಂಪನಿಗಳ ನಡುವಿನ ಸುಂಕ ವಿವಾದ: 1005 ಕೋಟಿ ರೂ. ಹೊರೆ

**ಬೆಂಗಳೂರು:** ಉಡುಪಿ ಪವರ್ ಕಾರ್ಪೊರೇಷನ್ ಮತ್ತು ಕರ್ನಾಟಕದ ವಿದ್ಯುತ್ ಸರಬರಾಜು ಕಂಪನಿಗಳ ನಡುವಿನ ಸುಂಕ ವಿವಾದ ಈಗ 1,005 ಕೋಟಿ ರೂ. ಮೊತ್ತದ ಆರ್ಥಿಕ ಹೊರೆಯಾಗಿ ಪರಿಣಮಿಸಿದೆ.



ಅದಾನಿ ಪವರ್‌ಗೆ ಪಾವತಿಸಿರುವ ಮೊತ್ತದ ಸಂಪೂರ್ಣ ಮರುಪಡೆ ಯುವಿಕೆಗೆ ಸಂಬಂಧಿಸಿದಂತೆ ನಿಯಂತ್ರಣ ಪ್ರಾಧಿಕಾರಗಳ ಮುಂದೆ ವಿವಾದ ಮುಂದು ವರಿದಿದ್ದು, ಈ ಹೊರೆಯನ್ನು ಅಂತಿಮವಾಗಿ ಯಾರು ಭರಿಸಬೇಕು ಎಂಬ ಪ್ರಶ್ನೆ ಮುನ್ನೆಲೆಗೆ ಬಂದಿದೆ.

ಅದಾನಿ ಪವರ್ ಒಡೆತನದ ಉಡುಪಿ ಪವರ್ ಕಾರ್ಪೊರೇಷನ್‌ನ ವಿದ್ಯುತ್ ದರ ನಿಗದಿ ವಿಚಾರವಾಗಿ ಆರಂಭವಾದ ಕಾನೂನು ಹೋರಾಟ ಹಲವು ವರ್ಷಗಳಿಂದ ಮುಂದುವರಿದಿದೆ.

ಈ ವಿವಾದದಲ್ಲಿ ಕೇಂದ್ರ ವಿದ್ಯುತ್ ನಿಯಂತ್ರಣ ಆಯೋಗ, ವಿದ್ಯುತ್ ಮೇಲನವಿ ನ್ಯಾಯಮಂಡಳಿ ಹಾಗೂ ಸುಪ್ರೀಂ ಕೋರ್ಟ್‌ನ ವಿವಿಧ ಆದೇಶಗಳು ಮಹತ್ವದ ಪಾತ್ರ ವಹಿಸಿವೆ. ವರದಿಯ ಪ್ರಕಾರ, ಅದಾನಿ ಪವರ್ 786 ಕೋಟಿ ಪಾವತಿಸುವಂತೆ ಬೇಡಿಕೆ ಇಟ್ಟಿತ್ತು. ಇದರಲ್ಲಿ 423 ಕೋಟಿ ಕ್ಯಾರಿಯಿಂಗ್ ಕಾಸ್ಟ್ (ಹಿಂದಿನ ಅವಧಿಯ ಬಾಕಿ ಮೊತ್ತಕ್ಕೆ ಸಂಬಂಧಿಸಿದ ವೆಚ್ಚ) ಹಾಗೂ 363 ಕೋಟಿ ಬಡ್ಡಿ ಸೇರಿತ್ತು.

ಆದರೆ, ಪವರ್ ಕಂಪನಿ ಆಫ್ ಕರ್ನಾಟಕ ಮತ್ತು ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳು ಈ ಬೇಡಿಕೆಯನ್ನು ಪ್ರಶ್ನಿಸಿದ್ದವು. ಅವುಗಳ ಲೆಕ್ಕಾಚಾರದ ಪ್ರಕಾರ, ಪಾವತಿಸಬೇಕಾದ ಮೊತ್ತ 419 ಕೋಟಿ ಮಾತ್ರವಾಗಿದ್ದು, ಅದರಲ್ಲಿ 215 ಕೋಟಿ ಕ್ಯಾರಿಯಿಂಗ್ ಕಾಸ್ಟ್ ಅನ್ನು ಈಗಾಗಲೇ ಪಾವತಿಸಲಾಗಿದೆ ಎಂಬ ವಾದವನ್ನು ಮುಂದಿಟ್ಟಿದ್ದವು.

ಆದರೂ, ಕಾನೂನು ಹೋರಾಟ ಮುಂದುವರಿದಿರುವ ಹಿನ್ನೆಲೆಯಲ್ಲಿ ವಿದ್ಯುತ್ ಸರಬರಾಜು ಕಂಪನಿಗಳು ಆಕ್ಷೇಪಣೆಯೊಂದಿಗೆ ಮೊತ್ತವನ್ನು ಪಾವತಿಸಿವೆ. ಲಭ್ಯ ವರದಿಯ ಪ್ರಕಾರ, ಅದಾನಿ ಪವರ್‌ಗೆ ಒಟ್ಟು 1,005 ಕೋಟಿ ಪಾವತಿಸಲಾಗಿದ್ದು, ಇದರಲ್ಲಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ (ಬೆಸ್ಕಾಂ) ಒಂದೇ 456 ಕೋಟಿ ಪಾವತಿಸಿದೆ. ಇದು ಒಟ್ಟು ಮೊತ್ತದ ಸುಮಾರು ಶೇ.45ರಷ್ಟಾಗಿದೆ.

ಉಡುಪಿ ವಿದ್ಯುತ್ ಯೋಜನೆಯ ಸುಂಕ ನಿಗದಿ ವಿಚಾರ 2010ರಿಂದಲೇ ನಿಯಂತ್ರಣ ಪ್ರಾಧಿಕಾರಗಳ ಪರಿಶೀಲನೆಗೆ ಒಳಪಟ್ಟಿದೆ. ನಂತರದ ವರ್ಷಗಳಲ್ಲಿ ಸುಂಕದ ಆದೇಶಗಳು ಪರಿಷ್ಕರಣೆಯಾಗಿದ್ದು, ಬಾಕಿ ಮೊತ್ತಗಳ ಪಾವತಿ ಮತ್ತು ಅವುಗಳ ಮೇಲಿನ ಬಡ್ಡಿ ಲೆಕ್ಕಾಚಾರದಲ್ಲಿ ಭಿನ್ನಾಭಿಪ್ರಾಯಗಳು ಉಂಟಾಗಿವೆ. 2013 ಮತ್ತು 2014ರಲ್ಲಿ ಅಉಜಿ ನೀಡಿದ ನಿರ್ದೇಶನಗಳು, ಬಳಿಕ ಸಿಇಆರ್‌ಸಿ ಕೈಗೊಂಡ ಸುಂಕ ಪರಿಷ್ಕರಣೆಗಳು ಹಾಗೂ ವಿವಿಧ ಅವಧಿಗಳ ಪಾವತಿಗಳು ಈ ವಿವಾದವನ್ನು ಮತ್ತಷ್ಟು ಸಂಕೀರ್ಣಗೊಳಿಸಿವೆ.

ವಿದ್ಯುತ್ ಸರಬರಾಜು ಕಂಪನಿಗಳು ಮುಖ್ಯವಾಗಿ ಸರಳ ಬಡ್ಡಿಯನ್ನು ಮಾತ್ರ ಪಾವತಿಸಬೇಕು; ಚಕ್ರಬಡ್ಡಿಯನ್ನು ವಿಧಿಸುವುದು ಸರಿಯಲ್ಲ ಎಂದು ವಾದಿಸುತ್ತಿವೆ. ಮತ್ತೊಂದೆಡೆ, ವಿವಿಧ ಸುಂಕ ಆದೇಶಗಳ ಪರಿಷ್ಕರಣೆಯಿಂದ ಉಂಟಾದ ವ್ಯತ್ಯಾಸಗಳ ಮೇಲೆ ಕ್ಯಾರಿಯಿಂಗ್ ಕಾಸ್ಟ್ ಪಡೆಯಲು ತಮಗೆ ಅರ್ಹತೆ ಇದೆ ಎಂಬ ನಿಲುವನ್ನು ಅದಾನಿ ಪವರ್ ಮುಂದಿಟ್ಟಿದೆ.

# ತೀವ್ರ ಬರಗಾಲದ ನಡುವೆಯೇ ಸಂಸದರಿಗೆ ರಾಜ್ಯ ಸರ್ಕಾರದಿಂದ 31 ಲಕ್ಷ ರೂ. ವಾಹನಉಡುಗೊರೆ

**ಬೆಂಗಳೂರು:** ಕರ್ನಾಟಕವು ಈ ವರ್ಷ ಹಿಂದೆಂದೂ ಕಾಣದ ತೀವ್ರಬರ ಪರಿಸ್ಥಿತಿಯನ್ನು ಎದುರಿಸುತ್ತಿದ್ದು, ಬೆಳೆ ನಷ್ಟಕ್ಕೆ ಕೇಂದ್ರ ಸರ್ಕಾರದಿಂದ ನೆರವು ಕೋರುತ್ತಿರುವ ಸಂದರ್ಭದಲ್ಲೇ, ರಾಜ್ಯ ಸರ್ಕಾರವು ಸಚಿವರು ಮತ್ತು ಸಂಸದರಿಗೆ ಅಧಿಕೃತ ವಾಹನ ಖರೀದಿಸುವ ಮಿತಿಯನ್ನು ಜಿಎಸ್‌ಟಿ ಸೇರಿ 26 ಲಕ್ಷದಿಂದ 31 ಲಕ್ಷಕ್ಕೆ ಹೆಚ್ಚಿಸಿದೆ.



ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ರಾಜ್ಯ ಶಿಷ್ಟಾಚಾರ) ಹೊರಡಿಸಿರುವ ಆದೇಶದ ಪ್ರಕಾರ, ಪರಿಷ್ಕೃತ ಮಿತಿಯು ಹೊಸ ವಾಹನಗಳ ಖರೀದಿಗೆ ಅನ್ವಯವಾಗಲಿದೆ.

ಸಚಿವರಿಗೆ ವಾಹನ ಸೇರಿದಂತೆ ಹಲವು ಸೌಲಭ್ಯಗಳನ್ನು ಒದಗಿಸಲಾಗುತ್ತದೆ. ಸಂಸದರಿಗೆ ಸಾರಿಗೆ ಸೌಲಭ್ಯ ಕಲ್ಪಿಸುವ ದೇಶದ ಕೆಲವೇ ರಾಜ್ಯಗಳಲ್ಲಿ ಕರ್ನಾಟಕವೂ ಒಂದಾಗಿದೆ. ಈ ಹಿಂದೆ 2022ರಲ್ಲಿ ವಾಹನ ಖರೀದಿ ಮಿತಿಯನ್ನು 23 ಲಕ್ಷದಿಂದ 26 ಲಕ್ಷಕ್ಕೆ ಹೆಚ್ಚಿಸಲಾಗಿತ್ತು.

ಹಿಂದಿನ ಆದೇಶದಲ್ಲಿ ವಾಹನ ಖರೀದಿಯ ಗರಿಷ್ಠ ಮಿತಿಯನ್ನು 26 ಲಕ್ಷಕ್ಕೆ ನಿಗದಿಪಡಿಸಲಾಗಿತ್ತು. ಹಲವು ಸಚಿವರು ಮತ್ತು ಸಂಸದರು ಅದಕ್ಕಿಂತ ಹೆಚ್ಚಿನ ಬೆಲೆಯ ವಾಹನಗಳನ್ನು ಖರೀದಿಸಲು ಮುಂದಾಗುತ್ತಿದ್ದರು. ಇಂತಹ ಸಂದರ್ಭಗಳಲ್ಲಿ ಅನುಮೋದನೆಗಾಗಿ ಕಡತವನ್ನು ಹಣಕಾಸು ಇಲಾಖೆಗೆ ಕಳುಹಿಸಲಾಗುತ್ತಿತ್ತು ಎಂದು ಡಿಪಿಎಆರ್ ಮೂಲಗಳು ತಿಳಿಸಿವೆ. ಹಿರಿಯ ಸಚಿವರೊಬ್ಬರು ಅನಾಮಧೇಯತೆಯ ಷರತ್ತಿನ ಮೇಲೆ ಮಾತನಾಡಿ, ಕಾರುಗಳ ಬೆಲೆ ಏರಿಕೆಯಾಗಿರುವುದರಿಂದ ಖರೀದಿ ಮಿತಿಯನ್ನು ಹೆಚ್ಚಿಸುವುದರಲ್ಲಿ ತಪ್ಪಿಲ್ಲ ಎಂದು ಹೇಳಿದ್ದಾರೆ. ಇಂತಹ ವ್ಯವಸ್ಥೆಯನ್ನು ಜಾರಿಗೆ ತಂದಿರುವುದು ಇದೇ ಮೊದಲಲ್ಲ ಎಂದೂ ತಿಳಿಸಿದ್ದಾರೆ.

ವಾಹನ ಖರೀದಿಯ ಸಂಪೂರ್ಣ ವೆಚ್ಚವನ್ನು ರಾಜ್ಯ ಸರ್ಕಾರವೇ ಭರಿಸಲಿದೆ ಎಂದು ಮೂಲಗಳು ತಿಳಿಸಿವೆ. ವಾಹನವನ್ನು ವೈಯಕ್ತಿಕ ಬಳಕೆಗೆ ಬಳಸಬೇಕೇ ಅಥವಾ ಅಧಿಕೃತ ಕೆಲಸಗಳಿಗೆ ಬಳಸಬೇಕೇ ಎಂಬ ಬಗ್ಗೆ ಯಾವುದೇ ನಿರ್ಬಂಧವಿಲ್ಲ. ಕಾರು ಮೂರು ವರ್ಷ ಹಳೆಯದಾಗಿದ್ದರೆ ಅಥವಾ ಒಂದು ಲಕ್ಷ ಕಿಲೋಮೀಟರ್ ಪ್ರಯಾಣಿಸಿದ್ದರೆ, ಹೊಸ ವಾಹನಕ್ಕಾಗಿ ಅರ್ಜಿ ಸಲ್ಲಿಸಬಹುದು. ಕಾರು ಸರ್ಕಾರಕ್ಕೆ ಸೇರಿದ್ದೇ ಹೊರತು ಅವರಿಗೆ ವೈಯಕ್ತಿಕವಾಗಿ ಸೇರಿದ್ದಲ್ಲ ಎಂದು ಮೂಲಗಳು ತಿಳಿಸಿವೆ.

ರಾಜ್ಯದ 177 ತಾಲೂಕುಗಳಲ್ಲಿ ತೀವ್ರ ಬರ ಪರಿಸ್ಥಿತಿಯಿಂದಾಗಿ ಸುಮಾರು 46,000 ಕೋಟಿ ನಷ್ಟ ಉಂಟಾಗಿದೆ ಎಂದು ಸರ್ಕಾರ ಅಂದಾಜಿಸಿರುವ ಸಂದರ್ಭದಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

ಬರದಿಂದ ಉಂಟಾಗಿರುವ ನಷ್ಟಕ್ಕೆ ಪರಿಹಾರವಾಗಿ ಕೇಂದ್ರ ಸರ್ಕಾರದಿಂದ ಸುಮಾರು 10,000 ಕೋಟಿ ರೂ ನೆರವು ಕೋರುತ್ತಿರುವುದಾಗಿ ಉಪ ಮುಖ್ಯಮಂತ್ರಿ ಜಿ. ಪರಮೇಶ್ವರ ಅವರು ಈ ಹಿಂದೆ ತಿಳಿಸಿದ್ದರು.

## ದೇಶವಿರೋಧಿ ಶಕ್ತಿಗಳಿಂದ ಅಶಾಂತಿ ಸೃಷ್ಟಿಗೆ ಯತ್ನ; ಸಿಜೆಪಿ ಪ್ರತಿಭಟನೆಯಿಂದ ದೂರವಿರಿ: ಮುಸ್ಲಿಮರಿಗೆ ಇಮಾಮ್ ಮುಖ್ಯಸ್ಥ ಕರೆ

**ನವದೆಹಲಿ:** ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಕಾಕ್ರೋಚ್ ಜನತಾ ಪಾರ್ಟಿ(ಸಿಜೆಪಿ) ಬೃಹತ್ ಪ್ರತಿಭಟನೆ ನಡೆಸುತ್ತಿದ್ದು, ಈ ಪ್ರತಿಭಟನೆಯನ್ನು ತಡೆಯಲು ದೆಹಲಿ ಪೊಲೀಸರು ರಾಷ್ಟ್ರ ರಾಜಧಾನಿಯಲ್ಲಿ ಹಲವು ಕಠಿಣ ಕ್ರಮಗಳನ್ನು ತೆಗೆದು–ಕೊಂಡಿದ್ದಾರೆ.



ಈ ಮಧ್ಯೆ, ಸಿಇಸಿ ವಿರುದ್ಧದ ಸಿಜೆಪಿ ನೇತೃತ್ವದ ಪ್ರತಿಭಟನೆಯಿಂದ ದೂರವಿರುವಂತೆ ಪ್ರಮುಖ ಮುಸ್ಲಿಂ ಧರ್ಮಗುರುಯೊಬ್ಬರು ತಮ್ಮ ಸಮುದಾಯದ ಜನತೆಗೆ ಕರೆ ನೀಡಿದ್ದಾರೆ. ಅಲ್ಲದೆ ಮುಸ್ಲಿಮರು ರಾಜಕೀಯ ಉದ್ದೇಶಗಳಿಗಾಗಿ ತಮ್ಮನ್ನು ಬಳಸಿಕೊಳ್ಳುವುದಕ್ಕೆ ಅವಕಾಶ ನೀಡಬಾರದು ಎಂದು ಎಚ್ಚರಿಸಿದ್ದಾರೆ.

ಆಲ್ ಇಂಡಿಯಾ ಇಮಾಮ್ ಸಂಘದ ಮುಖ್ಯ ಇಮಾಮ್ ಉಮರ್ ಅಹ್ಮದ್ ಇಲ್ಯಾಸಿ, ಮುಸ್ಲಿಮರು, ವಿಶೇಷವಾಗಿ ಮಸೀದಿ ಇಮಾಮ್‌ಗಳು, ಪ್ರಸ್ತಾವಿತ ಪ್ರತಿಭಟನೆಗಳಿಂದ ದೂರವಿರುವಂತೆ ಮನವಿ ಮಾಡಿದ್ದಾರೆ.

ಕೆಲವು ಶಕ್ತಿಗಳು ದೇಶದಲ್ಲಿ ಶಾಂತಿಯನ್ನು ಕದಡಲು ಪ್ರಯತ್ನಿಸುತ್ತಿವೆ ಎಂದು ಉಮರ್ ಅಹ್ಮದ್ ಇಲ್ಯಾಸಿ ಆರೋಪಿಸಿದ್ದಾರೆ.

ನಾನು ಎಲ್ಲಾ ಮುಸ್ಲಿಮರಿಗೆ, ವಿಶೇಷವಾಗಿ ಮಸೀದಿಗಳ ಇಮಾಮ್‌ಗಳಿಗೆ ಒಂದು ಮನವಿ ಮತ್ತು ವಿನಂತಿಯನ್ನು ಮಾಡುತ್ತಿದ್ದೇನೆ. ಪ್ರಸ್ತುತ ದೇಶದಲ್ಲಿ ಪರಿಸ್ಥಿತಿ ಯಾವ ರೀತಿ ಎಂದು ನಿಮಗೆ ತಿಳಿದಿದೆ. ಕೆಲವು ದೇಶವಿರೋಧಿ ಶಕ್ತಿಗಳು ನಮ್ಮ ದೇಶದಲ್ಲಿ ಶಾಂತಿಯನ್ನು ಹಾಳು ಮಾಡಲು ಬಯಸುತ್ತಿವೆ ಎಂದು ಇಲ್ಯಾಸಿ ವಿಡಿಯೋ ಸಂದೇಶದಲ್ಲಿ ಹೇಳಿದ್ದಾರೆ.

ನಾನು ಎಲ್ಲಾ ಮುಸ್ಲಿಮರಿಗೆ ಹೇಳಬಯಸುತ್ತೇನೆ, ಸಿಜೆಪಿ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ಯಾವ ರಾಜಕೀಯ ಪಕ್ಷಗಳು ಕರೆ ನೀಡಿವೆಯೋ ಮತ್ತು ಆ ಕರೆಯನ್ನು ನೀಡಿದ ರೀತಿಯನ್ನು ಗಮನಿಸಿದರೆ, ಈ ಪ್ರತಿಭಟನೆಗಳನ್ನು ಸರ್ಕಾರದ ವಿರುದ್ಧ ನಡೆಸಲಾಗುತ್ತಿದೆ ಎಂಬುದು ಸ್ಪಷ್ಟವಾಗುತ್ತದೆ. ಮುಸ್ಲಿಮರೇ, ನಾವು ಕೇವಲ ಬಳಸಿಕೊಳ್ಳುವಂತಹ ವಸ್ತುಗಳಲ್ಲ ಎಂಬುದನ್ನು ನಾನು ನಿಮಗೆ ನೆನಪಿಸಲು ಬಯಸುತ್ತೇನೆ ಎಂದು ಇಮಾಮ್ ಉಮರ್ ಅಹ್ಮದ್ ಇಲ್ಯಾಸಿ ಸೂಚ್ಯವಾಗಿ ಹೇಳಿದ್ದಾರೆ.

## ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಂದಿನಿಂದ ದಸರಾ ಸಂಭ್ರಮ



**ಬೆಳಗಾವಿ:** ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವು ಇಂದಿನಿಂದ ಅ.17 ರವರೆಗೆ ವಾರವಿಡೀ ನಡೆಯುವ ಸಾಂಸ್ಕೃತಿಕ ಉತ್ಸವದೊಂದಿಗೆ ದಸರಾ ಸಂಭ್ರಮಕ್ಕೆ ಸಾಕ್ಷಿಯಾಗಲಿದೆ.

ಟರ್ಮಿನಲ್ 2 ರ ಆಗಮನದ ಮುಂಭಾಗದ ಆವರಣದಲ್ಲಿ ನಡೆಯಲಿರುವ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಹಾಗೂ ಗೊಂಬೆಯಾಟ ಕಲಾವಿದೆ ಅನುಪಮಾ ಹೊಸಕೆರೆ ಅವರು ರೂಪಿಸಿರುವ 'ದಸರಾ ಗೊಂಬೆ' ಪ್ರದರ್ಶನವು ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಲಿದೆ.

ಅಕ್ಟೋಬರ್ 16 ರಂದು ಒಂಬತ್ತನೇ ತಲೆಮಾರಿನ ಕಲಾವಿದ ಗುಂಡುರಾಜು ಮತ್ತು ಅವರ ತಂಡವು ಪ್ರಸ್ತುತಪಡಿಸಲಿರುವ 'ತೊಗಲು ಗೊಂಬೆಯಾಟ'ದ ಮೂಲಕ ರಾಜ್ಯದ ಗೊಂಬೆಯಾಟದ ಸಂಪ್ರದಾಯಗಳನ್ನು ಪ್ರದರ್ಶಿಸಲಾಗುವುದು. ಇದೇ ವೇಳೆ, ದಸರಾ ಸಂದರ್ಭದಲ್ಲಿ ಮೈಸೂರಿಗೆ ಭೇಟಿ ನೀಡುವ ಪ್ರವಾಸಿಗರಿಗಾಗಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು ವಿಶೇಷ ಪ್ರಯಾಣದ ವ್ಯವಸ್ಥೆಗಳನ್ನು ಮಾಡಿದೆ.

ಇದರಲ್ಲಿ 'ಅಂಬಾರಿ' ಡಬಲ್ ಡೆಕ್ಕರ್ ಬಸ್ ಸವಾರಿ ಮತ್ತು ಏಳು ವಿಶೇಷ ಪ್ರವಾಸ ಪ್ಯಾಕೇಜ್‌ಗಳು ಸೇರಿರುತ್ತವೆ. ಅಂಬಾರಿ ಬಸ್‌ಗಳು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ಪ್ರತಿ ಗಂಟೆಗೊಮ್ಮೆ ಸಂಚರಿಸಲಿವೆ ಮತ್ತು ಸಂಜೆ 6.30 ರಿಂದ ರಾತ್ರಿ 9ರವರೆಗೆ ವಿಶೇಷ ದೀಪಾಲಂಕಾರ ಸವಾರಿಗಳನ್ನು ನಡೆಸಲಾಗುತ್ತದೆ.

ಊಟಿ, ಮೈಸೂರು ನಗರದ ಪ್ರೇಕ್ಷಣೀಯ ಸ್ಥಳಗಳು, ಬೇಲೂರು–ಹಳೆಬೀಡು–ಶ್ರವಣಬೆಳಗೊಳ, ಕೊಡಗು, ಶಿವನಸಮುದ್ರ, ನಂಜನಗೂಡು ಹಾಗೂ ಇತರ ಸಾಂಸ್ಕೃತಿಕ ಪರಂಪರೆ, ಪ್ರಕೃತಿ ಮತ್ತು ಧಾರ್ಮಿಕ ಪ್ರವಾಸಿ ತಾಣಗಳನ್ನು ಒಳಗೊಂಡ ಏಳು ವಿಶೇಷ ಪ್ರವಾಸ ಪ್ಯಾಕೇಜ್‌ಗಳನ್ನು ಕೆಎಸ್‌ಟಿಡಿಸಿ ಘೋಷಿಸಿದೆ.

ದಸರಾ ಸಂದರ್ಭದಲ್ಲಿ ಆಗಮಿಸುವ ಪ್ರವಾಸಿಗರಿಗೆ ಮೈಸೂರು ಮತ್ತು ಸುತ್ತಮುತ್ತಲಿನ ಪ್ರವಾಸಿ ತಾಣಗಳನ್ನು ವೀಕ್ಷಿಸುವ ಅವಕಾಶವೂ ಸಿಗಲಿದೆ ಎಂದು ಪ್ರವಾಸೋದ್ಯಮ ಮತ್ತು ಇಂಧನ ಸಚಿವ ಕೆಜೆ ಜಾರ್ಜ್ ತಿಳಿಸಿದ್ದಾರೆ. ಈ ವಿಶೇಷ ಸೇವೆಗಳು ಪ್ರವಾಸಿಗರಿಗೆ ಸಮಗ್ರ ಪ್ರವಾಸದ ಅನುಭವವನ್ನು ಒದಗಿಸುವ ಉದ್ದೇಶವನ್ನು ಹೊಂದಿವೆ ಎಂದು ಅವರು ಹೇಳಿದರು.

## ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ನಿರಾಳ; ಬೆಳಗಾವಿಯ ಹಿಂಡಲಗಾ ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸುವ ನಿರ್ಧಾರ ರದ್ದು

**ಬೆಳಗಾವಿ:** ಅತ್ಯಾಚಾರ ಪ್ರಕರಣವೊಂದರಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಿಂದ ಬೆಳಗಾವಿಯ ಹಿಂಡಲಗಾ ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸುವ ನಿರ್ಧಾರವನ್ನು ಕಾರಾಗೃಹ ಅಧಿಕಾರಿಗಳು ರದ್ದುಗೊಳಿಸಿದ್ದಾರೆ.



ಮೂಲಗಳ ಪ್ರಕಾರ, ಪ್ರಜ್ವಲ್ ರೇವಣ್ಣ ಅವರ ಕೋಣೆಯಲ್ಲಿ ಮೊಬೈಲ್ ಫೋನ್ ಪತ್ತೆಯಾದ ಹಿನ್ನೆಲೆಯಲ್ಲಿ ಅವರನ್ನು ಹಿಂಡಲಗಾ ಜೈಲಿಗೆ ಸ್ಥಳಾಂತರಿಸುವಂತೆ ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಇಲಾಖೆ ಆದೇಶಿಸಿದ ಕೆಲವೇ ಗಂಟೆಗಳ ನಂತರ, ಶುಕ್ರವಾರ ಸಂಜೆ ಅಧಿಕಾರಿಗಳು ಅವರನ್ನು ಪರಪ್ಪನ ಅಗ್ರಹಾರ ಜೈಲಿನಲ್ಲಿಯೇ ಮುಂದುವರಿಸಲು ನಿರ್ಧರಿಸಿದ್ದಾರೆ.

ಸೆಂಟ್ರಲ್ ಕ್ರೈಮ್ ಬ್ರಾಂಚ್ ತಂಡವೊಂದು ಪರಪ್ಪನ ಅಗ್ರಹಾರ ಜೈಲಿನಲ್ಲಿ ನಡೆಸಿದ ಅನಿರೀಕ್ಷಿತ ಪರಿಶೀಲನೆ ವೇಳೆ ಪ್ರಜ್ವಲ್ ಮತ್ತು ಇನ್ನೊಬ್ಬ ವಿಚಾರಣಾಧೀನ ಕೈದಿ ಬಳಿ ಮೊಬೈಲ್ ಹಾಗೂ ಪೆನ್ ಡ್ರೈವ್ ಪತ್ತೆಯಾದ ನಂತರ ಈ ವರ್ಗಾವಣೆಯ ನಿರ್ಧಾರವನ್ನು ಕೈಗೊಳ್ಳಲಾಗಿತ್ತು. ಪರಿಶೀಲನೆಯ ಸಮಯದಲ್ಲಿ ಪೊಲೀಸರು ಚಾರ್ಜರ್ ಮತ್ತು ನೋಟ್‌ಬುಕ್ ಅನ್ನು ಕೂಡ ವಶಪಡಿಸಿಕೊಂಡಿದ್ದು, ಇದು ಜೈಲಿನ ಭದ್ರತೆ ಹಾಗೂ ನಿಷೇಧಿತ ಎಲೆಕ್ಟ್ರಾನಿಕ್ ಸಾಧನಗಳ ಬಳಕೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಈ ವಸ್ತುಗಳು ಪತ್ತೆಯಾದ ಬೆನ್ನಲ್ಲೇ, ಪ್ರಜ್ವಲ್ ಅವರನ್ನು ಹಿಂಡಲಗಾ ಜೈಲಿಗೆ ಸ್ಥಳಾಂತರಿಸುವಂತೆ ಕಾರಾಗೃಹ ಇಲಾಖೆ ಡಿಜಿಪಿ ಅಲೋಕ್‌ಕುಮಾರ್ ಅವರು ಈ ಆದೇಶ ಹೊರಡಿಸಿದ್ದರು ಎಂದು ವರದಿಯಾಗಿದೆ.

ಬೆಳಗಾವಿ ಜೈಲು ಅಧಿಕಾರಿಗಳಿಗೆ ಅಧಿಕೃತ ಇಮೇಲ್ ಕಳುಹಿಸಲಾಗಿತ್ತು ಮತ್ತು ಸೂಕ್ತ ಭದ್ರತೆಯೊಂದಿಗೆ (ಎಸ್ಕಾರ್ಟ್) ಅವರನ್ನು ಸ್ಥಳಾಂತರಿಸಲು ಅಗತ್ಯ ವ್ಯವಸ್ಥೆಗಳನ್ನು ಮಾಡುವಂತೆ ಜೈಲು ಅಧೀಕ್ಷಕರಿಗೆ ಸೂಚಿಸಲಾಗಿತ್ತು.

# ಗೃಹಜ್ಯೋತಿ ಯೋಜನೆ ಫಲಾನುಭವಿಗಳ ಪರಿಶೀಲನೆಗೆ ಅ.31ರವರೆಗೆ ಕಾಲಾವಕಾಶ ವಿಸ್ತರಣೆ

**ಬೆಂಗಳೂರು:** ರಾಜ್ಯ ಸರ್ಕಾರದ ಗೃಹಜ್ಯೋತಿ ಯೋಜನೆಯಡಿ ನೋಂದಣಿಯಾಗಿರುವ ವಿದ್ಯುತ್ ಸ್ಥಾವರಗಳ ಫಲಾನುಭವಿಗಳ ಹೆಚ್ಚುವರಿ ಮಾಹಿತಿ ಸಂಗ್ರಹಿಸಿ, ಸೇವಾಸಿಂಧು ತಂತ್ರಾಂಶದಲ್ಲಿ ದಾಖಲಿಸುವ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸರ್ಕಾರ ಒಂದು ತಿಂಗಳ ಹೆಚ್ಚುವರಿ ಕಾಲಾವಕಾಶ ನೀಡಿದ್ದು, ಈ ಸಂಬಂಧ ಇಂಧನ ಇಲಾಖೆಯು ಆದೇಶ ಹೊರಡಿಸಿದ್ದು, ಪರಿಶೀಲನಾ ಕಾರ್ಯವನ್ನು ಅ.31ರೊಳಗೆ ಪೂರ್ಣಗೊಳಿಸುವಂತೆ ಸೂಚಿಸಿದೆ.

ಈ ಹಿಂದೆ ಜುಲೈ 1ರಿಂದ ಆರಂಭವಾದ ಪರಿಶೀಲನಾ ಕಾರ್ಯವನ್ನು ಮೂರು ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸಲು ಸೂಚಿಸಲಾಗಿತ್ತು. ಬಳಿಕ ಆಗಸ್ಟ್ 31ರಂದು ಹೊರಡಿಸಿದ ಆದೇಶದ ಮೂಲಕ ಒಂದು ತಿಂಗಳ ಹೆಚ್ಚುವರಿ ಕಾಲಾವಕಾಶ ನೀಡಲಾಗಿತ್ತು. ಇದೀಗ ವಿದ್ಯುತ್ ಸರಬರಾಜು ಕಂಪನಿಗಳ ಮನವಿಯ ಮೇರೆಗೆ ಮತ್ತೊಮೆ ಅವಧಿ ವಿಸ್ತರಿಸಲಾಗಿದೆ.

ನಾಲ್ಕು ತಿಂಗಳ ಅವಧಿಯಲ್ಲಿ ಈ ಪ್ರಕ್ರಿಯೆ ಪೂರ್ಣಗೊಳಿಸಬೇಕಿದೆ.

ಗೃಹಜ್ಯೋತಿ ಯೋಜನೆಯಡಿ ನೋಂದಾಯಿಸಿರುವ ವಿದ್ಯುತ್ ಸ್ಥಾವರಗಳಿಗೆ ವಿದ್ಯುತ್ ಸರಬರಾಜು ಕಂಪನಿಗಳ ಮೀಟ–ರ್ ರೀಡರ್‌ಗಳು ಹಾಗೂ ಇತರ ಸಿಬ್ಬಂದಿ ಭೇಟಿ ನೀಡಿ, ಮನೆ ಮಾಲೀಕರು ಅಥವಾ ಬಾಡಿಗೆದಾರರಿಂದ ಹೆಚ್ಚುವರಿ ಮಾಹಿತಿ ಮತ್ತು ಅಗತ್ಯ ದಾಖಲೆಗಳನ್ನು ಸಂಗ್ರಹಿಸಬೇಕಿದೆ.

ಸಂಗ್ರಹಿಸಿದ ಮಾಹಿತಿಯನ್ನು ಸೇವಾಸಿಂಧು ತಂತ್ರಾಂಶದಲ್ಲಿ ದಾಖಲಿಸಿ, ಫಲಾನುಭವಿಗಳ ವಿವರಗಳನ್ನು ಪರಿಶೀಲಿಸುವುದು ಈ ಪ್ರಕ್ರಿಯೆಯ ಉದ್ದೇಶವಾಗಿದೆ. ಗೃಹಜ್ಯೋತಿ ಯೋಜನೆಯ ಸೌಲಭ್ಯವು ಅರ್ಹ ಹಾಗೂ ಜೀವಂತ ಫಲಾನುಭವಿಗಳಿಗೆ ತಲುಪುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಈ ಪರಿಶೀಲನಾ ಕ್ರಮ ಕೈಗೊಂಡಿದೆ.

ಫಲಾನುಭವಿಗಳಾಗಿ ನೋಂದಾಯಿಸಿಕೊಂಡಿರುವ ಮನೆ ಮಾಲೀಕರು ಅಥವಾ ಬಾಡಿಗೆದಾರರು ಮೃತಪಟ್ಟಿರುವುದು, ಬಾಡಿಗೆದಾರರು ಮನೆ ಬದಲಿಸಿರುವುದು, ಮನೆಗಳ ಖರೀದಿ ಮತ್ತು ಮಾರಾಟದ ಬಳಿಕ ದಾಖಲೆಗಳನ್ನು ನವೀಕರಿಸದಿರುವುದು ಸೇರಿದಂತೆ ಹಲವು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದ್ದವು. ಇದಲ್ಲದೆ, ಮನೆಗಳಿಗೆ ಬೀಗ ಹಾಕಿರುವುದು, ಫಲಾನುಭವಿಗಳ ಮಾಹಿತಿ ಲಭ್ಯವಾಗದಿರುವುದು ಕಂಡುಬಂದಿದೆ.

# ಹರಳಹಳ್ಳಿ ಬಳಿ 146 ಮೆಟ್ರಿಕ್ ಟನ್ ಮರಳು ಜಪ್ತಿ: ಮರಳು ಸಾಗಿಸಲು ವಾಹನಗಳಿಲ್ಲದೆ ನದಿತೀರದಲ್ಲೇ ಬೀಡುಬಿಟ್ಟ ಅಧಿಕಾರಿಗಳು



**ಹಾವೇರಿ:** ತಾಲೂಕಿನ ಗುತ್ತಲ ಹೋಬಳಿಯ ಹರಳಹಳ್ಳಿ ಗ್ರಾಮದ ಸಮೀಪ ತುಂಗಭದ್ರಾ ನದಿತೀರದಲ್ಲಿ ಅಕ್ರಮವಾಗಿ ಸಂಗ್ರಹಿಸಿಡಲಾಗಿದ್ದ ಸುಮಾರು 146 ಮೆಟ್ರಿಕ್ ಟನ್ ಮರಳನ್ನು ಕಂದಾಯ ಇಲಾಖೆ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ.

ನದಿ ತೀರದಲ್ಲಿ ಅಕ್ರಮವಾಗಿ ಮರಳು ಸಂಗ್ರಹಿಸಿರುವ ಕುರಿತು ಮಾಹಿತಿ ಪಡೆದ ಅಧಿಕಾರಿಗಳು ಅ.9ರಂದು ಬೆಳಿಗ್ಗೆ ಕಾರ್ಯಾಚರಣೆ ಆರಂಭಿಸಿದರು. ಈ ವೇಳೆ ಅಧಿಕಾರಿಗಳು ಸ್ಥಳಕ್ಕೆ ತೆರಳುತ್ತಿದ್ದಂತೆ ಮರಳು ಸಂಗ್ರಹಿಸಿದ್ದ ಆರೋಪಿಗಳು ಪರಾರಿಯಾಗಿದ್ದಾರೆ. ಹೀಗಾಗಿ ಮರಳು ಸಂಗ್ರಹಿಸಿ ದವರ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾಗಿಲ್ಲ.

ಹಾವೇರಿ ತಹಸೀಲ್ದಾರ್ ಶರಣಮ್ಮ ಅವರ ನೇತೃತ್ವದಲ್ಲಿ ಗುತ್ತಲ ಹೋಬಳಿಯ ಕಂದಾಯ ನಿರೀಕ್ಷಕ ರವೀಂದ್ರ ಮಲ್ಲಾಡದ ಹಾಗೂ ಗ್ರಾಮ ಆಡಳಿತ ಅಧಿಕಾರಿಗಳಾದ ಪ್ರಕಾಶ್ ಉಜ್ಜಿನಿ, ಹೊನ್ನಪ್ಪ, ಪ್ರಶಾಂತ್, ವೀರೇಶ್, ಲಿಂಗರಾಜ ಮತ್ತು ವಿನಾಯಕ ಅವರ ತಂಡ ಅ.9ರ ಬೆಳಿಗ್ಗೆ 7 ಗಂಟೆಯಿಂದ ಕಾರ್ಯಾಚರಣೆ ನಡೆಸಿತು.

ಜಪ್ತಿ ಮಾಡಿದ ಮರಳನ್ನು ಸಾಗಿಸಲು ತಕ್ಷಣ ಟಿಪ್ಪರ್, ಲಾರಿ ಹಾಗೂ ಜೆಸಿಬಿ ಯಂತ್ರಗಳು ಲಭ್ಯ ವಾಗದ ಕಾರಣ ಅಧಿಕಾರಿಗಳು ರಾತ್ರಿಯಿಡೀ ನದಿತೀರದಲ್ಲೇ ಬೀಡುಬಿಟ್ಟು ಮರಳಿನ ಮೇಲೆ ನಿಗಾ ವಹಿಸಿದರು. ಬಳಿಕ ಅ.10ರಂದು ಬೆಳಗಿನ ಜಾವ ಸುಮಾರು 3 ಗಂಟೆಗೆ ಎರಡು ಜೆಸಿಬಿ ಯಂತ್ರಗಳು ಹಾಗೂ ಎರಡು ಲಾರಿಗಳ ನೆರವಿನಿಂದ ಮರಳನ್ನು ಸಾಗಿಸಿ ಪೊಲೀಸ್ ಸುಪರ್ದಿಗೆ ಒಪ್ಪಿಸ ಲಾಯಿತು.

ನದಿತೀರದಿಂದ ಮತ್ತೆ ಅಕ್ರಮವಾಗಿ ಮರಳು ಸಾಗಣೆ(ಖಚಿಟಿಜ ಒಟಿಟಿಟಿರ) ನಡೆಯದಂತೆ ತಡೆಯುವ ಉದ್ದೇಶದಿಂದ ಮರಳು ಸಾಗಿಸುವ ರಸ್ತೆಗಳಲ್ಲಿ ಕಂದಕಗಳನ್ನು ನಿರ್ಮಿಸಲಾಗಿದೆ. ಈ ಮೂಲಕ ಅಕ್ರಮ ಮರಳು ಸಾಗಣೆಗೆ ಕಡಿವಾಣ ಹಾಕಲು ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ.

ಕಾರ್ಯಾಚರಣೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಸಹಕರಿಸಿದರು.

# ವ್ಯಕ್ತಿ ಬಂಧನ; ಬಂದೂಕು ಹಾಗೂ 146 ನಾಡಬಾಂಬ್‌ಗಳು ಜಪ್ತಿ

**ಬೆಂಗಳೂರು:** ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಬಟ್ಲಹಳ್ಳಿ ಠಾಣೆ ಪೊಲೀಸರು ಕಾರ್ಯಾಚರಣೆ ನಡೆಸಿ ವ್ಯಕ್ತಿಯೊಬ್ಬನನ್ನು ಬಂಧಿಸಿ ಒಂದು ನಾಡ ಬಂದೂಕು ಹಾಗೂ 146 ನಾಡ ಬಾಂಬ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬೋಡಗುಂಡ್ಲಹಳ್ಳಿ ಗ್ರಾಮದ ನರಸಿಂಹಪ್ಪ (35) ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ.ಬೋಡಗುಂಡ್ಲಹಳ್ಳಿ ಗ್ರಾಮದ ಮನೆಯೊಂದರಲ್ಲಿ ಅಕ್ರಮವಾಗಿ ಆಯುಧಗಳು ಹಾಗೂ ನಾಡ ಬಾಂಬ್‌ಗಳನ್ನು ಸಂಗ್ರಹಿಸಿಡಲಾಗಿದೆ ಎಂಬ ಖಚಿತ ಮಾಹಿತಿ ಪೊಲೀಸರಿಗೆ ಲಭಿಸಿದೆ.ಈ ಮಾಹಿತಿ ಆಧಾರದ ಮೇಲೆ ಕೆಂಚರ್ಲಹಳ್ಳಿ ಠಾಣೆ ಇನ್ಸ್‌ಪೆಕ್ಟರ್ ನಾರಾಯಣಸ್ವಾಮಿ ಮತ್ತು ಬಟ್ಲಹಳ್ಳಿ ಠಾಣೆ ಸಬ್ ಇನ್ಸ್ ಪೆಕ್ಟರ್ ಶಿವಕುಮಾರ್ ಅವರ ನೇತೃತ್ವದ ಸಿಬ್ಬಂದಿ ತಂಡ ಮನೆ ಮೇಲೆ ದಾಳಿ ಮಾಡಿದೆ. ದಾಳಿ ಸಂದ ರ್ಭದಲ್ಲಿ ಒಂದು ನಾಡ ಬಂದೂಕು ಮತ್ತು ಭಾರಿ ಪ್ರಮಾಣದ ನಾಡ ಬಾಂಬ್‌ಗಳನ್ನು ಸಂಗ್ರಹಿಸಿಟ್ಟಿರುವುದು ಕಂಡು ಬಂದ ಹಿನ್ನಲೆಯಲ್ಲಿ ನರಸಿಂಹಪ್ಪನನ್ನು ಬಂಧಿಸಿ ಅವುಗಳನ್ನೆಲ್ಲಾ ವಶಪಡಿಸಿ ಕೊಂಡಿದ್ದಾರೆ.

ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಬಂಧಿತ ನಾಗಿರುವ ನರಸಿಂಹಪ್ಪನನ್ನು ತೀವ್ರ ವಿಚಾರಣೆಗೆ ಒಳಪಡಿಸಿ, ಈ ನಾಡ ಬಾಂಬ್‌ಗಳು ಹಾಗೂ ನಾಡ ಬಂದೂಕು ಎಲ್ಲಿ ಸಿಕ್ಕಿದವು, ಯಾರು ತಂದುಕೊಟ್ಟರು, ಯಾವ ಉದ್ದೇಶಕ್ಕಾಗಿ ಅವು ಗಳನ್ನು ಸಂಗ್ರಹಿಸಿಡಲಾಗಿತ್ತು ಎಂಬಿತ್ಯಾದಿ ಮಾಹಿತಿಗಳನ್ನು ಕಲೆಹಾಕುತ್ತಿದ್ದಾರೆ.

# ಹೃದಯಾಘಾತವಾದರೂ ಪ್ರಾಣದ ಹಂಗು ತೊರೆದು 40 ಪ್ರಯಾಣಿಕರ ಜೀವ ಉಳಿಸಿದ ಬಸ್ ಚಾಲಕ

**ಕಾಕಿನಾಡ:** ಜೀವಹೋಗುವ ಸಮಯದಲ್ಲೂ ಚಾಲಕರೊಬ್ಬರು ಕರ್ತವ್ಯ ಮರೆಯದೆ ಪ್ರಯಾಣಿಕ ಜೀವ ಉಳಿಸಿದ ಘಟನೆಯೊಂದು ನಡೆದಿದೆ. ಕಾಕಿನಾಡದಿಂದ ವಿಶಾಖಪಟ್ಟಣಕ್ಕೆ 40 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಬಸ್ ಅನ್ನು ಚಾಲನೆ ಮಾಡುವಾಗ ಚಾಲಕನಿಗೆ ಹೃದಯಾಘಾತವಾಗುತ್ತದೆ. ಚಾಲನೆ ಮಾಡುವಾಗಲೇ ಅವರಿಗೆ ತೀವ್ರವಾದ ಎದೆನೋವು ಕಾಣಿಸಿಕೊಂಡರೂ ತಮ್ಮ ಪ್ರಾಣಕ್ಕಿಂತ ಪ್ರಯಾಣಿಕರ ಸುರಕ್ಷತೆಯೇ ಮುಖ್ಯವೆಂದು ಭಾವಿಸಿದ್ದಾರೆ. ಕೂಡಲೇ ಬಸ್ಸಿನ ಮೇಲೆ ಹಿಡಿತ ಸಾಧಿಸಿ,ರಸ್ತೆಯ ಬದಿಗೆ ಅತ್ಯಂತ ಸುರಕ್ಷಿತವಾಗಿ ನಿಲ್ಲಿಸಿದ್ದಾರೆ. ಆದರೆ ಬಸ್ ನಿಂತ ತಕ್ಷಣವೇ ಅವರು ಸ್ಟೇರಿಂಗ್ ಮೇಲೆಯೇ ಕುಸಿದು ಬಿದ್ದಿದ್ದಾರೆ.

ಕೂಡಲೇ ಚಾಲಕನನ್ನು ಆಸ್ಪತ್ರೆಗೆ ಕರೆದೊಯ್ದರೂ ವೈದ್ಯರು ಅವರು ಮೃಪಟ್ಟಿದ್ದಾರೆ ಎಂದು ತಿಳಿಸಿದ್ದಾರೆ. ಸಾವಿನ ಸಮಯದಲ್ಲೂ ತನನ್ನು ನಂಬಿದ್ದ ಪ್ರಯಾಣಿಕರ ಜೀವ ಉಳಿಸಬೇಕೆಂದು ಪಣತೊಟ್ಟ ಚಾಲಕನಿಗೆ ಎಲ್ಲರೂ ಕೃತಜ್ಞತೆ ಸಲ್ಲಿಕೆ ಮಾಡುತ್ತಿದ್ದಾರೆ.

ಆಂಧ್ರಪ್ರದೇಶ ರಾಜ್ಯ ರಸ್ತೆ ಸಾರಿಗೆ ನಿಗಮದ ಚಾಲಕ ಸುಮಾರು 40 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಬಸ್ ಅನ್ನು ಚಾಲನೆ ಮಾಡುವಾಗ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ. ತೀರ ನೋವಿನಲ್ಲಿದ್ದರೂ 34 ವರ್ಷದ ಜೆಟ್ಟಿ ಶಿವ ಅವರು ಕಾಕಿನಾಡ–ವಿಶಾಖಪಟ್ಟಣ ಮಾರ್ಗದ ಟುನಿ ಬಳಿ ಬಸ್ಸಿನ ಮೇಲೆ ಹಿಡಿತ ಸಾಧಿಸಿ, ರಸ್ತೆಯ ಬದಿಗೆ ಅತ್ಯಂತ ಸುರಕ್ಷಿತವಾಗಿ ನಿಲ್ಲಿಸಿದ್ದಾರೆ. ಚಾಲಕನ ಸಮಯಪ್ರಜ್ಞೆಯಿಂದಾಗಿ ಬಸ್‌ನಲ್ಲಿದ್ದ ಸುಮಾರು 40 ಪ್ರಯಾಣಿಕರು ಯಾವುದೇ ಅಪಾಯವಿಲ್ಲದೆ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಚಾಲಕ ಜೆಟ್ಟಿ ಶಿವ ಅವರ ಅಕಾಲಿಕ ನಿಧನಕ್ಕೆ ಎಪಿಎಸ್‌ಆರ್‌ಟಿಸಿ ಅಧ್ಯಕ್ಷ ಕೋನಕಲ್ಲ ನಾರಾಯಣ ಸಂತಾಪ ಸೂಚಿಸಿದ್ದಾರೆ. ಈ ಸಂದರ್ಭದಲ್ಲೂ ಧೈರ್ಯ, ಬದ್ಧತೆ ಮತ್ತು ಜವಾಬ್ದಾರಿಯು ಇಡೀ ಸಾರಿಗೆ ಸಂಸ್ಥೆಗೆ ಹೆಮ್ಮೆಯ ವಿಷಯ, ಮೃತರ ಕುಟುಂಬಕ್ಕೆ ಸಂಸ್ಥೆಯ ನಿಯಮಗಳ ಪ್ರಕಾರ ಎಲ್ಲಾ ರೀತಿಯ ಸರ್ಕಾರಿ ನೆರವು ನೀಡುವುದಾಗಿ ತಿಳಿಸಿದ್ದಾರೆ.

## ಅಂಜನಾದ್ರಿ ಬೆಟ್ಟದ ವಿವಾದ: ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಶಾಕ್

# ಮುಜರಾಯಿ ಇಲಾಖೆಯ ಆದೇಶ ಸಂಪೂರ್ಣ ರದ್ದು

**ಧಾರವಾಡ:** ಹನುಮಂತನ ಜನ್ಮಸ್ಥಳವಾಗಿರುವ, ಕೊಪ್ಪಳ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಅಂಜನಾದ್ರಿ ಬೆಟ್ಟದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ವಿವಾದಕ್ಕೆ ಸಂಬಂಧಿಸಿದಂತೆ ಕರ್ನಾಟಕ ಹೈಕೋರ್ಟ್‌ನ ಧಾರವಾಡ ಪೀಠವು ರಾಜ್ಯ ಸರ್ಕಾರಕ್ಕೆ ಭಾರಿ ಹಿನ್ನಡೆ ನೀಡುವ ಮಹತ್ವದ ತೀರ್ಪನ್ನು ಪ್ರಕಟಿಸಿದೆ. ಅದರಂತೆ, ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠವು, ಅಂಜನಾದ್ರಿ ದೇವಸ್ಥಾನವನ್ನು ಸರ್ಕಾರದ ಹಿಂದೂ ಧಾರ್ಮಿಕ ಮತ್ತು ಧಾರ್ಮಿಕ ದತ್ತಿ (ಮುಜರಾಯಿ) ಇಲಾಖೆಯ ವ್ಯಾಪ್ತಿಗೆ ಒಳಪಡಿಸಿ ಹೊರಡಿಸಲಾಗಿದ್ದ ಅಧಿಸೂಚನೆ ಹಾಗೂ ಆಡಳಿತಾಧಿಕಾರಿ ನೇಮಕದ ಆದೇಶ ಎರಡನ್ನೂ ಸಂಪೂರ್ಣವಾಗಿ ರದ್ದುಗೊಳಿಸಿದೆ.



2018 ರಲ್ಲಿ ಅಂದಿನ ರಾಜ್ಯ ಸರ್ಕಾರವು ಅಂಜನಾದ್ರಿ ದೇವಸ್ಥಾನವನ್ನು ಹಿಂದೂ ಧಾರ್ಮಿಕ ಮತ್ತು ಧಾರ್ಮಿಕ ದತ್ತಿ (ಮುಜರಾಯಿ) ಇಲಾಖೆಯ ವ್ಯಾಪ್ತಿಗೆ ಒಳಪಡಿಸಿ ಅಧಿಕೃತ ಅಧಿಸೂಚನೆ ಹೊರಡಿಸಿತು. ಅದರಂತೆ, ದೇವಸ್ಥಾನದ ಆಡಳಿತದಲ್ಲಿ ಅಕ್ರಮಗಳು ನಡೆಯುತ್ತಿವೆ ಮತ್ತು ಸೂಕ್ತ ನಿರ್ವಹಣೆ ಇಲ್ಲ ಎಂಬ ಕಾರಣ ನೀಡಿ, ಕೊಪ್ಪಳ ಜಿಲ್ಲಾಡಳಿತವು ದೇವಸ್ಥಾನದ ಉಸ್ತುವಾರಿಗೆ ತಹಶೀಲ್ದಾರ್ ದರ್ಜೆಯ ಕಾರ್ಯನಿರ್ವಾಹಕ ಅಧಿಕಾರಿಯನ್ನು ನೇಮಕ ಮಾಡಿ ಆದೇಶ ಹೊರಡಿಸಿತು. ಆದರೆ, ದೇವಸ್ಥಾನದ ಪ್ರಧಾನ ಅರ್ಚಕರಾದ ವಿದ್ಯಾದಾಸ ಬಾಬಾ ಅವರು ಸರ್ಕಾರದ ಈ ಕ್ರಮವನ್ನು ತೀವ್ರವಾಗಿ ವಿರೋಧಿಸಿದರು. ತಮ್ಮ ಪೂರ್ವಜರ ಕಾಲದಿಂದಲೂ ತಾವೇ ದೇವಸ್ಥಾನದ ಪೂಜೆ ಹಾಗೂ ನಿರ್ವಹಣೆಯನ್ನು ಮಾಡಿಕೊಂಡು ಬರುತ್ತಿದ್ದು, ಇದು ತಮಗೆ ಸೇರಿದ ಪಾರಂಪರಿಕ ಹಕ್ಕಾಗಿದೆ ಎಂದು ವಾದಿಸಿದರು. ಜೊತೆಗೆ, ಸರ್ಕಾರ ಮತ್ತು ಜಿಲ್ಲಾಡಳಿತವು ತಮಗೆ ಯಾವುದೇ ಮುನ್ಸೂಚನೆ ಅಥವಾ ನೋಟಿಸ್ ನೀಡದೆ, ಏಕಪಕ್ಷೀಯವಾಗಿ ದೇವಸ್ಥಾನವನ್ನು ಮುಜರಾಯಿ ಇಲಾಖೆಗೆ ಸೇರಿಸಿದೆ ಹಾಗೂ ತಮಗೆ ಪೂಜೆ ಸಲ್ಲಿಸಲು ಅಡ್ಡಿಪಡಿಸುತ್ತಿದೆ ಎಂದು ಆರೋಪಿಸಿ ಹೈಕೋರ್ಟ್ ಮೆಟ್ಟಿಲೇರಿದರು. ಮುಂದುವರೆದು, ವಿಚಾರಣೆ ನಡೆಸಿದ ಕರ್ನಾಟಕ ಹೈಕೋರ್ಟ್‌ನ ಧಾರವಾಡ ವಿಭಾಗೀಯ ಪೀಠದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠವು, 1997ರ ಕರ್ನಾಟಕ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಕಾಯ್ದೆಯಡಿ, ದೇವಸ್ಥಾನವನ್ನು ಮುಜರಾಯಿ ಇಲಾಖೆಯ ವ್ಯಾಪ್ತಿಗೆ ತಂದಿದ್ದ 2018ರ ಸೆಪ್ಟೆಂಬರ್ 24ರ ಅಧಿಸೂಚನೆ ಮತ್ತು ಆಡಳಿತ ನಿರ್ವಹಣೆಗಾಗಿ ಕೊಪ್ಪಳ ಜಿಲ್ಲಾಧಿಕಾರಿಗಳು ಹೊರಡಿಸಿದ್ದ 2018ರ ಡಿಸೆಂಬರ್ 15ರ ಆಡಳಿತಾಧಿಕಾರಿ/ಕಾರ್ಯನಿರ್ವಾಹಕ ಅಧಿಕಾರಿ ನೇಮಕದ ಆದೇಶ ಎರಡನ್ನೂ ರದ್ದುಪಡಿಸಿದೆ.

1997ರ ಧಾರ್ಮಿಕ ದತ್ತಿ ಕಾಯ್ದೆಯಡಿ ದೇವಸ್ಥಾನವನ್ನು ವಶಕ್ಕೆ ಪಡೆಯುವ ಮುನ್ನ ಸಂಬಂಧಪಟ್ಟ ಅರ್ಚಕರಿಗೆ ಅಥವಾ ಆಡಳಿತ ಮಂಡಳಿಗೆ ಯಾವುದೇ ಪೂರ್ವಭಾವಿ ಸೂಕ್ತ ನೋಟಿಸ್ ನೀಡಿಲ್ಲ ಮತ್ತು ಅವರ ವಾದ ಆಲಿಸಿಲ್ಲ. ಈ ಪ್ರಕ್ರಿಯೆಯಲ್ಲಿ ಜಿಲ್ಲಾಡಳಿತ ನಿಯಮ ಪಾಲಿಸದ ಕಾರಣ ಸರ್ಕಾರದ ಕ್ರಮ ದೋಷಪೂರಿತವಾಗಿದೆ ಎಂದ ಕೋರ್ಟ್, ಈ ಹಿಂದೆ ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್ ನೀಡಿದ್ದ ಮಧ್ಯಂತರ ಆದೇಶಗಳ ಅನ್ವಯ, ಪ್ರಧಾನ ಅರ್ಚಕರಾದ ವಿದ್ಯಾದಾಸ ಬಾಬಾ ಅವರೇ ದೇವಸ್ಥಾನದಲ್ಲಿ ಪೂಜೆ ಮತ್ತು ಅರ್ಚಕ ಕರ್ತವ್ಯಗಳನ್ನು ಮುಂದುವರಿಸಲು ಪೂರ್ಣ ಪ್ರಮಾಣದ ಅನುಮತಿ ನೀಡಿದೆ.

ಏತನ್ಮಧ್ಯೆ, ಈ ತೀರ್ಪಿನಿಂದ ದೇವಸ್ಥಾನದ ಮೇಲೆ ಸರ್ಕಾರಕ್ಕೆ ಯಾವುದೇ ಶಾಶ್ವತ ಹಕ್ಕಿಲ್ಲ ಎಂದು ಅರ್ಥವಲ್ಲ ಎಂದು ಸ್ಪಷ್ಟಪಡಿಸಿದ ಹೈಕೋರ್ಟ್, ಒಂದೊಮ್ಮೆ ರಾಜ್ಯ ಸರ್ಕಾರವು ಅಂಜನಾದ್ರಿ ದೇವಸ್ಥಾನವನ್ನು ತನ್ನ ವ್ಯಾಪ್ತಿಗೆ ತರಲು ಬಯಸಿದರೆ, ಕಾನೂನುಬದ್ಧ ಪ್ರಕ್ರಿಯೆಯನ್ನು ಅನುಸರಿಸಿ, ಸಂಬಂಧಪಟ್ಟವರಿಗೆ ನೋಟಿಸ್ ನೀಡಿ, ವಿಚಾರಣೆ ನಡೆಸಿದ ಬಳಿಕ ಹೊಸದಾಗಿ ಅಧಿಸೂಚನೆ ಹೊರಡಿಸಬಹುದು ಎಂದು ಸರ್ಕಾರಕ್ಕೆ ಅವಕಾಶ ನೀಡಿದೆ.

# ಪೊಲೀಸ್ ಇಲಾಖೆಯನ್ನು ಆಧುನೀಕರಿಸಲು ನಮ್ಮ ಸರ್ಕಾರ ಬದ್ಧ: ಸಿಎಂ ಡಿ.ಕೆ. ಶಿವಕುಮಾರ್

**ಬೆಂಗಳೂರು:** ಕರ್ನಾಟಕದ ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸಲು ಅತ್ಯಾಧುನಿಕ ತಂತ್ರಜ್ಞಾನ ಅಳವಡಿಕೆ, ಅಪರಾಧ ತಡೆಗಟ್ಟುವಿಕೆ ಹಾಗೂ

ಕಣ್ಗಾವಲು ವ್ಯವಸ್ಥೆಯನ್ನು ಸುಧಾರಿಸುವ ಅಗತ್ಯವಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೇಳಿದ್ದಾರೆ.

ಬೆಂಗಳೂರಿನ ರಿಚ್ಮಂಡ್ ರಸ್ತೆಯಲ್ಲಿರುವ ಕೇಂದ್ರ ಕಮಾಂಡ್ ಸೆಂಟರ್ ಮತ್ತು ಸಮಗ್ರ ಪೊಲೀಸ್ ಭವನಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಭೇಟಿ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ಪೊಲೀಸ್ ವ್ಯವಸ್ಥೆಯಲ್ಲಿ ಆಧುನಿಕ ತಂತ್ರಜ್ಞಾನವನ್ನು ಸಂಯೋಜಿಸುವ ಮೂಲಕ ಕಣ್ಗಾವಲು ಹೆಚ್ಚಿಸುವುದು, ಅಪರಾಧಗಳನ್ನು ತಡೆಗಟ್ಟುವುದು ಹಾಗೂ ಪೊಲೀಸರ ಕಾರ್ಯಕ್ಷಮತೆಯನ್ನು ಸುಧಾರಿಸುವತ್ತ ಗಮನ ಹರಿಸಬೇಕಿದೆ ಎಂದು ಹೇಳಿದರು. ಪೊಲೀಸ್ ಇಲಾಖೆಯ ದಕ್ಷತೆಯನ್ನು ಹೆಚ್ಚಿಸಲು, ಅಪರಾಧ ಚಟುವಟಿಕೆಗಳ ಮೇಲೆ ನಿಗಾ ಇರಿಸಲು ಮತ್ತು ಸಾರ್ವಜನಿಕರ ಸುರಕ್ಷತೆಯನ್ನು ಬಲಪಡಿಸಲು ಇತ್ತೀಚಿನ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವುದು ಮುಖ್ಯವಾಗಿದೆ. ಪೊಲೀಸ್ ಮೂಲಸೌಕರ್ಯವನ್ನು ಆಧುನೀಕರಿಸುವುದು, ಸೈಬರ್ ಅಪರಾಧ ತಡೆಗಟ್ಟುವ ವ್ಯವಸ್ಥೆಗಳನ್ನು ಬಲಪಡಿಸುವುದು ಹಾಗೂ ಪೊಲೀಸ್ ಸಿಬ್ಬಂದಿಗೆ ಕರ್ತವ್ಯ ನಿರ್ವಹಿಸಲು ಅಗತ್ಯವಾದ ಉತ್ತಮ ಸೌಲಭ್ಯಗಳು ಮತ್ತು ಸಂಪನ್ಮೂಲಗಳನ್ನು ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

ಹೊಸ ಭದ್ರತಾ ಸವಾಲುಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಎದುರಿಸುವ ಸಾಮರ್ಥ್ಯವಿರುವ, ತಂತ್ರಜ್ಞಾನ ಆಧಾರಿತ ಆಧುನಿಕ ಪೊಲೀಸ್ ವ್ಯವಸ್ಥೆಯನ್ನು ನಿರ್ಮಿಸುವುದು ಸರ್ಕಾರದ ಉದ್ದೇಶವಾಗಿದೆ. ಇದರೊಂದಿಗೆ ಪೊಲೀಸ್ ಸಿಬ್ಬಂದಿಗೆ ಲಭ್ಯವಿರುವ ಮೂಲಸೌಕರ್ಯ ಮತ್ತು ಸಂಪನ್ಮೂಲಗಳನ್ನು ಸುಧಾರಿಸಲಾಗುವುದು ಎಂದು ಹೇಳಿದರು.

## ಅಂತಿಮ ಘಟ್ಟದಲ್ಲಿ ಎಸ್‌ಐಆರ್

# 2,85,646 ಅರ್ಜಿಗಳ ವಿಚಾರಣೆಯಷ್ಟೇ ಬಾಕಿ: 1.10 ಲಕ್ಷವಷ್ಟೇ ಫಾರ್ಮ್ 7 ಸಲ್ಲಿಕೆ

**ಬೆಂಗಳೂರು:** ರಾಜ್ಯದಲ್ಲಿ ಭಾರಿ ರಾಜಕೀಯ ಹೈಡ್ರಾಮಕ್ಕೆ ಸಾಕ್ಷಿಯಾಗಿದ್ದ, ಸುಮಾರು 50 ಲಕ್ಷ ಮತದಾರರನ್ನು ಕೈಬಿಡಲು ಪ್ರಯತ್ನ ನಡೆದಿವೆ ಎನ್ನುವ ಕಾಂಗ್ರೆಸ್ ಆರೋಪದ ನಡುವೆಯೇ ಕೇವಲ 1,10,654 ಫಾರ್ಮ್ 7 ಅರ್ಜಿ ಸಲ್ಲಿಕೆಯಾಗಿರುವುದನ್ನು ಚುನಾವಣಾ ಆಯೋಗ ಬಹಿರಂಗಪಡಿಸಿದೆ.



ಮತದಾರರ ಪಟ್ಟಿಯಿಂದ ಹೆಸರು ತೆಗೆದು ಹಾಕಲು ಅಥವಾ ಆಕ್ಷೇಪಣೆ ಸಲ್ಲಿಸಲು ಸಂಬಂಧಿಸಿ ದಂತೆ ರಾಜ್ಯಾದ್ಯಂತ 1,10,654 ಫಾರ್ಮ್ 7 ಅರ್ಜಿಗಳು ಸಲ್ಲಿಕೆಯಾಗಿವೆ. ಅಕ್ಟೋಬರ್ 9ರ ವೇಳೆಗೆ ರಾಜ್ಯದಲ್ಲಿ ಒಟ್ಟು 4,51,61,393 ಮತದಾರರಿದ್ದು, ಅವರಲ್ಲಿ 2,24,03,422 ಪುರುಷರು, 2,27,55,113 ಮಹಿಳೆಯರು ಹಾಗೂ 2,858 ತೃತೀಯ ಲಿಂಗದ ಮತದಾರರಿದ್ದಾರೆ ಎಂದು ಚುನಾವಣಾ ಆಯೋಗ ಅಂಕಿ–ಅಂಶಗಳನ್ನು ಬಹಿರಂಪಡಿಸಿದೆ. ಆದರೆ ಈವರೆಗೆ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಯಲ್ಲಿ ಒಟ್ಟು 43,82,315 ನೋಟಿಸ್‌ಗಳನ್ನು ಸಿದ್ಧಪಡಿಸಲಾಗಿದ್ದು, ಈ ಪೈಕಿ 43,73,745 ನೋಟಿಸ್‌ಗಳನ್ನು ವಿತರಿಸಲಾಗಿದೆ.

ಈ ಮೂಲಕ ಶೇ.99.80ರಷ್ಟು ನೋಟಿಸ್ ವಿತರಣೆ ಪೂರ್ಣಗೊಂಡಿದೆ. ವಿತರಿಸಲಾದ ನೋಟಿಸ್ ಗಳಿಗೆ ಸಂಬಂಧಿಸಿದಂತೆ 40,88,099 ವಿಚಾರಣೆಗಳು ಪೂರ್ಣಗೊಂಡಿ–ದ್ದು, ಇದು ಶೇ.93.47 ರಷ್ಟಾಗಿದೆ. ಇನ್ನೂ 2,85,646 ವಿಚಾರಣೆಗಳು ಬಾಕಿ ಉಳಿದಿವೆ.

ಜೂ.16ರಿಂದ ಅ.8ರವರೆಗೆ ರಾಜ್ಯದಲ್ಲಿ ವಿವಿಧ ಉದ್ದೇಶಗಳಿಗಾಗಿ ಒಟ್ಟು 23,02,215 ಅರ್ಜಿಗಳು ಸಲ್ಲಿಕೆಯಾಗಿವೆ. ಇವುಗಳಲ್ಲಿ 9,52,497 ಫಾರ್ಮ್–6, 4,712 ಫಾರ್ಮ್–6ಎ, 1,10,654 ಫಾರ್ಮ್–7 ಹಾಗೂ 12,34,352 ಫಾರ್ಮ್–8 ಅರ್ಜಿಗಳು ಸೇರಿವೆ. ಫಾರ್ಮ್–6 ಅನ್ನು ಮತದಾರರ ಪಟ್ಟಿಗೆ ಹೊಸದಾಗಿ ಹೆಸರು ಸೇರ್ಪಡೆ ಮತ್ತು ಎನ್ಯುಮರೇಶನ್ ಮ್ಯಾಪಿಂಗ್‌ನಲ್ಲಿ ಬಿಟ್ಟು ಹೋದವರ ಮರು ಸೇರ್ಪಡೆಗೆ ಬಳಸಲಾಗುತ್ತದೆ. ವಿದೇಶದಲ್ಲಿ ವಾಸಿಸುವ ಭಾರತೀಯ ನಾಗರಿಕರು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಲು ಫಾರ್ಮ್–6ಎ ಸಲ್ಲಿಸಬಹುದಾಗಿದೆ.

ಫಾರ್ಮ್–7 ಅನ್ನು ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸುವುದಕ್ಕೆ ಆಕ್ಷೇಪ ಸಲ್ಲಿಸಲು ಅಥವಾ ಈಗಿರುವ ಹೆಸರನ್ನು ಅಳಿಸಲು ಕೋರಲು ಬಳಸಲಾಗುತ್ತದೆ. ಫಾರ್ಮ್–8 ಮೂಲಕ ಮತ ದಾರರ ಪಟ್ಟಿಯಲ್ಲಿನ ವಿವರಗಳ ತಿದ್ದುಪಡಿ, ವಿಳಾಸ ಬದಲಾ ವಣೆ ಹಾಗೂ ಮತದಾರರ ಗುರುತಿನ ಚೀಟಿ ಬದಲಾವಣೆಗೆ ಅರ್ಜಿ ಸಲ್ಲಿಸಬಹುದು. ಫಾರ್ಮ್–9, 10,11, 11ಎ ಮತ್ತು 11ಬಿ ಮೂಲಕ ಸ್ವೀಕರಿಸಲಾದ ಹಕ್ಕು ಹಾಗೂ ಆಕ್ಷೇಪಣೆಗಳ ಕ್ಷೇತ್ರವಾರು ವಿವರಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಸಿಇಒ ಕಚೇರಿ ತಿಳಿಸಿದೆ.

ಫಾರ್ಮ್–6, 6ಎ, 7 ಮತ್ತು 8ರ ಮೂಲಕ ಸುಳ್ಳು ಹಕ್ಕು ಅಥವಾ ಆಕ್ಷೇಪಣೆಗಳನ್ನು ಸಲ್ಲಿಸುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಚುನಾವಣಾಧಿಕಾರಿಗಳು, ಹೆಚ್ಚುವರಿ ಜಿಲ್ಲಾ ಚುನಾವಣಾಧಿ ಕಾರಿಗಳು ಹಾಗೂ ಮತದಾರರ ನೋಂದಣಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಅಕ್ಟೋಬರ್ 1ರಂದು ಚುನಾವಣಾಧಿಕಾರಿಗಳಿಗೆ ಬರೆದ ಪತ್ರದಲ್ಲಿ, ಮತದಾರರ ನೋಂದಣಾಧಿಕಾರಿಗಳ ಮುಂದೆ ದೊಡ್ಡ ಪ್ರಮಾಣದಲ್ಲಿ ಫಾರ್ಮ್–7 ಅರ್ಜಿಗಳನ್ನು ಸಲ್ಲಿಸಲಾಗುತ್ತಿರುವುದು ಗಮನಕ್ಕೆ ಬಂದಿದೆ. ಈ ಅರ್ಜಿಗಳು ನೈಜವಾಗಿಲ್ಲ ಎಂಬ ಆರೋಪಗಳೂ ಕೇಳಿಬಂದಿವೆ. ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲು ಸೂಚಿಸ ಲಾಗಿದೆ ಎಂದು ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ತಿಳಿಸಿದ್ದಾರೆ.

# ಇನ್ಮುಂದೆ ಸಫಾರಿಯಲ್ಲಿ ಮೊಬೈಲ್ ಫೋನ್ ಬ್ಯಾನ್

## ಅರಣ್ಯ ಇಲಾಖೆಯಿಂದ ಕಠಿಣ ನಿಯಮ ಜಾರಿ

**ಚಾಮರಾಜನಗರ:** ಸಫಾರಿ ಜೀಪ್‌ನಲ್ಲಿ ಕುಳಿತು ಕಾಡಿನ ಮೌನವನ್ನು ಆಲಿಸುತ್ತಿರುವಾಗಲೇ, ಎದುರಿಗೆ ಹುಲಿ ಪ್ರತ್ಯಕ್ಷವಾದರೆ ಆಗುವ ರೋಮಾಂಚನವನ್ನು ಪದಗಳಲ್ಲಿ ಹೇಳಲು ಸಾಧ್ಯವಿಲ್ಲ.

ಕೈಯಲ್ಲಿ ದುಬಾರಿ ಕ್ಯಾಮೆರಾ ಇಲ್ಲ, ಇರುವುದು ಒಂದೇ ಒಂದು ಮೊಬೈಲ್ ಫೋನ್ ಅದರಲ್ಲೇ ಹುಲಿಯ ಗಾಂಭೀರ್ಯದ ನೋಟ, ಜಿಂಕೆಯ ಚುರುಕು ಜಿಗಿತವನ್ನು ಸೆರೆಹಿಡಿಯುವ ಖುಷಿಯೇ ಬೇರೆ. ಆದ–ರೆ, ಈ ಖುಷಿಗೆ ಅರಣ್ಯ ಇಲಾಖೆ ಬ್ರೇಕ್ ಹಾಕಿದ್ದು, ಹುಲಿ ಸಂರಕ್ಷಿತ ಪ್ರದೇಶಗಳ ಕೋರ್ ವಲಯಗಳಲ್ಲಿ ಮೊಬೈಲ್ ಫೋನ್ ಬಳಕೆಯನ್ನು ಸಂಪೂರ್ಣವಾ ನಿಷೇಧಿಸಲಾಗಿದೆ.



ಕರ್ನಾಟಕದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಕುಮಾರ್ ಪುಷ್ಕರ್ ಅವರು, ಚಾಮರಾಜನಗರ ಜಿಲ್ಲೆಯ ಪ್ರಸಿದ್ಧ ವನ್ಯಜೀವಿ ಧಾಮಗಳಾದ ಬಂಡೀಪುರ, ಕೆ.ಗುಡಿ (ಬಿಆರ್‌ಟಿ) ಹಾಗೂ ಪಿ.ಜಿ.ಪಾಳ್ಯ (ಎಂಎಂ ಹಿಲ್ಸ್) ಸಫಾರಿಗಳಲ್ಲಿ ಇಂದಿನಿಂದಲೇ ಈ ನಿಯಮವನ್ನು ಕಡ್ಡಾಯವಾಗಿ ಜಾರಿಗೆ ತಂದಿದೆ. ಏತನ್ಮಧ್ಯೆ, ಈ ಹಿಂದೆಯೇ ಜಿಮ್ ಕಾರ್ಬೆಟ್, ರಣಥಂಬೋರ್, ತಾಡೋಬಾ, ಕನ್ಹಾ ಮತ್ತು ಪೆಂಚ್ ಸೇರಿದಂತೆ ದೇಶದ ಬಹುತೇಕ ಪ್ರಮುಖ ಹುಲಿ ಸಂರಕ್ಷಿತ ಪ್ರದೇಶಗಳ ಕೋರ್ ವಲಯಗಳಲ್ಲಿ ಮೊಬೈಲ್ ಬಳಕೆಯನ್ನು ನಿಷೇಧಿಸಲಾಗಿದೆ.

ಸಫಾರಿ ವಾಹನದ ಒಳಗಡೆ ಇರುವ ಪ್ರವಾಸಿಗರು, ವಾಹನ ಚಾಲಕರು ಹಾಗೂ ಗೈಡ್‌ಗಳು (ಮಾರ್ಗದರ್ಶಕರು) ಸೇರಿದಂತೆ ಯಾರಿಗೂ ಮೊಬೈಲ್ ಬಳಸಲು ಅವಕಾಶವಿರುವುದಿಲ್ಲ. ಪ್ರವಾಸಿಗರು ತಮ್ಮ ಫೋನ್‌ಗಳನ್ನು ಸಫಾರಿ ಆರಂಭವಾಗುವ ಮುನ್ನವೇ ಪ್ರವೇಶ ದ್ವಾರದಲ್ಲಿ ಇರುವ ಲಾಕರ್‌ಗಳು ಅಥವಾ ಕೌಂಟರ್‌ಗಳಲ್ಲಿ ಜಮಾ ಮಾಡಬೇಕಾಗುತ್ತದೆ.

ಪ್ರವಾಸೋದ್ಯಮ ಇಲಾಖೆಯ ನಿಯಮಾವಳಿಗಳ ಪ್ರಕಾರ ಡಿಜಿಟಲ್ ಕ್ಯಾಮೆರಾಗಳು ಹಾಗೂ DSLR ಕ್ಯಾಮೆರಾಗಳ ಬಳಕೆಗೆ ಮುಂಚಿನಂತೆಯೇ ಅನುಮತಿ ಇದೆ. ಆದರೆ ಮೊಬೈಲ್ ಫೋನ್ ಮೂಲಕ ಫೋಟೋ, ವಿಡಿಯೋ ಅಥವಾ ರೀಲ್ಸ್ ಮಾಡುವುದನ್ನು ಸಂಪೂರ್ಣವಾಗಿ ನಿರ್ಬಂಧಿಸಲಾಗಿದೆ.

# ನನಗೆ 8 ನೊಬೆಲ್ ಶಾಂತಿ ಪ್ರಶಸ್ತಿ ನೀಡಬೇಕಿತ್ತು: ಪ್ರಶಸ್ತಿ ಸಮಿತಿ ವಿರುದ್ಧ ಟ್ರಂಪ್ ಆಕ್ರೋಶ

**ವಾಷಿಂಗ್ಟನ್:** 2026ನೇ ಸಾಲಿನ ಜಾಗತಿಕ ನೊಬೆಲ್ ಶಾಂತಿ ಪ್ರಶಸ್ತಿಯನ್ನು ದಕ್ಷಿಣ ಆಫ್ರಿಕಾದ ಹಿರಿಯ ನ್ಯಾಯಾಧೀಶೆ ಹಾಗೂ ತಮಿಳು ಮೂಲದ ಕಾನೂನು ತಜ್ಞೆ ನವನೀಥಂ ನವಿ ಪಿಳ್ಳೈ ಅವರಿಗೆ ಘೋಷಿಸಲಾಗಿದೆ. ಆದರೆ, ನೊಬೆಲ್ ಪ್ರಶಸ್ತಿ ಸಮಿತಿಯ ಈ ನಿರ್ಧಾರವನ್ನು ಖಂಡಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ತೀವ್ರ ಅಸಮಾಧಾನ ಹಾಗೂ ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಾನು ಜಾಗತಿಕವಾಗಿ ಸುಮಾರು 8 ದೊಡ್ಡ ಯುದ್ಧ ಮತ್ತು ಸಂಘರ್ಷಗಳನ್ನು ಇತ್ಯರ್ಥಪಡಿಸಿದ್ದೇನೆ. ನನ್ನ ಈ ಸಾಧನೆಗೆ ಕನಿಷ್ಠ 8 ನೊಬೆಲ್ ಶಾಂತಿ ಪ್ರಶಸ್ತಿಗಳನ್ನು ನೀಡಬೇಕಿತ್ತು ಎಂದು ಟ್ರಂಪ್ ನೊಬೆಲ್ ಪ್ರಶಸ್ತಿ ಆಯ್ಕೆ ಸಮಿತಿಯನ್ನು ಕಟುವಾಗಿ ಟೀಕಿಸಿದ್ದಾರೆ.



ನ್ಯೂಯಾರ್ಕ್‌ನ ಸಿರಾಕ್ಯೂಸ್‌ನಲ್ಲಿ ನಡೆದ ರ್‍ಯಾಲಿಯಲ್ಲಿ ಹಾಗೂ ತಮ್ಮ 'ಟ್ರೂತ್ ಸೋಶಿಯಲ್' ಖಾತೆಯಲ್ಲಿ ಪೋಸ್ಟ್ ಮಾಡಿರುವ ಟ್ರಂಪ್, ಪ್ರಶಸ್ತಿ ಆಯ್ಕೆ ಸಮಿತಿಯನ್ನು ಕಟುವಾಗಿ ಟೀಕಿಸಿದ್ದಾರೆ. ನೊಬೆಲ್ ಶಾಂತಿ ಪ್ರಶಸ್ತಿಯನ್ನು ವಿಶ್ವಸಂಸ್ಥೆಯಲ್ಲಿ ಕೆಲಸ ಮಾಡುವ, ಕೇವಲ ನಾಲ್ಕೈದು ಜನರಿಗಷ್ಟೇ ಗೊತ್ತಿರುವ ಉದಾರವಾದಿ ವ್ಯಕ್ತಿಗೆ ನೀಡಲಾಗಿದೆ. ಇಂತಹ ನಿರ್ಧಾರಗಳಿಂದ ನೊಬೆಲ್ ಪ್ರಶಸ್ತಿಯ ಮೌಲ್ಯ ಸಂಪೂರ್ಣವಾಗಿ ಕುಸಿದಿದೆ ಎಂದು ಆರೋಪಿಸಿದ್ದಾರೆ.

ಅಮೆರಿಕ ಅಧ್ಯಕ್ಷನಾಗಿ ನನ್ನ ದೇಶಕ್ಕೆ ಬರಬೇಕಿದ್ದ ಗೌರವವನ್ನು ಕಸಿದುಕೊಳ್ಳಲಾಗಿದೆ. ಇದು ನಾರ್ವೆ ದೇಶಕ್ಕೆ ಎದುರಾದ ಕಳಂಕ, ನಾರ್ವೆಯ ಈ ನಡೆಯನ್ನು ನಾವು ಎಂದಿಗೂ ಮರೆಯುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಮ್ಮ ಪೋಸ್ಟ್‌ನಲ್ಲಿ ಕಾಂಬೋಡಿಯಾ–ಥೈಲ್ಯಾಂಡ್, ಕೊಸೊವೊ–ಸೆರ್ಬಿಯಾ, ಭಾರತ–ಪಾಕಿಸ್ತಾನ, ಇಸ್ರೇಲ್–ಇರಾನ್ ಹಾಗೂ ಇಸ್ರೇಲ್–ಹಮಾಸ್ ನಡುವಿನ ಸಂಘರ್ಷಗಳನ್ನು ತಾನೇ ಪರಿಹರಿಸಿರುವುದಾಗಿ ಪ್ರತಿಪಾದಿಸಿದ್ದಾರೆ.

ಅಷ್ಟೇ ಅಲ್ಲದೆ, ಕಾಂಗೋ ಮತ್ತು ರುವಾಂಡಾ, ಈಜಿಪ್ಟ್ ಮತ್ತು ಇಥಿಯೋಪಿಯಾ ಹಾಗೂ ಅಜರ್‌ಬೈಜಾನ್ ದೇಶಗಳ ನಡುವಿನ ಸಮಸ್ಯೆಗಳನ್ನು ಬಗೆಹರಿಸಿದ್ದೇನೆ. ಇನ್ನುಳಿದ ಇರಾನ್ ಮತ್ತು ರಷ್ಯಾ–ಉಕ್ರೇನ್ ಯುದ್ಧವನ್ನೂ ಶೀಘ್ರದಲ್ಲೇ ಇತ್ಯರ್ಥಪಡಿಸಲಿದ್ದೇನೆ ಎಂದು ಹೇಳಿಕೊಂಡಿದ್ದಾರೆ.

ತಮ್ಮ ಆಡಳಿತಾವಧಿಯ ಸಾಧನೆಗಳನ್ನು ಸಮರ್ಥಿಸಿಕೊಂಡ ಟ್ರಂಪ್, ಪರಮಾಣು ಶಸ್ತ್ರಾಸ್ತ್ರಗಳ ಪೂರೈಕೆ ಮತ್ತು ಬಳಕೆಯನ್ನು ತಡೆದು ಸಾವಿರಾರು ಜನರ ಪ್ರಾಣ ಉಳಿಸಿದ್ದೇನೆ. ಇಸ್ರೇಲ್‌ನಲ್ಲಿದ್ದ 28 ಜಿಹಾದಿ ಒತ್ತೆಯಾಳುಗಳನ್ನು ಬಿಡುಗಡೆಗೊಳಿಸಿದ ಕೀರ್ತಿ ನನಗೆ ಸಲ್ಲುತ್ತದೆ. ವೆನೆಜುವೆಲಾದಲ್ಲಿ ಪ್ರಜಾಪ್ರಭುತ್ವ ಸ್ಥಾಪನೆಗೆ ಶ್ರಮಿಸಿದ್ದೇನೆ ಹಾಗೂ ಉತ್ತರ–ದಕ್ಷಿಣ ಕೊರಿಯಾ ಮತ್ತು ಚೀನಾ–ತೈವಾನ್ ನಡುವಿನ ಉದ್ವಿಗ್ನತೆ ತಡೆಯಲು ನೆರವಾಗಿದ್ದೇನೆ ಎಂದಿದ್ದಾರೆ.

1ನೇ ಪುಟದಿಂದ

# ಸಾಹಿತಿಗಳು, ಕಲಾವಿದರು, ಹೋರಾಟಗಾರರ ಬೆಂಬಲ

ಮೂಡಿಸುವ ಪ್ರಬಲ ಸಂಸ್ಥೆಯಾಗಿ ಬೆಳೆಯಬೇಕು. ಕನ್ನಡದ ಅಭಿವೃದ್ಧಿಗಾಗಿ ಶ್ರಮಿಸಿದ ಸಾಹಿತಿಗಳು, ಪತ್ರಕರ್ತರು, ಕಲಾವಿದರು ಮತ್ತು ಹೋರಾಟಗಾರರ ಆಶಯಗಳಿಗೆ ಪರಿಷತ್ತು ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಕನ್ನಡದ ಹಿತಾಸಕ್ತಿಗೆ ಒಗ್ಗಟ್ಟಿನ ಪ್ರಯತ್ನ ಅಗತ್ಯ

ಕನ್ನಡ–ಕನ್ನಡಿಗಕರ್ನಾಟಕದ ಹಿತಾಸಕ್ತಿಗಳನ್ನು ಕೇಂದ್ರವಾಗಿಟ್ಟುಕೊಂಡು ಪರಿಷತ್ತಿನ ಕಾರ್ಯಚಟುವಟಿಕೆಗಳನ್ನು ಮುನ್ನಡೆಸುವ ಅಗತ್ಯವಿದೆ. ಸಂಸ್ಥೆಯ ಮೂಲ ಆಶಯಗಳನ್ನು ಪುನಃ ಬಲಪಡಿಸಿ, ಕನ್ನಡದ ಬೆಳವಣಿಗೆಗೆ ಹೊಸ ದಿಕ್ಕು ನೀಡುವ ಉದ್ದೇಶದಿಂದ ಜಾಣಗೆರೆ ವೆಂಕಟರಾಮಯ್ಯ ಅವರು ಚುನಾವಣೆಗೆ ಸ್ಪರ್ಧಿಸುತ್ತಿದ್ದಾರೆ. ಅವರ ಈ ಪ್ರಯತ್ನಕ್ಕೆ ಕನ್ನಡಪರ ಸಂಘಟನೆಗಳು, ಸಾಹಿತಿಗಳು ಹಾಗೂ ಸಾಹಿತ್ಯಾಸಕ್ತರು ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀಮಂತ ಪರಂಪರೆ ಮುಂದಿನ ಪೀಳಿಗೆಗೂ ತಲುಪಬೇಕು. ಕನ್ನಡ ಭಾಷೆಯ ಅಭಿವೃದ್ಧಿ, ಸಾಹಿತ್ಯದ ಪ್ರೋತ್ಸಾಹ ಹಾಗೂ ಕನ್ನಡಿಗರ ಹಿತಾಸಕ್ತಿಗಳ ರಕ್ಷಣೆಗೆ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು. ಈ ನಿಟ್ಟಿನಲ್ಲಿ ಜಾಣಗೆರೆ ವೆಂಕಟರಾಮಯ್ಯ ಅವರ ಪ್ರಯತ್ನಕ್ಕೆ ಸಮಸ್ತ ಕನ್ನಡಿಗರು ಬೆಂಬಲ ಮತ್ತು ಸಹಕಾರ ನೀಡಬೇಕು ಎಂದು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಜಾಣಗೆರೆ ವೆಂಕಟರಾಮಯ್ಯ, ಶೇಖರ್ ಗೌಡ, ಹಂಪನಗೌಡ, ಸುರೇಶ್, ಚಂದ್ರಶೇಖರ್ ಆಚಾರ್ ಹಾಗೂ ಜಗದೀಶ್ ಉಪಸ್ಥಿತರಿದ್ದರು.

# ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಲು ಆಗ್ರಹ

ಆಶಯಗಳಿಗೆ ಅನುಗುಣವಾಗಿ ಅರ್ಹ ಸಮುದಾಯಗಳಿಗೆ ಮೀಸಲಾತಿಯ ಪ್ರಯೋಜನ ದೊರೆಯುವಂತೆ ನೋಡಿಕೊಳ್ಳುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಮೀಸಲಾತಿ ಹೋರಾಟದ ಆಶಯ ಮರೆಯಬಾರದು

ಎಸ್ಸಿ?ಎಸ್ಟಿ ಮೀಸಲಾತಿ ಹೆಚ್ಚಳಕ್ಕಾಗಿ ವಿವಿಧ ಸಂಘಟನೆಗಳು, ಸಾಮಾಜಿಕ ಮುಖಂಡರು ಹಾಗೂ ಸಮುದಾಯದ ಪ್ರತಿನಿಧಿಗಳು ರಾಜ್ಯದಾದ್ಯಂತ ಹೋರಾಟ ನಡೆಸಿದ್ದಾರೆ. ಬೆಂಗಳೂರಿನ ಫ್ರೀಡಂ ಪಾರ್ಕ್ ಸೇರಿದಂತೆ ವಿವಿಧೆಡೆ ನಡೆದ ಪ್ರತಿಭಟನೆಗಳು ಮತ್ತು ಹೋರಾಟಗಳ ಫಲವಾಗಿ ಮೀಸಲಾತಿ ಹೆಚ್ಚಳದ ನಿರ್ಧಾರ ಕೈಗೊಳ್ಳಲಾಗಿತ್ತು. ಹೀಗಾಗಿ, ಆ ಹೋರಾಟದ ಆಶಯವನ್ನು ಸರ್ಕಾರ ಮರೆಯಬಾರದು ಎಂದರು.

ಮೀಸಲಾತಿ ಹೆಚ್ಚಳದ ವಿಚಾರವನ್ನು ರಾಜಕೀಯ ದೃಷ್ಟಿಕೋನದಿಂದ ಮಾತ್ರ ನೋಡದೆ, ಸಾಮಾಜಿಕ ನ್ಯಾಯ ಮತ್ತು ಸಮಾನ ಅವಕಾಶಗಳ ನೆಲೆಯಲ್ಲಿ ಪರಿಗಣಿಸಬೇಕು. ಕಾನೂನು ತಜ್ಞರ ಸಲಹೆ ಪಡೆದು, ನ್ಯಾಯಾಲಯದ ಆದೇಶಗಳನ್ನು ಗೌರವಿಸುತ್ತಲೇ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಿತಾಸಕ್ತಿಯನ್ನು ರಕ್ಷಿಸಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜೈರಾಮ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಡಿಎಸ್‌ಎಸ್ ರಾಜ್ಯ ಸಂಚಾಲಕ ಎ. ಮಾನಯ್ಯ, ಮುದಿಮಲ್ಲಯ್ಯ, ಎಲ್. ಮಾರೆಣ್ಣ, ಪೃಥ್ವಿರಾಜ್, ಜಗನ್ನಾಥ್, ತಳವಾರ್ ದುರುಗಪ್ಪ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ಖಿನ್ನತೆ ಮುಚ್ಚಿಡಬೇಡಿ, ಮುಕ್ತವಾಗಿ ಮಾತನಾಡಿ

ತೊಡೆದುಹಾಕಬೇಕು. ಯಾವುದೇ ಮಾನಸಿಕ ಸಮಸ್ಯೆ ಅಥವಾ ಅತಿ ಒತ್ತಡವೆನಿಸಿದರೆ ಅದನ್ನು ಸ್ನೇಹಿತರು, ತಂದೆ–ತಾಯಿ ಅಥವಾ ಆಪ್ತಸಮಾಲೋಚಕರೊಂದಿಗೆ ಮುಕ್ತವಾಗಿ ಹಂಚಿಕೊಳ್ಳಿ. ಮಾತನಾಡುವುದರಿಂದ ಮನಸ್ಸಿನ ಭಾರ ಅರ್ಧದಷ್ಟು ಕಡಿಮೆಯಾಗುತ್ತದೆ ಎಂದು ಕಿವಿಮಾತು ಹೇಳಿದರು.

ಮನಸ್ಸಿನ ಸ್ಥೈರ್ಯಕ್ಕಾಗಿ ನಿತ್ಯದ ಜೀವನದಲ್ಲಿ ಯೋಗ, ಧ್ಯಾನ, ದೈಹಿಕ ವ್ಯಾಯಾಮ ಹಾಗೂ ಒಳ್ಳೆಯ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು. ರಾತ್ರಿ ವೇಳೆ ಮೊಬೈಲ್ ಬಳಕೆ ಕಡಿಮೆ ಮಾಡಿ ಸಮರ್ಪಕ ನಿದ್ರೆ ಮಾಡುವುದು ಮೆದುಳಿನ ಆರೋಗ್ಯಕ್ಕೆ ಅತ್ಯಾವಶ್ಯಕ ಎಂದರು. ಆರೋಗ್ಯ ಇಲಾಖೆಯು ಮಾನಸಿಕ ಆರೋಗ್ಯ ರಕ್ಷಣೆಗಾಗಿ ಸದಾ ಸಿದ್ಧವಿದ್ದು, ಜಿಲ್ಲಾ ಮಟ್ಟದಲ್ಲಿ ಹಾಗೂ ಸರ್ಕಾರಿ ಆಸ್ಪತ್ರೆಗಳಲ್ಲಿ ಮಾನಸಿಕ ಆರೋಗ್ಯ ಬೆಂಬಲಕ್ಕಾಗಿ 'ಟೆಲಿ–ಮಾನಸ್' ನಂತಹ ಉಚಿತ ಹೆಲ್ಪ್‌ಲೈನ್ ಸೇವೆಗಳು ಲಭ್ಯವಿವೆ. ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಬದುಕಿ, ಜೀವನದ ಪ್ರತಿ ಸವಾಲನ್ನು ಧೈರ್ಯವಾಗಿ ಎದುರಿಸಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು, ಸಿಜೆಎಂ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎನ್. ಸುಬ್ರಹ್ಮಣ್ಯ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಪ್ರಶಾಂತ ನಾಗಲಾಪುರ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಗುಜ್ಜಲ್ ನಾಗರಾಜ, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ. ರಾಧಿಕಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಂ.ಪಿ.ದೊಡ್ಡಮನಿ, ಜಿಲ್ಲಾ ಆರೋಗ್ಯ ನಿರೀಕ್ಷಣಾಧಿಕಾರಿ ಧರ್ಮನಗೌಡ ಸೇರಿದಂತೆ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಮತ್ತಿತರರು ಉಪಸ್ಥಿತರಿದ್ದರು.

# ಕೌಟುಂಬಿಕ ಕಲಹದ ದುರಂತ ಅಂತ್ಯ: ತಾಯಿ, ಇಬ್ಬರು ಮಕ್ಕಳ ಸಾವು!

## ಪತಿಯ ಕಿರುಕುಳವೇ ಕಾರಣವೆಂದು ಕುಟುಂಬಸ್ಥರ ಆರೋಪ; ಐವರ ವಿರುದ್ಧ ಮಹಿಳಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು

**ಬಳ್ಳಾರಿ:** ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ತಾಯಿ ತನ್ನ ಇಬ್ಬರು ಮಕ್ಕಳೊಂದಿಗೆ ಕಾಲುವೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಹೃದಯವಿದ್ರಾವಕ ಘಟನೆ ಬಳ್ಳಾರಿ ನಗರದಲ್ಲಿ ಬೆಳಕಿಗೆ ಬಂದಿದೆ. ನಗರದ ಮಿಲ್ಲರ್‌ಪೇಟೆಯ ಕವಿತಾ ಐಸ್‌ಫ್ಯಾಕ್ಟರಿ ಸಮೀಪದ ನಿವಾಸಿ ಲತೀಫಾ ಸಿಮ್ರಾನ್ (29) ಹಾಗೂ ಅವರ ಮಕ್ಕಳಾದ ಮಹಮ್ಮದ್ ಅಯಾನ್ (3) ಮತ್ತು ಆಯಿಷಾ ಫಾತಿಮಾ (2) ಮೃತಪಟ್ಟವರು.

ಮೃತ ಮಹಿಳೆಯ ಪತಿ ಸದ್ದಾಂ ಹುಸೇನ್ ಹಾಗೂ ಅವರ ಕುಟುಂಬದವರು ವರದಕ್ಷಿಣೆಗಾಗಿ ಕಿರುಕುಳ ನೀಡುತ್ತಿದ್ದರು ಎಂಬ ಗಂಭೀರ ಆರೋಪ ಕೇಳಿಬಂದಿದೆ. ಈ ಸಂಬಂಧ ಮೃತಳ ತಾಯಿ ನೀಡಿದ ದೂರಿನ ಆಧಾರದ ಮೇಲೆ ಮಹಿಳಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

**ಐದು ವರ್ಷಗಳ ಹಿಂದೆ ಮದುವೆ :**

ಮೃತ ಸಿಮ್ರಾನ್ ಅವರನ್ನು ಸುಮಾರು ಐದು ವರ್ಷಗಳ ಹಿಂದೆ ಅದೇ ಪ್ರದೇಶದ ನಿವಾಸಿ, ಲಾರಿ ಟರ್ಮಿನಲ್‌ನಲ್ಲಿ ಕೆಲಸ ಮಾಡುತ್ತಿದ್ದ ಸದ್ದಾಂ ಹುಸೇನ್ ಎಂಬುವವರೊಂದಿಗೆ ಕುಟುಂಬದ ಹಿರಿಯರು ಹಾಗೂ ಧರ್ಮಗುರುಗಳ ಸಮ್ಮುಖದಲ್ಲಿ ವಿವಾಹ ಮಾಡಿಕೊಡಲಾಗಿತ್ತು ಎನ್ನಲಾಗಿದೆ. ಮದುವೆಯ ಸಂದರ್ಭದಲ್ಲಿ 3 ಲಕ್ಷ ರೂಪಾಯಿ ನಗದು, 15 ತೊಲೆ ಚಿನ್ನಾಭರಣ ಹಾಗೂ ಇತರೆ ಗೃಹೋಪಯೋಗಿ ವಸ್ತುಗಳನ್ನು ನೀಡಲಾಗಿತ್ತು ಎಂದು ಕುಟುಂಬಸ್ಥರು ದೂರಿನಲ್ಲಿ ತಿಳಿಸಿದ್ದಾರೆ.

ಆದರೆ, ಮದುವೆಯ ನಂತರ ಹೆಚ್ಚಿನ ಹಣ ಮತ್ತು ಚಿನ್ನಕ್ಕಾಗಿ ಪತಿ ಹಾಗೂ ಅವರ ಕುಟುಂಬದವರು ಸಿಮ್ರಾನ್‌ಗೆ ಮಾನಸಿಕ ಮತ್ತು ದೈಹಿಕ ಕಿರುಕುಳ ನೀಡುತ್ತಿದ್ದರು ಎಂದು ಆರೋಪಿಸಲಾಗಿದೆ. ಅಲ್ಲದೆ, ಆಕೆಯ ಮೈಬಣ್ಣದ ವಿಚಾರವಾಗಿಯೂ ಪತಿ ಪದೇಪದೇ ಜಗಳವಾಡಿ ಹಿಂಸಿಸುತ್ತಿದ್ದರೆಂದು ಮೃತಳ ಕುಟುಂಬಸ್ಥರು ದೂರಿದ್ದಾರೆ.



**ನಾಪತ್ತೆಯಾದ ತಾಯಿ, ಮಕ್ಕಳಿಗಾಗಿ ಹುಡುಕಾಟ**

ಮನೆಯಲ್ಲಿನ ಜಗಳದ ಬಳಿಕ ಸಿಮ್ರಾನ್ ಇಬ್ಬರು ಮಕ್ಕಳೊಂದಿಗೆ ಮನೆಯಿಂದ ಹೊರ ಹೋಗಿದ್ದರು ಎನ್ನಲಾಗಿದೆ. ಈ ಕುರಿತು ಸದ್ದಾಂ ಅವರ ತಾಯಿ ಮೃತಳ ಕುಟುಂಬಕ್ಕೆ ಮಾಹಿತಿ ನೀಡಿದ್ದು, ಸಿಮ್ರಾನ್ ಎಲ್ಲಿಗೆ ಹೋಗಿದ್ದಾರೆ ಎಂಬುದು ತಿಳಿದಿಲ್ಲ ಎಂದು ಹೇಳಿದ್ದರು ಎನ್ನಲಾಗಿದೆ. ಇದರಿಂದ ಅನುಮಾನಗೊಂಡ ಕುಟುಂಬಸ್ಥರು ಸಂಬಂಧಿಕರ ಮನೆಗಳು, ಬಸ್ ನಿಲ್ದಾಣ, ರೈಲು ನಿಲ್ದಾಣ ಹಾಗೂ ಕಾಲುವೆ ಸೇರಿದಂತೆ ವಿವಿಧೆಡೆ ಹುಡುಕಾಟ ನಡೆಸಿದ್ದರು.

ಆದರೂ ಪತ್ತೆಯಾಗದ ಹಿನ್ನೆಲೆಯಲ್ಲಿ ಕುಟುಂಬಸ್ಥರು ಪೊಲೀಸರಿಗೆ ದೂರು ನೀಡಿದ್ದರು. ಈ ನಡುವೆ, ಬಳ್ಳಾರಿ ನಗರದ ಹೊರವಲಯದ ಅಲ್ಲಿಪುರದ ಸಮೀಪದ ಎಚ್‌ಎಲ್‌ಸಿ ಕಾಲುವೆಯಲ್ಲಿ ಮಹಿಳೆಯೊಬ್ಬರ ಮೃತದೇಹ ಪತ್ತೆಯಾಗಿರುವುದಾಗಿ ಸಾರ್ವಜನಿಕರು ಪೊಲೀಸರಿಗೆ ಮಾಹಿತಿ ನೀಡಿದರು. ಸ್ಥಳಕ್ಕೆ ಧಾವಿಸಿದ ಪೊಲೀಸರು ಹಾಗೂ ಕುಟುಂಬಸ್ಥರು ಪರಿಶೀಲಿಸಿದಾಗ ಅದು ಸಿಮ್ರಾನ್ ಅವರ ಮೃತದೇಹವೆಂದು ಗುರುತಿಸಲಾಯಿತು.



**ಆಂಧ್ರಪ್ರದೇಶದಲ್ಲಿ ಮಕ್ಕಳ ಮೃತದೇಹ ಪತ್ತೆ :**

ಇತ್ತ, ಇಬ್ಬರು ಮಕ್ಕಳ ಮೃತದೇಹಗಳು ಆಂಧ್ರಪ್ರದೇಶದ ಬೊಮ್ಮನಹಾಳ್ ಮಂಡಲದ ನಾಗಲಾಪುರದ ಸಮೀಪದ ಎಚ್‌ಎಲ್‌ಸಿ ಕಾಲುವೆಯಲ್ಲಿ ಪತ್ತೆಯಾಗಿವೆ. ಮಕ್ಕಳ ಮೃತದೇಹಗಳಿಗೆ ವೇಲ್‌ನಿಂದ ಕಟ್ಟಿದ ಗುರುತುಗಳಿದ್ದವು ಎಂದು ತಿಳಿದುಬಂದಿದೆ.

ಮೂವರ ಮೃತದೇಹಗಳನ್ನು ಬಳ್ಳಾರಿಯ ಬಿಮ್ಸ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ಕುಟುಂಬಸ್ಥರಿಗೆ ಹಸ್ತಾಂತರಿಸಲಾಗಿದೆ. ತಾಯಿ ಹಾಗೂ ಇಬ್ಬರು ಎಳೆಯ ಮಕ್ಕಳ ದಾರುಣ ಸಾವು ನಗರದ ಜನರನ್ನು ಬೆಚ್ಚಿಬೀಳಿಸಿದ್ದು, ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿದೆ.

**ಐವರ ವಿರುದ್ಧ ಪ್ರಕರಣ ದಾಖಲು :**

ಮೃತ ಸಿಮ್ರಾನ್ ಅವರ ಸಾವಿಗೆ ಪತಿ ಸದ್ದಾಂ ಹುಸೇನ್ ಸೇರಿದಂತೆ ಐವರು ಕಾರಣರೆಂದು ಕುಟುಂಬಸ್ಥರು ಆರೋಪಿಸಿದ್ದಾರೆ. ಅಲ್ಲದೆ, ಸದ್ದಾಂ ಅವರ ತಂಗಿಯ ಪತಿ ಫಕ್ರುದ್ದೀನ್ ವಿರುದ್ಧವೂ ಗಂಭೀರ ಆರೋಪಗಳನ್ನು ಮಾಡಿದ್ದಾರೆ. ಈ ಎಲ್ಲ ಆರೋಪಗಳ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಮನೆ ತೊರೆಯುವ ಮೊದಲು ಸಿಮ್ರಾನ್ ತಮ್ಮ ಮೊಬೈಲ್ ಮೂಲಕ ವಾಟ್ಸ್‌ಆ?ಯಪ್‌ನಲ್ಲಿ ಸಂದೇಶವೊಂದನ್ನು ಕಳುಹಿಸಿದ್ದರು ಎನ್ನಲಾಗಿದ್ದು, ಈ ಬಗ್ಗೆಯೂ ತನಿಖೆಯಿಂದ ಹೆಚ್ಚಿನ ಮಾಹಿತಿ ತಿಳಿದು ಬರಬೇಕಿದೆ.

ತಾಯಿ ಹಾಗೂ ಇಬ್ಬರು ಮುಗ್ಧ ಮಕ್ಕಳ ಸಾವಿಗೆ ನಿಖರ ಕಾರಣವೇನು? ಕುಟುಂಬಸ್ಥರು ಮಾಡಿರುವ ಆರೋಪಗಳಲ್ಲಿ ಎಷ್ಟು ಸತ್ಯಾಂಶವಿದೆ? ಎಂಬುದು ಪೊಲೀಸ್ ತನಿಖೆಯಿಂದ ಬಹಿರಂಗವಾಗಬೇಕಿದೆ. ಪ್ರಕರಣದ ಸಮಗ್ರ ತನಿಖೆ ನಡೆಸಿ ಮೃತರಿಗೆ ನ್ಯಾಯ ಒದಗಿಸಬೇಕು ಎಂಬುದು ಕುಟುಂಬಸ್ಥರು ಹಾಗೂ ಸಾರ್ವಜನಿಕರ ಒತ್ತಾಯವಾಗಿದೆ.

# ಹಗರಿಬೊಮ್ಮನಹಳ್ಳಿ: 95 ಕುಟುಂಬಗಳಿಗೆ ಹಕ್ಕು ಪತ್ರಕ್ಕೆ ಆಗ್ರಹಿಸಿ ಕೂಲಿ ಕಾರ್ಮಿಕರ ಪ್ರತಿಭಟನೆ



**ಹೊಸಪೇಟೆ ಧ್ವನಿ ನ್ಯೂಸ್ :**

**ಹಗರಿಬೊಮ್ಮನಹಳ್ಳಿ:** ಗದ್ದಿಕೆರೆ ಗ್ರಾಮದ ಪ್ಲಾಟ್‌ನಲ್ಲಿ 18 ವರ್ಷಗಳಿಂದ ವಾಸವಿದ್ದರೂ ಹಕ್ಕುಪತ್ರ ನೀಡಿಲ್ಲ ಎಂದು ಆರೋಪಿಸಿ, 95 ಕುಟುಂಬಗಳ ಕೂಲಿ ಕಾರ್ಮಿಕರು ಬುಧವಾರ ಪ್ರತಿಭಟನೆ ನಡೆಸಿದರು.

ಗ್ರಾಮದ ಕೆರೆಯ ಅಂಗಳದಲ್ಲಿ ವಿಬಿಜಿ ರಾಮ್‌ಜಿ ಕೆಲಸದಲ್ಲಿ ತೊಡಗಿದ್ದ ಕಾರ್ಮಿಕರು ಪ್ರತಿಭಟಿಸಿದರು.

ಈ ವೇಳೆ ಗ್ರಾಮೀಣ ಕೂಲಿ ಕಾರ್ಮಿಕರ ಸಂಘದ ರಾಜ್ಯ ಸಂಚಾಲಕ ಕೋಗಳಿ ಉಮೇಶ ಮಾತನಾಡಿ, ಸರ್ಕಾರ ನಿವೇಶನ ಹಂಚಿಕೆ ಮಾಡದೆ ಕೆಲವರಿಗೆ ಸರ್ಕಾರದಿಂದ ಮನೆ ನಿರ್ಮಾಣವಾಗಿದ್ದು, ಹಲವರು ಸ್ವಂತ ಮನೆ ಕಟ್ಟಿಕೊಂಡಿದ್ದಾರೆ. ಆದರೆ ನಿಜವಾದ ವಸತಿ ರಹಿತರಿಗೆ ಹಕ್ಕುಪತ್ರ ನೀಡಿಲ್ಲ. ಇದು ಗ್ರಾ.ಪಂನ ನಿರ್ಲಕ್ಷ್ಯ. ವಿಬಿಜಿ ರಾಮ್‌ಜಿ ಅಡಿಯಲ್ಲಿ ಕೆಲಸ ಮಾಡಿರುವ ಟ್ರ್ಯಾಕ್ಟರ್‌ಗಳಿಗೆ ಹಣ ಸಂದಾಯವಾಗಿಲ್ಲ, ಮಾಲೀಕರು ಮುಂದಿನ ವಾರದಿಂದ ಟ್ರ್ಯಾಕ್ಟರ್ ಕಳುಹಿಸುವುದಿಲ್ಲ ಎಂದಿದ್ದಾರೆ. ಬೇಡಿಕೆ ಈಡೇರಿಸಬೇಕು ಎಂದರು.

ತಾಲ್ಲೂಕು ಸಂಚಾಲಕಿ ಸಿ.ಸುಧಾ ಮಾತನಾಡಿ, ಕೂಲಿ ಕಾರ್ಮಿಕರಿಗೆ 3 ತಿಂಗಳಿಂದ ಕೂಲಿ ಹಣ ನೀಡಿಲ್ಲ, ವಿಳಂಬ ಭತ್ಯೆ ಹಾಗೂ ಟ್ರ್ಯಾಕ್ಟರ್‌ನಿಂದ ಹೂಳು ಸಾಗಿಸಿದ ಎರಡು ವರ್ಷದ ಹಣ ಬಾಕಿ ಇದೆ ಎಂದರು.

ಸ್ಥಳಕ್ಕೆ ಆಗಮಿಸಿದ ವಿಬಿಜಿ ರಾಮ್‌ಜಿ ಯೋಜನೆಯ ತಾಲ್ಲೂಕು ಸಹಾಯಕ ಅಧಿಕಾರಿ ರಮೇಶ ಮಹಾಲಿಂಗಪುರ ಅವರಿಗೆ ಮನವಿ ಸಲ್ಲಿಸಲಾಯಿತು. ಬೇಡಿಕೆಯನ್ನು ಮೇಲಾಧಿಕಾರಿಗಳ ಗಮನಕ್ಕೆ ತರುವುದಾಗಿ ಅವರು ತಿಳಿಸಿದರು.

ಪ್ರತಿಭಟನೆಯಲ್ಲಿ ಗ್ರಾಕೂಸ್ ತಾಲ್ಲೂಕು ಸಂಚಾಲಕಿ ರತ್ನಮ್ಮ, ಬಸಮ್ಮ, ಶೋಭಾ, ಮಂಜುಳಾ, ವನಜಾಕ್ಷಿ, ಲಕ್ಷ್ಮೀ, ಮಂಜುನಾಥ, ಸೋಗಿ ಹನುಮಂತಪ್ಪ, ಚೇತನ್, ರಂಗನಾಥ, ಅಡಿವೆಪ್ಪ, ಶ್ರುತಿ, ಗಂಗಮ್ಮ ಸೇರಿದಂತೆ ನೂರಾರು ಕಾರ್ಮಿಕರು ಭಾಗವಹಿಸಿದ್ದರು.

# ಈಶಾನ್ಯ ಶಿಕ್ಷಕರ ಮತಕ್ಷೇತ್ರ – ಬಿಜೆಪಿ ಅಭ್ಯರ್ಥಿ ಶಶಿಲ್ ನಮೋಶಿ ಪರ ಮಾಜಿ ಸಚಿವ ಶ್ರೀರಾಮುಲು ಪ್ರಚಾರ



**ಹೊಸಪೇಟೆ ಧ್ವನಿ ನ್ಯೂಸ್ :**

**ಹೊಸಪೇಟೆ:** ಈಶಾನ್ಯ ಶಿಕ್ಷಕರ ಮತಕ್ಷೇತ್ರ ಚುನಾವಣೆ–2026ರ ಬಿಜೆಪಿ ಅಭ್ಯರ್ಥಿ ಶಶಿಲ್ ಜಿ. ನಮೋಶಿ ಪರವಾಗಿ ಮಾಜಿ ಸಚಿವ ಬಿ. ಶ್ರೀರಾಮುಲು ಅವರು ಬುಧವಾರ ನಗರದ ವಿವಿಧ ಶಾಲಾ–ಕಾಲೇಜುಗಳಲ್ಲಿ ಮತಯಾಚನೆ ನಡೆಸಿದರು.

ಟಿ.ಬಿ.ಡ್ಯಾಮ್ ಸರ್ಕಾರಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜು, ಶ್ರೀ ಶಂಕರ್ ಆನಂದ ಸಿಂಗ್ ಕಾಲೇಜು, ಎಂ.ಪಿ. ಪ್ರಕಾಶನಗರದ ಶ್ರೀ ಮಾರ್ಕಂಡೇಶ್ವರ ಆಂಗ್ಲ ಮಾಧ್ಯಮ ಪ್ರೌಢಶಾಲೆಗಳಿಗೆ ಭೇಟಿ ನೀಡಿ ಶಿಕ್ಷಕರು ಮತ್ತು ಉಪನ್ಯಾಸಕರನ್ನು ಭೇಟಿಯಾಗಿ ಕರಪತ್ರ ನೀಡಿ ಮತಯಾಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಎಸ್. ಸಂಜೀವ ರೆಡ್ಡಿ., ರಾಜ್ಯ ಬಿಜೆಪಿ ಒಬಿಸಿ ಮೋರ್ಚಾ ಉಪಾಧ್ಯಕ್ಷ ಅಯ್ಯಳಿ ತಿಮ್ಮಪ್ಪ, ಜಿಲ್ಲಾ ವಕ್ತಾರ ಅಶೋಕ್ ಜೀರೆ, ಜಿಲ್ಲಾ ಉಪಾಧ್ಯಕ್ಷ ಸಂದೀಪ್ ಸಿಂಗ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಕೆ.ಎಸ್. ರಾಘವೇಂದ್ರ, ಮಂಡಲ ಅಧ್ಯಕ್ಷ ಶಂಕರ್ ಮೇಟಿ ಕೃಷ್ಣನಾಯ್ಕ್, ವಾಲ್ಮೀಕಿ ಸಮಾಜದ ಮುಖಂಡ ಜಂಬಯ್ಯ ನಾಯಕ, ನಗರಸಭೆ ಅಧ್ಯಕ್ಷ ಎನ್. ರೂಪೇಶ್ ಕುಮಾರ್, ಸ್ಥಾಯಿ ಸಮಿತಿ ಅಧ್ಯಕ್ಷ ಸರವಣ, ಸದಸ್ಯರಾದ ತಾರಿಹಳ್ಳಿ ಜಂಭುನಾಥ, ಹನುಮಂತಪ್ಪ ಬುಜ್ಜಿ, ಮಂಡಲ ಪ್ರಧಾನ ಕಾರ್ಯದರ್ಶಿ ಮಧುರಚನ್ನಶಾಸ್ತ್ರಿ ಹಿರೇಮಠ್, ಚಿದಾನಂದ ಸೂಗೂರು, ತಿರುಮಲೇಶ್, ಇ.ಶ್ರೀನಿವಾಸ, ಪ್ರಕಾಶ್ ಗುಡಿ, ಎ.ಕೆ. ವಿಜಯೇಂದ್ರ, ರಾಜಶೇಖರ್ ಎಸ್, ಯುವ ಮೋರ್ಚಾ ಅಧ್ಯಕ್ಷ ಹೆಚ್. ರಾಘವೇಂದ್ರ ಸೇರಿದಂತೆ ಇತರರು ಇದ್ದರು.

## ಹಣದ ಆಸೆಗೆ ಕೊಲೆ ಪ್ರಕರಣ : ಜೀವಾವಧಿ ಶಿಕ್ಷೆ, ದಂಡ

**ಕಲಬುರಗಿ:** ಅಫಜಲಪುರ ತಾಲ್ಲೂಕಿನ ದೇವಲ ಗಾಣಗಾಪುರದಲ್ಲಿ ಹಣದ ಆಸೆಗೆ ತಲೆ ಮೇಲೆ ಕಲ್ಲು ಎತ್ತಿಹಾಕಿ ವ್ಯಕ್ತಿಯನ್ನು ಕೊಂದ ಪ್ರಕರಣದಲ್ಲಿ ಮಹಾರಾಷ್ಟ್ರದ ವ್ಯಕ್ತಿಗೆ ಇಲ್ಲಿನ ಜಿಲ್ಲಾ ಕೋರ್ಟ್ ಜೀವಾವಧಿ ಶಿಕ್ಷೆ ಹಾಗೂ ಒಟ್ಟು 30 ಸಾವಿರ ದಂಡ ವಿಧಿಸಿದೆ.

ಮಹಾರಾಷ್ಟ್ರದ ಸತಾರಾ ಜಿಲ್ಲೆಯ ನವನಾಥ ಮಹಾಪುರೆ( 33) ಶಿಕ್ಷೆಗೆ ಒಳಗಾದ ಅಪರಾಧಿ.

ಮಹಾರಾಷ್ಟ್ರದ ಪುಣೆ ಜಿಲ್ಲೆಯ ಯುವಕ ಮಹೇಶ ಅಂಕುಶ ಕೋಲತೆ ( 29) ಎಂಬಾತನಿಗೆ ಊರೂರು ಸಂಚರಿಸುವ ಹವ್ಯಾಸವಿತ್ತು. ಅದರಂತೆ ಆತ ದೇವಲಗಾಣಗಾಪುರದ ದತ್ತಾತ್ರೇಯ ದೇವಸ್ಥಾನಕ್ಕೆ ಬಂದಿದ್ದ. ಬಸ್‌ನಲ್ಲಿ ಆತನಿಗೆ ನವನಾಥ ಮಹಾಪುರೆಯ ಪರಿಚಯವಾಗಿತ್ತು. ಇಬ್ಬರಿಗೂ ಮದ್ಯ ಸೇವನೆಯ ಚಟವಿತ್ತು. ಅದರಂತೆ ಗಾಣಗಾಪುರದ ಬಾರ್‍ವೊಂದರಲ್ಲಿ ಮದ್ಯ ಖರೀದಿಗೆ ಹೋಗಿದ್ದರು. ಈ ವೇಳೆ ಮಹೇಶ ಬಳಿ ಸಾಕಷ್ಟು ಹಣ ಇರುವುದನ್ನು ಕಂಡ ನವನಾಥ ಕೊಲೆಗೆ ನಿರ್ಧರಿಸಿದ್ದ.2024ರ ಜೂನ್ 25ರಂದು ರಾತ್ರಿ ತಲೆ ಮೇಲೆ ಕಲ್ಲು ಎತ್ತಿಹಾಕಿ ಕೊಲೆ ಮಾಡಿದ್ದ.ಮಹೇಶ ಬಳಿಯಿದ್ದ 3,600 ರೂ.ಕದ್ದು ಪರಾರಿಯಾಗಿದ್ದ.

ಈ ಪ್ರಕರಣದ ತನಿಖೆ ನಡೆಸಿದ್ದ ಅಫಜಲಪುರ ಠಾಣೆಯ ಆಗಿನ ಸಿಪಿಐ ಚನ್ನಯ್ಯ ಎಸ್.ಹಿರೇಮಠ, ಡಿಎನ್‌ಎ ವರದಿ, ವಿಧಿವಿಜ್ಞಾನ ಪ್ರಯೋಗಾಲಯ ವರದಿ, ಸಿಸಿ ಟಿವಿ ಕ್ಯಾಮೆರಾ ದೃಶ್ಯಾವಳಿಗಳು ಮತ್ತಿತ್ತರ ಪುರಾವೆ ಆಧರಿಸಿ ಕೋರ್ಟ್‌ಗೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ 3ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶೆ ಸರಿತಾ ಡಿ. ಅವರು ಅಪರಾಧಿಗೆ ಶಿಕ್ಷೆ ವಿಧಿಸಿ ಆದೇಶಿಸಿದ್ದಾರೆ.ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ನಾಗಪ್ಪ ಸಿ.ನಾಕಮನ್ ಅವರು ವಾದ ಮಂಡಿಸಿದರು.

# ವಿದ್ಯಾರ್ಥಿಗಳು ಮೌಲ್ಯಾಧಾರಿತ ಬದುಕು ರೂಪಿಸಿಕೊಳ್ಳಲಿ : ಕೆ. ಕೊಟ್ರೇಶ್

**ಹೊಸಪೇಟೆ ಧ್ವನಿ ನ್ಯೂಸ್ :**

**ಹರಪನಹಳ್ಳಿ:** ವಿದ್ಯಾರ್ಥಿಗಳು ಸಾಹಿತ್ಯಾಸಕ್ತಿ ಬೆಳೆಸಿಕೊಂಡು, ಸಾಹಿತ್ಯದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜಕ್ಕೆ ಮಾದರಿಯಾಗಬೇಕು ಎಂದು ಎಡಿಬಿ ಪ್ರಥಮ ದರ್ಜೆ ಕಾಲೇಜು ಆಡಳಿತ ಮಂಡಳಿ ಅಧ್ಯಕ್ಷ ಕೆ. ಕೊಟ್ರೇಶ್ ಹೇಳಿದರು.

ಪಟ್ಟಣದ ಎಡಿಬಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ದಾನಿಗಳ ದಿನಾಚರಣೆ ಹಾಗೂ ವಿವಿಧ ಸಾಂಸ್ಕೃತಿಕ ಸಂಘಗಳ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಜಾಗತಿಕ ಮಟ್ಟದ ಸಾಂಸ್ಕೃತಿಕ ಚಟುವಟಿಕೆಗಳ ಬಗ್ಗೆ ಅರಿವು ಮೂಡಿಸಿಕೊಳ್ಳಬೇಕು ಎಂದರು. ದೇಶ, ವಿದೇಶ ಸಾಂಸ್ಕೃತಿಕ ವೈವಿಧ್ಯತೆಗಳು ಒಂದು ಸಂಸ್ಕೃತಿಯ ಬೆಳವಣಿಗೆಗೆ ದಾರಿಯಾಗುತ್ತದೆ. ವಿದ್ಯಾರ್ಥಿಗಳು ಸಾಂಸ್ಕೃತಿಕ ಹಬ್ಬಗಳಲ್ಲಿ ಭಾಗವಹಿಸುವ ಮೂಲಕ ಸಾಮಾಜಿಕ ಸ್ವಾಸ್ಥ್ಯ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ತೊಡಗಿಸಿಕೊಳ್ಳಬೇಕು ಎಂದರು.




ಪ್ರಾಂಶುಪಾಲ ಡಾ. ಎಸ್.ಎಂ. ಸಿದ್ದಲಿಂಗಮೂರ್ತಿ ಮಾತನಾಡಿ, ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯಲ್ಲಿ ಸಾಂಸ್ಕೃತಿಕ ಚಟುವಟಿಕೆಗಳು ಬಹಳ ಮುಖ್ಯ ಪಾತ್ರ ವಹಿಸುತ್ತವೆ. ವಿದ್ಯಾರ್ಥಿಗಳು ಸಾಂಸ್ಕೃತಿಕ ಸಂಘಗಳ ವೇದಿಕೆಯನ್ನು ಬಳಸಿಕೊಂಡು ತಮ್ಮ ಪ್ರತಿಭೆ ಅನಾವರಣಗೊಳಿಸಬೇಕು ಎಂದರು.

ದಾನಿಗಳ ಕುಟುಂಬದ ಸದಸ್ಯ ಅಂಬ್ಲಿ ಯೋಗೇಶ್ ಪ್ರಸಾದ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಸಾಂಸ್ಕತಿಕ ಸಂಘಗಳು ಜಾತಿ, ಧರ್ಮ, ಭಾಷೆಗಳ ಗಡಿಗಳನ್ನು ಮೀರಿ ಜನರನ್ನು ಒಟ್ಟುಗೂಡಿಸುವ ಮತ್ತು ಸಾಮಾಜಿಕ ಸಾಮರಸ್ಯವನ್ನು ಬೆಳೆಸುವ ವೇದಿಕೆಯಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಐಕ್ಯೂಎಸಿ ಸಂಚಾಲಕ ಡಾ. ಮಧುಕುಮಾರ್ ಡಿ.ಜೆ.

ಆಡಳಿತ ಮಂಡಳಿ ಸದಸ್ಯ ಅರುಂಡಿ ನಾಗರಾಜ್, ಪಾಟೀಲ್ ಜಗದೀಶ್ ಗೌಡ್ರು, ಎಸ್ ಎಸ್ ಹೆಚ್ ಜೈನ ಕಾಲೇಜ್ ಪ್ರಾಂಶುಪಾಲ ಡಾ. ಶರತ್ ಎ ಎಂ, ಪ್ರಾಧ್ಯಾಪಕರಾದ ಡಾ. ಅಣ್ಣೇಶ್ ಆರ್., ಬಸವಲಿಂಗಪ್ಪ ಕೆ., ನವಾಜ್ ಭಾಷಾ, ಡಾ. ರವಿಕುಮಾರ್ ಟಿ.ಆರ್., ಡಾ. ಸುವರ್ಣ ಅರುಂಡಿ, ವೆಂಕಟೇಶ್ ಎಚ್.ಎಸ್.ಡಾ. ಗೋವರ್ಧನ್ ಜಿ.ವೈ.ಶಿವಕುಮಾರ್ ಬಾಗಳಿ ಸೇರಿದಂತೆ ಇತರರು ಇದ್ದರು.

# ಅ.24ರಂದು ಹಂಪಿಗೆ ಯುನೆಸ್ಕೊ ತಂಡ ಭೇಟಿ : ಜಿಲ್ಲಾಧಿಕಾರಿ

**ಹೊಸಪೇಟೆ ಧ್ವನಿ ನ್ಯೂಸ್ :**

**ವಿಜಯನಗರ (ಹೊಸಪೇಟೆ):** ವಿಶ್ವವಿಖ್ಯಾತ ಹಂಪಿಯ ಐತಿಹಾಸಿಕ ಸ್ಮಾರಕಗಳ ಸಂರಕ್ಷಣೆ, ನಿರ್ವಹಣೆ ಹಾಗೂ ವಿಶ್ವ ಪಾರಂಪರಿಕ ತಾಣದ ಮಾರ್ಗಸೂಚಿಗಳ ಪಾಲನೆ ಕುರಿತು ಪರಿಶೀಲನೆ ನಡೆಸಲು ಯುನೆಸ್ಕೊ (ಯುನೆಸ್ಕೋ) ತಜ್ಞರ ತಂಡವು ಅಕ್ಟೋಬರ್ 24ರಂದು ಹಂಪಿಗೆ ಭೇಟಿ ನೀಡಲಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಯುನೆಸ್ಕೊ ತಂಡವು ಅಕ್ಟೋಬರ್ 22ರಂದು ದೆಹಲಿಗೆ ಆಗಮಿಸಲಿದ್ದು, ಅಕ್ಟೋಬರ್ 24ರಂದು ಹಂಪಿಗೆ ಭೇಟಿ ನೀಡಲಿದೆ. ಅಕ್ಟೋಬರ್ 27ರವರೆಗೆ ಹಂಪಿ ಹಾಗೂ ಸುತ್ತಮುತ್ತಲಿನ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದೆ ಎಂದು ಮಾಹಿತಿ ನೀಡಿದರು.

ಅಂತರರಾಷ್ಟ್ರೀಯ ಪಾರಂಪರಿಕ ತಜ್ಞರಾದ (ಇಂಟರ್ನ್ಯಾಷನಲ್ ಹೆರಿಟೇಜ್ ಎಕ್ಸ್ಪರ್ಟ್) ಜಾರ್ಜ್ ಅಬುಂಗ್, ಇಚಿಟ ಶಿಮೊಡ ಹಾಗೂ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ (ಎಎಸ್ ಐ) ಹೆಚ್ಚುವರಿ ಮಹಾನಿರ್ದೇಶಕ ಜಾನ್ವಿಜ್ ಶರ್ಮಾ ಅವರನ್ನೊಳಗೊಂಡ ತಂಡವು ಹಂಪಿಯ ಐತಿಹಾಸಿಕ ಸ್ಮಾರಕಗಳು, ದೇವಾಲಯಗಳು ಹಾಗೂ ಪ್ರಾಚೀನ ಅವಶೇಷಗಳ ಸಂರಕ್ಷಣೆಯ ಸ್ಥಿತಿಗತಿಗಳನ್ನು ಅವಲೋಕಿಸಲಿದೆ ಎಂದರು.

ವಿಜಯನಗರ ಸಾಮ್ರಾಜ್ಯದ ಭವ್ಯ ಇತಿಹಾಸ, ವಾಸ್ತುಶಿಲ್ಪದ ವೈಭವ ಹಾಗೂ ಅಪಾರ ಸಾಂಸ್ಕೃತಿಕ ಪರಂಪರೆಯನ್ನು ಹೊಂದಿರುವ ಹಂಪಿಯ ಸಂರಕ್ಷಣೆಯ ದೃಷ್ಟಿಯಿಂದ ಈ ಭೇಟಿ ಮಹತ್ವ ಪಡೆದುಕೊಂಡಿದೆ. ಸ್ಮಾರಕಗಳ ನಿರ್ವಹಣೆ, ವಿಶ್ವ ಪಾರಂಪರಿಕ ತಾಣದ ನಿಯಮಗಳ ಪಾಲನೆ ಹಾಗೂ ಪಾರಂಪರಿಕ ತಾಣದ ಸಂರಕ್ಷಣೆಗೆ ಸಂಬಂಧಿಸಿದ ವಿವಿಧ ಅಂಶಗಳ ಪರಿಶೀಲನೆಗೆ ಈ ಭೇಟಿ ಸಹಕಾರಿಯಾಗಲಿದೆ.



ಹಂಪಿಯ ಐತಿಹಾಸಿಕ ಮಹತ್ವಕ್ಕೆ ಧಕ್ಕೆಯಾಗದಂತೆ ಪ್ರವಾಸೋದ್ಯಮ ಅಭಿವೃದ್ಧಿಪಡಿಸುವುದು, ಪ್ರಾಚೀನ ಸ್ಮಾರಕಗಳನ್ನು ಮುಂದಿನ ಪೀಳಿಗೆಗೆ ಉಳಿಸುವುದು ಹಾಗೂ ಪಾರಂಪರಿಕ ತಾಣದ ನಿರ್ವಹಣೆಯನ್ನು ಸುಧಾರಿಸುವ ನಿಟ್ಟಿನಲ್ಲಿ ತಂಡದ ಪರಿಶೀಲನೆ ಮಹತ್ವದ್ದಾಗಿದೆ. ತಂಡದ ಭೇಟಿ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಅಗತ್ಯ ಸಿದ್ಧತೆಗಳನ್ನು ಕೈಗೊಂಡಿದೆ.

ಬೇಸಿಗೆ ಎದುರಿಸಲು ಜಿಲ್ಲಾಡಳಿತ ಸನ್ನದ್ಧ ಮುಂಬರುವ ಬೇಸಿಗೆ ಅವಧಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಈ ಸಂಬಂಧ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಆಪತ್ಕಾಲೀನ ಯೋಜನೆ (ಕಂಟಿಜೆನ್ಸಿ ಪ್ಲಾನ್) ಸಿದ್ಧಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಬೇಸಿಗೆಯಲ್ಲಿ ಕೊಳವೆಬಾವಿಗಳಲ್ಲಿ ನೀರಿನ ಲಭ್ಯತೆ ಕಡಿಮೆಯಾಗುವ ಪ್ರದೇಶಗಳಲ್ಲಿ ಅಗತ್ಯಕ್ಕೆ ಅನುಗುಣವಾಗಿ ಟ್ರ್ಯಾಕ್ಟರ್‌ಗಳ ಮೂಲಕ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳಲಾಗುವುದು. ಈ ನಿಟ್ಟಿನಲ್ಲಿ ಸ್ಥಳೀಯ ಆಡಳಿತ ಸಂಸ್ಥೆಗಳ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಅಧಿಕಾರಿಗಳು ಸಲ್ಲಿಸುವ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಅಗತ್ಯ ಅನುಮೋದನೆ ನೀಡಲಾಗುವುದು ಎಂದು ಹೇಳಿದರು.

ರೈತರಿಗೆ ಅಗತ್ಯ ಮಾರ್ಗದರ್ಶನ ಬೇಸಿಗೆ ಹಿನ್ನೆಲೆಯಲ್ಲಿ ಕೃಷಿ ಚಟುವಟಿಕೆಗಳಲ್ಲಿಯೂ ಮುನ್ನೆಚ್ಚರಿಕೆ ವಹಿಸಲಾಗುವುದು. ರೈತ ಸಂಪರ್ಕ ಕೇಂದ್ರಗಳನ್ನು ಸಕ್ರಿಯಗೊಳಿಸಿ, ಮುಂದಿನ ದಿನಗಳಲ್ಲಿ ರೈತರಿಗೆ ಸೂಕ್ತ ಬೆಳೆಗಳ ಆಯ್ಕೆ ಹಾಗೂ ಕೃಷಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಅಗತ್ಯ ಮಾರ್ಗದರ್ಶನ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಂಪಿ ಅಭಿವೃದ್ಧಿ ಪ್ರಾಧಿಕಾರ ಆಯುಕ್ತ ಇ. ಬಾಲಕೃಷ್ಣಪ್ಪ ಇದ್ದರು.

## ಅ.15ರಂದು ಸಾಂಸ್ಕೃತಿಕ, ಕ್ರೀಡೆ ಉದ್ಘಾಟನಾ ಸಮಾರಂಭ

**ಚಿತ್ರದುರ್ಗ :** ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ವತಿಯಿಂದ 2026–27ನೇ ಸಾಲಿನ ಸಾಂಸ್ಕೃತಿಕ, ಕ್ರೀಡೆ, ಎನ್‌ಸಿಸಿ, ಎನ್‌ಎಸ್‌ಎಸ್, ಯುವ ರೆಡ್‌ಕ್ರಾಸ್ ಹಾಗೂ ರೋವರ್ಸ್ ಮತ್ತು ರೇಂಜರ್ಸ್ ಚಟುವಟಿಕೆಗಳ ಉದ್ಘಾಟನಾ ಸಮಾರಂಭವನ್ನು ಇದೇ ಅ.15ರಂದು ಬೆಳಿಗ್ಗೆ 10.30ಕ್ಕೆ ನಗರದ ಸರ್ಕಾರಿ ಕಲಾ ಕಾಲೇಜು ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಇತಿಹಾಸ ನಿವೃತ್ತ ಪ್ರಾಧ್ಯಾಪಕ ಡಾ.ಸಿದ್ದಲಿಂಗಯ್ಯ ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಸಾರ್ವಜನಿಕ ಸೇವಾ ವೃತ್ತಿಪರ ತರಬೇತುದಾರ ಎಂ.ಗಜೇಂದ್ರ ಭಾಗವಹಿಸುವರು. ಸರ್ಕಾರಿ ಕಲಾ ಕಾಲೇಜು ಪ್ರಾಂಶುಪಾಲೆ ಡಾ.ತಾರಿಣಿ ಶುಭದಾಯಿನಿ ಅಧ್ಯಕ್ಷತೆ ವಹಿಸುವರು. ಕಾಲೇಜಿನ ಪರೀಕ್ಷಾ ನಿಯಂತ್ರಣಾಧಿಕಾರಿ ಪ್ರೊ. ಎಸ್.ಬಿ.ಶಿವಪ್ರಸಾದ್, ಕಾಲೇಜು ಅಧ್ಯಾಪಕರ ಸಂಘ ಕಾರ್ಯದರ್ಶಿ ಡಾ.ಹನುಮಂತಪ್ಪ, ಸಾಂಸ್ಕೃತಿಕ ಸಮಿತಿ ಸಂಚಾಲಕ ಪ್ರೊ.ಬಿ.ಇ.ಜಗನ್ನಾಥ, ಅಧೀಕ್ಷಕ ಎ.ಸಿ.ಹರೀಶ್ ಬಾಬು ರೆಡ್ಡಿ ಉಪಸ್ಥಿತಿವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಆರಂಭಿಕ ಹಂತದಲ್ಲೇ ಪತ್ತೆಯಾದರೆ ಕ್ಯಾನ್ಸರ್ ಗುಣ ಸಾಧ್ಯ

## ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶಮೀರ್ ಪಿ.ನಂದ್ಯಾಲ್

**ಚಿತ್ರದುರ್ಗ :** ಕ್ಯಾನ್ಸರ್ ರೋಗವನ್ನು ಆರಂಭಿಕ ಹಂತದಲ್ಲೇ ಪತ್ತೆ ಹಚ್ಚಿದರೆ ಅದನ್ನು ಸಂಪೂರ್ಣವಾಗಿ ಗುಣಪಡಿಸಲು ಸಾಧ್ಯವಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶಮೀರ್ ಪಿ. ನಂದ್ಯಾಲ್ ತಿಳಿಸಿದರು.

ಚಿತ್ರದುರ್ಗ ತಾಲ್ಲೂಕಿನ ಮೆದೇಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ಶಾಖೆ, ರೋಟರಿ ಕ್ಲಬ್ ಚಿತ್ರದುರ್ಗ ಫೋರ್ಟ್, ದಾವಣಗೆರೆಯ ವಿಶ್ವಾರಾಧ್ಯ ಕ್ಯಾನ್ಸರ್ ಆಸ್ಪತ್ರೆ, ಚಿತ್ರದುರ್ಗದ ಸೌಖ್ಯ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ ಎಸ್.ಜೆ.ಎಂ. ದಂತ ಕಾಲೇಜು ಮತ್ತು ಆಸ್ಪತ್ರೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ 'ಉಚಿತ ಕ್ಯಾನ್ಸರ್ ಜಾಗೃತಿ, ತಪಾಸಣೆ ಹಾಗೂ ಆರೋಗ್ಯ ತಪಾಸಣಾ ಶಿಬಿರ' ಉದ್ಘಾಟಿಸಿ ಅವರು ಮಾತನಾಡಿದರು.



ಕ್ಯಾನ್ಸರ್‌ನಿಂದ ಪಾರಾಗಲು ಸಾರ್ವಜನಿಕರು ತಂಬಾಕು, ಗುಟ್ಕಾ ಹಾಗೂ ಮದ್ಯಪಾನದಂತಹ ದುರಭ್ಯಾಸಗಳನ್ನು ತ್ಯಜಿಸಬೇಕು. ಈ ಮಾರಕ ರೋಗದ ಕುರಿತು ಗ್ರಾಮೀಣ ಭಾಗದ ಜನರಲ್ಲಿ ನಿರಂತರ ಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯವಾಗಿದೆ ಎಂದರು. ರೆಡ್ ಕ್ರಾಸ್ ರಾಜ್ಯ ಆಡಳಿತ ಮಂಡಳಿ ಸದಸ್ಯ ಅನಂತರೆಡ್ಡಿ ಮಾತನಾಡಿ, ಗ್ರಾಮೀಣ ಜನರು ಇಂತಹ ಆರೋಗ್ಯ ಶಿಬಿರಗಳ ಸದುಪಯೋಗವನ್ನು ಪಡೆದುಕೊಂಡು ತಮ್ಮ ಆರೋಗ್ಯದ ಕಡೆಗೆ ಗಮನ ಹರಿಸಬೇಕು ಎಂದರು.

ರೋಟರಿ ಕ್ಲಬ್ ಚಿತ್ರದುರ್ಗ ಫೋರ್ಟ್ ಅಧ್ಯಕ್ಷ ಜಗನ್ನಾಥ ಶೆಟ್ಟಿ ಪ್ರಸ್ತಾವಿಕವಾಗಿ ಮಾತನಾಡಿದರು. ಈ ಉಚಿತ ಶಿಬಿರದಲ್ಲಿ ಮೆದೇಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ 200ಕ್ಕೂ ಹೆಚ್ಚು ಸಾರ್ವಜನಿಕರಿಗೆ ಬಾಯಿ ಕ್ಯಾನ್ಸರ್, ಕ್ಯಾನ್ಸರ್ ತಪಾಸಣೆ, ರಕ್ತದೊತ್ತಡ, ಮಧುಮೇಹ ಹಾಗೂ ದಂತ ತಪಾಸಣೆ ನಡೆಸಲಾಯಿತು. ಅಲ್ಲದೆ, ಅಗತ್ಯವಿದ್ದ ರೋಗಿಗಳಿಗೆ ಸ್ಥಳದಲ್ಲೇ ಉಚಿತವಾಗಿ ಔಷಧಿಗಳನ್ನು ವಿತರಿಸಲಾಯಿತು.

Hosapete Dhwani Kannada Daily Editor, Printer, Publisher & Owned By K. Prakash Kakubalu, 120, 1ST Ward, Kakubal Post Hospet, Ballary, Dist : Vijayanagara Karnataka State,
Printed at Dwaraka Printers & Publishers, Plot No. 12, Opp. Govt. Girls Hostel, GaneshaNagara Koppal-583231 Koppal District, Karnataka State,
e-mail : hosapetedhwani32026@gmail.com, Cell : 9342568684